ಸಂಪುಟ: 14 Volume | ಸಂಚಿಕೆ: 52 Issue | ಪುಟಗಳು 08 Pages | ಶುಕ್ರವಾರ 29 ಮೇ 2026 | ₹4 | PRGINO.120927 (RNINO:KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ಕಾಲದ ಮರಳಿನಲ್ಲಿ ಹೆಜ್ಜೆಗುರುತುಗಳನ್ನು ಬಿಡು. ಕಾಲನ್ನೆಳೆಯುತ್ತಾ ನಡೆಯಬೇಡ.

–ಎ.ಪಿ.ಜೆ.ಅಬ್ದುಲ್ ಕಲಾಂ




ಸಚಿವ ಜಮೀರ್ ಅಹಮದ್ ಖಾನ್ ಅವರು ಚಾಮರಾಜಪೇಟೆ ಈದ್ಗ ಮೈದಾನದಲ್ಲಿ ಬಕ್ರೀದ್ ಪ್ರಯುಕ್ತ ಪ್ರಾರ್ಥನೆ ಯಲ್ಲಿ ಪಾಲ್ಗೊಂಡರು. ನಟ ಜೈದ್ ಖಾನ್, ಕೆ ಎಂ ಡಿಸಿ ಅಧ್ಯಕ್ಷ ಅಲ್ತಾಫ್ ಖಾನ್, ಮುಖಂಡರಾದ ಡಿಸಿ ರಮೇಶ್, ಅಪ್ಪೋಡ ಚಂದ್ರಶೇಖರ, ಗೋವಿಂದರಾಜು, ರವಿಪ್ರಸಾದ್, ವಿನಾಯಕ್, ಗೌಸಿ ಉಪಸ್ಥಿತರಿದ್ದರು.

## ಡಿಸಿಎಂ ಮಾಡಲು ಒತ್ತಾಯ



ಭಾಲ್ಕಿ: ಅರಣ್ಯ, ಪರಿಸರ ಹಾಗು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆಯವರಿಗೆ ಉಪಮುಖ್ಯಮಂತ್ರಿ ಮಾಡಬೇಕು ಎಂದು ಖಟಕಚಿಂಚೋಳಿಯ ಹುಗ್ಗೆಳ್ಳಿ ಹಿರೇಮಠದ ಶ್ರೀ ಬಸವಲಿಂಗ ಸ್ವಾಮೀಜಿ ಒತ್ತಾಯಿಸಿದರು. ಈ ಕುರಿತು ಪ್ರಕಟಣೆ ನೀಡಿದ ಅವರು, ಅಖಿಲ ಭಾರತ ವೀರಶೈವ ಮಹಾಸಭಾದ ಅಧ್ಯಕ್ಷರೂ ಆದ ಸಚಿವ ಈಶ್ವರ ಖಂಡ್ರೆಯವರು ಎಲ್ಲಾ ವರ್ಗದವರ ಜನನಾಯಕರಾಗಿದ್ದಾರೆ. ಸರ್ವ ಜಾತಿ, ಜನಾಂಗದವರ ಮನದಲ್ಲಿ ಇರುವ ಈಶ್ವರ ಖಂಡ್ರೆಯವರು ಉಪಮುಖ್ಯಮಂತ್ರಿಯಾದರೆ ಕಾಂಗ್ರೆಸ್ ಪಕ್ಷಕ್ಕೆ ಬಲ ಬರುತ್ತದೆ. ಹೀಗಾಗಿ ಬರುವ ಸಚಿವ ಸಂಪುಟದಲ್ಲಿ ಈಶ್ವರ ಖಂಡ್ರೆಯವರಿಗೆ ಉಪಮುಖ್ಯಮಂತ್ರಿಮಾಡಬೇಕು ಎಂದು ಆಗ್ರಹಿಸಿದ್ದಾರೆ.



ಬಸವಕಲ್ಯಾಣ: ಇಲ್ಲಿನ ಮುಸ್ಲಿಂ ಜನಾಂಗದ ಬಕ್ರೀದ ಹಬ್ಬದ ನಿಮಿತ್ಯವಾಗಿ ಈದ್ಗಾ ಮೈದಾನದಲ್ಲಿ ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದ್ದರು.

## ರೈತ ಸಂಪರ್ಕ ಕೇಂದ್ರಕ್ಕೆ ಭೇಟಿ



ಬಸವಕಲ್ಯಾಣ: ತಾಲ್ಲೂಕಿನ ಹಾರಕೂಡ ಹಾಗೂ ಅಲಗೂಡ ಗ್ರಾಮಗಳಲ್ಲಿ ರೈತ ಸಂಪರ್ಕ ಕೇಂದ್ರ–ಕ್ಕೆ ಮಾಜಿ ವಿಧಾನ ಪರಿಷತ್ ಸದಸ್ಯರಾದ ವಿಜಯಸಿಂಗ ಅವರು ಭೇಟಿ ನೀಡಿ ರೈತರ ಸಮಸ್ಯೆ ಆಲಿಸಿ ಬೀಜ ವಿತರಣೆಯಲ್ಲಿ ಕೊರತೆ ಆಗದಂತೆ ನೋಡಿಕೊಳ್ಳಲು ಅಧಿಕಾರಿಗಳಿಗೆ ತಿಳಿಸಿದರು. ಈ ಸಂಧರ್ಭದಲ್ಲಿ ಮುಖಂಡರಾದ ಸಿದ್ರಾಮಪ್ಪ ಗುದಗೆ, ಶರಣು ಆಲಗುಡ, ಬಸು ಬಿರಾದಾರ, ಕಲ್ಯಾಣರಾವ ಬೆಳಮಗಿ, ಧೂಳಪ್ಪ ಬುರಂಡೆ, ಸಂಜುಕುಮಾರ್ ಕಾಂಬಳೆ, ರಾಮಲಿಂಗ ರೆಡ್ಡಿ, ಸಂಜುಕುಮಾರ್ ದೇಗಾಂವ್, ಉಮೇಶ್ ರಸುರೆ, ಪುಂಡಲೀಕ, ಚಂದ್ರಕಾಂತ್ ಚವಾಣ್, ಗ್ರಾಮದ ಅನೇಕ ಮುಖಂಡರು, ರೈತರು ಉಪಸ್ಥಿತರಿದ್ದರು.

## ಕಾಂಗ್ರೆಸ್ ಶಾಸಕರಿಗೆ ಸಚಿವ ಸ್ಥಾನ: ಒತ್ತಾಯ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಕರ್ನಾಟಕ ಕಾಂಗ್ರೆಸ್ ಸರ್ಕಾರದಲ್ಲಿ ಸಚಿವ ಸಂಪುಟ ಪುನರ್‌ರಚನೆ ಚರ್ಚೆ ಜೋರಾಗಿರುವ ನಡುವೆಯೇ, ಬಳ್ಳಾರಿ ಜಿಲ್ಲೆ ಜಿಲ್ಲೆಯ ಕಾಂಗ್ರೆಸ್ ಶಾಸಕರಿಗೆ ಸಚಿವ ಸ್ಥಾನ ನೀಡಬೇಕು ಎಂಬ ಸಾರ್ವಜನಿಕ ಹಾಗೂ ಕಾರ್ಯಕರ್ತರ ಒತ್ತಾಯ ಹೆಚ್ಚಾಗಿದೆ. ವಿಶೇಷವಾಗಿ ಮಾಜಿ ಸಚಿವ ಬಿ. ನಾಗೇಂದ್ರ ಅವರ ಹೆಸರು ಹೆಚ್ಚು ಕೇಳಿಬರುತ್ತಿದೆ.

ಇತ್ತೀಚಿನ ವರದಿಗಳ ಪ್ರಕಾರ, ಮುಖ್ಯಮಂತ್ರಿ ಬದಲಾವಣೆ ಮತ್ತು ಸಂಪುಟ ವಿಸ್ತರಣೆ ಕುರಿತ ರಾಜಕೀಯ ಚಟುವಟಿಕೆಗಳ ನಡುವೆ ಬಳ್ಳಾರಿ ಭಾಗದ ಕಾಂಗ್ರೆಸ್ ನಾಯಕರಲ್ಲಿ ಹೊಸ ನಿರೀಕ್ಷೆ ಮೂಡಿದೆ. ಜಿಲ್ಲೆಯ ಕಾಂಗ್ರೆಸ್ ಕಾರ್ಯಕರ್ತರು "ಹೈದರಾಬಾದ್–ಕರ್ನಾಟಕ ಭಾಗಕ್ಕೆ ಸಮರ್ಪಕ ಪ್ರತಿನಿಧಿತ್ವ ಸಿಗಬೇಕು" ಎಂದು ಒತ್ತಾಯಿಸುತ್ತಿದ್ದಾರೆ.

## ರಾಷ್ಟ್ರಭಕ್ತಿಯ ಜ್ವಾಲೆ ವೀರ ಸಾವರ್ಕರ್

• ಪರಶುರಾಮ ಕರಣಂ, ಭಾಲ್ಕಿ

ದೇಶಭಕ್ತಿ, ತ್ಯಾಗ ಮತ್ತು ರಾಷ್ಟ್ರನಿಷ್ಠೆಯ ಪ್ರತೀಕವಾಗಿರುವ ಸ್ವಾತಂತ್ರ್ಯವೀರ ವಿನಾಯಕ ದಾಮೋದರ ಸಾವರ್ಕರ್ ಅವರ ಜಯಂತಿಯನ್ನು ಅತ್ಯಂತ ಸಂಭ್ರಮ, ಗೌರವ ಮತ್ತು ರಾಷ್ಟ್ರಭಕ್ತಿಯ ವಾತಾವರಣದಲ್ಲಿ ಆಚರಿಸಲಾಯಿತು. ಭಾರತ ಸರ್ಕಾರದ ಯುವ ವ್ಯವಹಾರಗಳು ಮತ್ತು ಕ್ರೀಡಾ ಸಚಿವಾಲಯದ ಸ್ವಾಯತ್ತ ಸಂಸ್ಥೆಯಾದ 'ಮೇರಾ ಯುವ ಭಾರತ್' ಹಾಗೂ ವಿವೇಕ ವಾಹಿನಿ ಶಿಕ್ಷಣ ಸಂಸ್ಥೆಯ ಸಂಯುಕ್ತ ಆಶ್ರಯದಲ್ಲಿ ನಡೆದ ಕಾರ್ಯಕ್ರಮ ಯುವಜನರಲ್ಲಿ ಹೊಸ ದೇಶಭಕ್ತಿ ಚೈತನ್ಯ ಮೂಡಿಸಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಸಂಸ್ಥೆಯ ಅಧ್ಯಕ್ಷ ಈಶ್ವರ ರುಮ್ಮಾ, "ವೀರ ಸಾವರ್ಕರ್ ಅವರು ಕೇವಲ ಸ್ವಾತಂತ್ರ್ಯ ಹೋರಾಟಗಾರರಲ್ಲ; ಅವರು ರಾಷ್ಟ್ರಭಕ್ತಿಯ ಅಗ್ನಿಶಿಖೆ, ಅಪರೂಪದ ಕ್ರಾಂತಿಕಾರಿ, ಚಿಂತಕ, ಕವಿ ಮತ್ತು ಸಮಾಜ ಸುಧಾರಕರಾಗಿದ್ದರು. ಬ್ರಿಟಿಷರ ದೌರ್ಜನ್ಯಕ್ಕೆ ಹೆದರದೆ ಅಂಡಮಾನ್‌ನ ಕಾಲಾಪಾನಿ ಶಿಕ್ಷೆಯ ನಡುವೆಯೂ ರಾಷ್ಟ್ರಭಕ್ತಿಯ ಜ್ಯೋತಿಯನ್ನು ಜೀವಂತವಾಗಿಟ್ಟ ಮಹಾನ್ ವ್ಯಕ್ತಿತ್ವ ಅವರದು" ಎಂದು ಹೇಳಿದರು. "ದೇಶಕ್ಕಾಗಿ ಬದುಕುವ ಮತ್ತು ಸಮಾಜದ ಒಳಿತಿಗಾಗಿ ಹೋರಾಡುವ ಸಂಕಲ್ಪ ಪ್ರತಿಯೊಬ್ಬ ಯುವಕರಲ್ಲೂ ಮೂಡಬೇಕು" ಎಂದು ಅವರು ಕರೆ ನೀಡಿದರು. ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ದೇಶಭಕ್ತಿ ಗೀತೆಗಳ ಮೂಲಕ ರಾಷ್ಟ್ರಪ್ರೇಮದ ಸಂದೇಶ ಸಾರಿದರು. ಭಾಷಣ ಸ್ಪರ್ಧೆ, ರಸಪ್ರಶ್ನೆ ಹಾಗೂ ಸಾವರ್ಕರ್ ಜೀವನಾಧಾರಿತ ವಿವಿಧ ಸ್ಪರ್ಧೆಗಳು ಕಾರ್ಯಕ್ರಮಕ್ಕೆ ವಿಶೇಷ ಮೆರುಗು ನೀಡಿದವು. ಯುವಕರು ಉತ್ಸಾಹದಿಂದ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು. ಈ ಸಂದರ್ಭದಲ್ಲಿ ವೈಶಾಲಿ, ಮಾನಂದ, ಶೃತಿ. ಕೆ, ಸುವರ್ಣ, ಸಾಯಿಕಿರಣ್, ಮಹೇಶ್, ವಂಪ್ರಕಾಶ್ ಸೇರಿದಂತೆ ನೂರಾರು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಸಿದ್ದರಾಮಯ್ಯ ವಿದಾಯ..!

## ರಾಜಕೀಯ ಸುದೀರ್ಘ ಹಾದಿ ಮೆಲುಕು ಹಾಕಿದ ಸಿದ್ದು | ನೂತನ ಮುಖ್ಯಮಂತ್ರಿಯ ಬಗ್ಗೆ ಚರ್ಚೆ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಕರ್ನಾಟಕ ಮುಖ್ಯಮಂತ್ರಿಯಾಗಿ ವಿದಾಯ ಭಾಷಣ ಮಾಡಿರುವ ಸಿದ್ದರಾಮಯ್ಯ, ಲೋಕಭವನಕ್ಕೆ ತೆರಳಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರ ವಿಶೇಷ ಕಾರ್ಯದರ್ಶಿಗೆ ರಾಜೀನಾಮೆ ಪತ್ರ ಸಲ್ಲಿಸಿದ್ದಾರೆ. ರಾಜ್ಯಪಾಲರ ಅನುಪಸ್ಥಿತಿಯಲ್ಲಿ ಅವರ ವಿಶೇಷ ಕಾರ್ಯದರ್ಶಿ ರಾಜೀನಾಮೆ ಪತ್ರವನ್ನು ಸ್ವೀಕರಿಸಿದ್ದು, ಅದನ್ನು ಅಂಗೀಕಾರ ಮಾಡಲಿಲ್ಲ. ರಾಜ್ಯಪಾಲರು ಇಂದು ಸಂಜೆ ಬೆಂಗಳೂರಿಗೆ ಮರಳಲಿದ್ದು, ಸಿದ್ದರಾಮಯ್ಯ ರಾಜೀನಾಮೆ ಅಂಗೀಕಾರವಾಗಲಿದೆ.

**ಒಗ್ಗಟ್ಟು ಪ್ರದರ್ಶನ:** ನಿರ್ಗಮಿತ ಸಿದ್ದಾರಾಮಯ್ಯ ಅವರ ಸುದ್ದಿಗೋಷ್ಠಿಯ ಬಳಿಕ ಡಿಸಿಎಂ ಡಿಕೆಶಿವಕುಮಾರ್, ಸಚಿವಡಾ.ಜಿ.ಪರಮೇಶ್ವರ್, ಎಚ್.ಸಿ.ಮಹದೇವಪ್ಪ, ಪ್ರಿಯಾಂಕ್ ಖರ್ಗೆ, ಜಾರ್ಜ್ ಇತರರು ಒಗ್ಗಟ್ಟಿನ ಪ್ರದರ್ಶನ ಮಾಡಿದ್ದು ನಾಡಿನ ಜನರ ಗಮನ ಸೆಳೆದಿದೆ.

**ಆಕ್ರೋಶ, ಟೈರ್ಗೆ ಬೆಂಕಿ:** ಸಿಎಂ ಸ್ಥಾನಕ್ಕೆ ರಾಜೀನಾಮೆ ನೀಡುವುದಾಗಿ ಸಚಿವರಿಗೆ ಸಿದ್ದರಾಮಯ್ಯ ಅವರು ಮಾಹಿತಿ ನೀಡಿದ್ದಾರೆ. ಇದೀಗ ರಾಜಾದ್ಯಂತ ಸಿದ್ದು ಅಭಿಮಾನಿಗಳಲ್ಲಿ ಆಕ್ರೋಶಕ್ಕೆ ಕಾರಣವಾಗಿದ್ದು, ಶಿವಮೊಗ್ಗದಲ್ಲಿ ಕುರುಬ ಸಮುದಾಯದಿಂದ ಟೈರ್ಗೆ ಬೆಂಕಿ ಹಚ್ಚಿ ಪ್ರತಿಭಟನೆ ಪ್ರತಿಭಟನೆ ನಡೆಸಲಾಗಿದೆ.



### ಡಿಕೆಶಿ ಮುಂದಿನ ಸಿಎಂ: ಎಚ್ಕೆಪಿ

ಕಾವೇರಿ ನಿವಾಸದಲ್ಲಿ ಬ್ರೇಕ್ ಫಾಸ್ಟ್ ಮೀಟಿಂಗ್ ಮುಗಿಸಿ ವಾಪಸ್ ಆಗುವಾಗ ಮಾಧ್ಯಮ ಜೊತೆ ಮಾತನಾಡಿದ ಸಚಿವ ಎಚ್‌ಕೆಪಾಟೀಲ್ ಅವರು, ಡಿಕೆ ಶಿವಕುಮಾರ್ ಮುಂದಿನ ಸಿಎಂ ಎಂದ ಹೇಳಿದ್ದಾರೆ. ಡಿಕೆ ಶಿವಕುಮಾರ್ ಮುಂದಿನ ಸಿಎಂ ಆಗ್ತಾರೆ ಎಂದಿರುವುದಕ್ಕೆ ಸಿದ್ದರಾಮಯ್ಯ ಜೊತೆ ಎಲ್ಲರೂ ಒಪ್ಪಿಗೆ ನೀಡಿದ್ದಾರೆ ಎಂದು ವಿವರಿಸಿದ್ದಾರೆ.

### ಮುಖ್ಯಮಂತ್ರಿ ಸ್ಥಾನ–ಹೈಕಮಾಂಡ್, ಸಿಎಲ್‌ಪಿ ನಿರ್ಧಾರ

ಸಿದ್ದರಾಮಯ್ಯ ಅವರು ಸುದ್ದಿಗೋಷ್ಠಿಯ ಕೊನೆಯಲ್ಲಿ ನೂತನ ಮುಖ್ಯಮಂತ್ರಿಯ ಹೆಸರು ಹೇಳಬಹುದೆಂಬ ನಿರೀಕ್ಷೆ ಇತ್ತು. ಆದರೆ ಅವರು ಸಿಎಂ ಅನ್ನು ಹೈಕಮಾಂಡ್ ಮತ್ತು ಶಾಸಕಾಂಗ ಪಕ್ಷ ನಿರ್ಧರಿಸಲಿದೆ ಎಂದಿದ್ದಾರೆ. ತಮ್ಮ ಬಲಗಡೆ ಇದ್ದ ಡಿಕೆ ಶಿವಕುಮಾರ್, ಬಲಗಡೆ ಇದ್ದ ಡಾ ಜಿ ಪರಮೇಶ್ವರ್ ಅವರ ಕೈ ಹಿಡಿದೆತ್ತಿದರು. ಉಳಿದೆಲ್ಲಾ ಸಚಿವರು ಒಗ್ಗಟ್ಟು ಪ್ರದರ್ಶಿಸಿದ್ದು ವಿಶೇಷ.

### ಅಧಿಕಾರ, ಹಣದ ಹಿಂದೆ ಹೋಗಿಲ್ಲ: ಸಿದ್ದರಾಮಯ್ಯ

ಅಧಿಕಾರ, ಹಣದ ಹಿಂದೆ ಹೋಗಿಲ್ಲ. ಆಸ್ತಿ ಪಾಸ್ತಿ ಮಾಡುವ ಯೋಚನೆ ಮಾಡಿಲ್ಲ. ಮತದಾರ ದೇವರು ಅಧಿಕಾರ ಕೊಟ್ಟಿದ್ದಾರೆ, 50 ವರ್ಷ ಸುದೀರ್ಘ ರಾಜಕಾರಣ ಜೀವನ ನಡೆಸಿದ್ದೇನೆ. ರಾಜಕೀಯ ಜೀವನ ತೆರೆದ ಪುಸ್ತಕ. ರಾಜಕೀಯದಲ್ಲಿ ಜನಶಕ್ತಿ ಮಾತ್ರ ಉಳಿಸುತ್ತದೆ. ನಾನೆಂದೂ ನಂಬಿದ ಮೌಲ್ಯಗಳ ಜೊತೆ ರಾಜಿ ಮಾಡಿಲ್ಲ. ಸಿದ್ದಾಂತದಲ್ಲಿ ರಾಜಿಯಾಗಿಲ್ಲಎಂದಿದ್ದಾರೆ ಸಿದ್ರಾಮಯ್ಯ.

### ಕೇಂದ್ರದ ವಿರುದ್ಧ ವಾಗ್ದಾಳಿ

ಕೇಂದ್ರ ಸರ್ಕಾರದ ರಾಜ್ಯಕ್ಕೆ ಅನ್ಯಾಯ ಮಾಡಿದೆ. ಭದ್ರಾಮೇಲ್ದಂಡೆ ಯೋಜನೆಗೆ ಹಣಕಾಸು ನೆರವು ನೀಡಿಲ್ಲ. ಜಿಎಸ್ ಟಿ ಪರಿಹಾರ ನೀಡುತ್ತಿಲ್ಲ. ಜಲ ಜೀವನ್ ಮಿಷನ್ ನಲ್ಲೂ 17,000 ಸಾವಿರ ಕೋಟಿ ಬಾಕಿ ಇದೆ. ನರೇಗಾ ಅನುದಾನ ನಿಲ್ಲಿಸಲಾಗಿದೆ. ಗ್ಯಾರಂಟಿ ಯೋಜನೆಯಿಂದಾಗಿ ಜನರಿಗೆ ಕೊಂಡು ಕೊಳ್ಳುವ ಶಕ್ತಿ ಹೆಚ್ಚಾಗಿದೆ ಎಂದು ಸಿದ್ದರಾಮಯ್ಯ ಆರೋಪಿಸಿದ್ದಾರೆ.

## ಓಟ: ಮಮಿತಾಬಾಯಿ ರಾಜ್ಯಕ್ಕೆ ದ್ವಿತೀಯ

• ಮಲ್ಲಮ್ಮ ನುಡಿ ವಾರ್ತೆ ಬೀದರ್



ಬೆಂಗಳೂರಿನಲ್ಲಿ ಈಚೆಗೆ ನಡೆದ ರಾಜ್ಯ ಸರ್ಕಾರಿ ನೌಕರರ ರಾಜ್ಯಮಟ್ಟದ ಕ್ರೀಡಾಕೂಟದ 800 ಮೀ. ಮುಕ್ತ ಓಟದ ಸ್ಪರ್ಧೆಯಲ್ಲಿ ಬೀದರ್‌ನ ಮಮಿತಾಬಾಯಿ ಕದ್ರೆ ದ್ವಿತೀಯ ಸ್ಥಾನಗಳಿಸಿ ಸಾಧನೆ ಮಾಡಿದ್ದಾರೆ.

ಕ್ರೀಡಾಕೂಟದ ಸಮಾರೋಪ ಸಮಾರಂಭದಲ್ಲಿ ಮಮಿತಾಬಾಯಿ ಅವರಿಗೆ ಪ್ರಮಾಣ ಪತ್ರ ಹಾಗೂ ಟ್ರೋಫಿ ಪ್ರದಾನ ಮಾಡಲಾಯಿತು.

ಕಾರಾಗೃಹ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿರುವ ಮಮಿತಾಬಾಯಿ ವೃತ್ತಿ ಜತೆಗೆ ಕ್ರೀಡೆಯಲ್ಲೂ ಸಕ್ರಿಯರಾಗಿದ್ದಾರೆ. ರಾಜ್ಯ, ರಾಷ್ಟ್ರ, ಅಂತರರಾಷ್ಟ್ರೀಯ ಮಟ್ಟದ ಸ್ಪರ್ಧೆಗಳಲ್ಲಿ ತಮ್ಮ ಪ್ರತಿಭೆ ಪ್ರದರ್ಶಿಸಿದ್ದಾರೆ. ಸದ್ಯ ಹುಬ್ಬಳ್ಳಿ ಕಾರಾಗೃಹದ ಮುಖ್ಯ ವೀಕ್ಷಕಿಯಾಗಿದ್ದಾರೆ.

## ಬಕ್ರೀದ್ ಸಂಭ್ರಮ, ಸಾಮೂಹಿಕ ಪ್ರಾರ್ಥನೆ

• ಮಲ್ಲಮ್ಮ ನುಡಿ ವಾರ್ತೆ ವಿಜಯನಗರ

ಬಕ್ರೀದ್ ಹಬ್ಬವನ್ನು ಮುಸ್ಲಿಂ ಬಾಂಧವರು ಗುರುವಾರ ನಗರದಲ್ಲಿ ಅತ್ಯಂತ ಸಡಗರ, ಸಂಭ್ರಮದಿಂದ ಆಚರಿಸಿದರು. ಚಿತ್ತವಾಡಗಿ ಹಾಗೂ ವಿವಿಧ ಈದ್ಗಾ ಮೈದಾನ ಖಬರಾಸ್ತಾನಗಳಲ್ಲಿ ಬೆಳಗ್ಗೆ ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದ ಮುಸ್ಲಿಮರು ಪರಸ್ಪರ ಶುಭಾಶಯ ವಿನಿಮಯ ಮಾಡಿಕೊಂಡರು. ಹೊಸ ಬಟ್ಟೆ ಕಂಗೊಳಿಸಿದ ಪುಟಾಣಿಗಳು ಕೂಡ ಪರಸ್ಪರ ಅಪ್ಪಿ ಈದ್ ಶುಭಾಶಯ ವಿನಿಯಮ ಮಾಡಿಕೊಳ್ಳುತ್ತಿದ್ದ ದೃಶ್ಯ



ಸಾಮಾನ್ಯವಾಗಿತ್ತು. ಈ ಸಂದರ್ಭದಲ್ಲಿ ಅಂಜುಮನ್ ಕಮಿಟಿಯ ಅಧ್ಯಕ್ಷರು ಮುಖಂಡರು ಮತ್ತು ಮುಸ್ಲಿಂ ಬಾಂಧವರು ಭಾಗವಹಿಸಿದ್ದರು.

# ಸಿಎಂ ಕಚೇರಿ ತಲುಪಿದ ಚರಂಡಿ ಅಧಿಕಾರಿಗಳ ಜಾಣ ಗುಂಡಿ

• ಪರಮೇಶ ರಾಂಪುರೆ, ಕಮಲನಗರ

ಕಲ್ಯಾಣ ಕರ್ನಾಟಕ ಭಾಗದ ಅಭಿವೃದ್ಧಿಯ ಜಪ ಜಪಿಸುವ ಸರ್ಕಾರಗಳ ಮಧ್ಯೆ, ಗ್ರಾಮೀಣ ಭಾಗದ ಜನರಿಗೆ ಇಂದಿಗೂ ಕನಿಷ್ಠ ಮೂಲಸೌಕರ್ಯಗಳು ಮರೀಚಿಕೆಯಾಗಿವೆ. ಬೀದರ್ ಜಿಲ್ಲೆಯ ಕಮಲನಗರ ತಾಲೂಕಿನ ಮದನೂರು ಗ್ರಾಮ ತಾಜಾ ಉದಾಹರಣೆಯಾಗಿದೆ. ಗ್ರಾಮದ ರಸ್ತೆ ಮತ್ತು ಚರಂಡಿ ಅವ್ಯವಸ್ಥೆಯ ವಿರುದ್ಧ ಸಿಡಿದೆದ್ದಿರುವ ಗ್ರಾಮದ ನಿವಾಸಿ ಪೂಜಾ ಗುಂಡಪ್ಪಾ ಬೇಲ್ಲೆ ಅವರು ಈಗ ಮುಖ್ಯಮಂತ್ರಿಗಳ ಕಚೇರಿಗೆ ನೇರ ಪತ್ರ ಬರೆದು 2 ಕೋಟಿ ರೂಪಾಯಿಗಳ ತುರ್ತು ಅನುದಾನಕ್ಕೆ ಆಗ್ರಹಿಸಿದ್ದಾರೆ.

**ಬಜೆಟ್ ನೆಪವೊಡ್ಡಿ ಕೈಚೆಲ್ಲಿದ ಆಡಳಿತ**

**ಮುಖ್ಯಮಂತ್ರಿ ಅಂಗಳಕ್ಕೆ:** ಇದರೊಂದಿಗೆ ಹಳ್ಳಿಯೊಂದರ ಚರಂಡಿ ಸಮಸ್ಯೆ ಈಗ ನೇರವಾಗಿ ರಾಜ್ಯದ ಮುಖ್ಯಮಂತ್ರಿಗಳ ಅಂಗಳ ತಲುಪಿದಂತಾಗಿದೆ. ಸಿದ್ದರಾಮಯ್ಯನವರು ಕೂಡ ಪದತ್ಯಾಗ ಮಾಡಿದ್ದು, ಗದ್ದುಗೆ ಹಿಡಿಯಲಿರುವ ನೂತನ ಮುಖ್ಯಮಂತ್ರಿಗಳೇ ಈ ಸಮಸ್ಯೆ ಪರಿಹರಿಸಬೇಕೆಂದು ಈ ಭಾಗದ ಜನರ ಒತ್ತಾಯವಾಗಿದೆ.

### ಫೋಟೊ ರಾಜಕೀಯಕ್ಕೆ ಜನರ ಆಕ್ರೋಶ..!

ಗ್ರಾಮದ ದುಃಸ್ಥಿತಿಯ ಕುರಿತು ಮೇ 11, 2026 ರಂದು ಸಿಎಂ ಕಚೇರಿಯ ಸಾರ್ವಜನಿಕ ಕುಂದು–ಕೊರತೆ ವಿಭಾಗಕ್ಕೆ ಪೂಜಾ ಬೆಲ್ಲೆ ಅವರು ದೂರು ನೀಡಿದ್ದರು. ಸಿಎಂ ಕಚೇರಿಯಿಂದ ಇ–ಮೇಲ್ ಬರುತ್ತಿದ್ದಂತೆ ಎಚ್ಚೆತ್ತ ಕಮಲನಗರ ತಾಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಗ್ರಾ.ಪಂ. ಸಿಬ್ಬಂದಿ, ತರಾತುರಿಯಲ್ಲಿ ಗ್ರಾಮದ ಕೇವಲ ಒಂದು ನಿರ್ದಿಷ್ಟ ಪ್ರದೇಶದ ಕಸ ಹಾಗೂ ಚರಂಡಿ ಸಾಫ್ ಮಾಡಿದ್ದಾರೆ. "ಸ್ವಚ್ಛತೆ ಮಾಡಲಾಗಿದೆ" ಎಂದು ಫೋ–ಟೋ ಸಹಿತ ಮೇಲಧಿಕಾರಿಗಳಿಗೆ ವರದಿ ಸಲ್ಲಿಸಿ ಕೈತೊಳೆದುಕೊಂಡಿದ್ದಾರೆ. ಅಧಿಕಾರಿಗಳ ಈ ತಾತ್ಕಾಲಿಕ 'ಫೋಟೋ ರಾಜಕೀಯ' ಹಾಗೂ ಬೇಜವಾಬ್ದಾರಿತನದ ವಿರುದ್ಧ ಇಡೀ ಗ್ರಾಮಸ್ಥರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.




### ಬಯಲಾಯ್ತು ಆರ್ಥಿಕ ಅಸಹಾಯಕತೆ

ಮದನೂರು ಗ್ರಾಮದ ಅಸಲಿ ದುಃಸ್ಥಿತಿಯನ್ನು ಬೇರೆ ಯಾರೂ ಅಲ್ಲ, ಸ್ವತಃ ತಾಲೂಕು ಪಂಚಾಯತ್ ಅಧಿಕಾರಿಗಳೇ ಸಿಎಂ ಕಚೇರಿಗೆ ಸಲ್ಲಿಸಿರುವ ಅಧಿಕೃತ ಪತ್ರದಲ್ಲಿ ಒಪ್ಪಿಕೊಂಡಿದ್ದಾರೆ. ಬಜೆಟ್ ಕೊರತೆಯಿಂದಾಗಿ ಗ್ರಾಮದ ಅಭಿವೃದ್ಧಿ ಹೇಗೆ ಕುಂಠಿತಗೊಂಡಿದೆ ಎಂಬುದನ್ನು ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ತಮ್ಮ ಲಿಖಿತ ಪತ್ರದಲ್ಲಿ"ಗ್ರಾಮದಲ್ಲಿ ಈ ಹಿಂದೆ ವಿವಿಧ ಯೋಜನೆಗಳಡಿ ಸಿ.ಸಿ. ರಸ್ತೆ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ. ಆದರೆ ರಸ್ತೆ ಬದಿಯ ಚರಂಡಿ ಕಾಮಗಾರಿಗಳನ್ನು ಕೈಗೊಂಡಿರುವುದಿಲ್ಲ. ಸದ್ಯದ ಪರಿಸ್ಥಿತಿಯಲ್ಲಿ ಗ್ರಾಮ ಪಂಚಾಯತಿಯಲ್ಲಿ ಹಣದ ಕೊರತೆಯಿದ್ದು, ಹೆಚ್ಚಿನ ಅನುದಾನ ಬಿಡುಗಡೆಯಾದ ಕೂಡಲೇ ಚರಂಡಿ ಕಾಮಗಾರಿ ಕೈಗೊಳ್ಳಲಾಗುವುದು ಎಂದಿದ್ದಾರೆ.

### ನರಕ ಸದೃಶ ವಾರ್ಡ್, ರೋಗದ ಭೀತಿ

ಮದನೂರು ಗ್ರಾಮದ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಸಾಮಾನ್ಯ ವಾರ್ಡ್‌ಗಳು ಸೇರಿದಂತೆ ಇಡೀ ಗ್ರಾಮದಲ್ಲಿ ಸದ್ಯ ಚರಂಡಿ ವ್ಯವಸ್ಥೆಯೇ ಇಲ್ಲದಂತಾಗಿದೆ. ಮನೆಗಳಿಂದ ಹೊರಬರುವ ಕೊಳಚೆ ನೀರು ಮತ್ತು ಮಳೆನೀರು ಹರಿದು ಹೋಗಲು ಜಾಗವಿಲ್ಲದೆ ರಸ್ತೆಯ ಮೇಲೆಯೇ ಹರಿಯುತ್ತಿದೆ. ರಸ್ತೆಗಳಲ್ಲೇ ಕೊಳಚೆ ನೀರು ನಿಂತು ಸೊಳ್ಳೆಗಳ ಕಾಟ ವಿಪರೀತವಾಗಿದೆ. ಇದರಿಂದಾಗಿ ಗ್ರಾಮದ ಸಣ್ಣ ಮಕ್ಕಳು ಮತ್ತು ವೃದ್ಧರು ಡೆಂಗೆ, ಲೇರಿಯಾದಂತಹ ಸಾಂಕ್ರಾಮಿಕ ರೋಗಗಳ ಭೀತಿಯಲ್ಲಿ ದಿನದೂಡುತ್ತಿದ್ದಾರೆ.

## ರಾಷ್ಟ್ರ ರಾಜಕಾರಣಕ್ಕೆ ಹೋಗಲ್ಲ, ರಾಜ್ಯದಲ್ಲೇ ಸಕ್ರಿಯನಾಗಿರುತ್ತೇನೆ: ಸಿದ್ದರಾಮಯ್ಯ, ಮಾಜಿ ಸಿಎಂ

## ಕಾರ್ಖಾನೆಗಳು ಕಾರ್ಮಿಕ ಇಲಾಖೆಯ ನಿಯಮ ಪಾಲಿಸಲಿ

ದೇಶದ ಅಭಿವೃದ್ಧಿಯಲ್ಲಿ ಕಾರ್ಖಾನೆಗಳ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಸಾವಿರಾರು ಕಾರ್ಮಿಕರಿಗೆ ಉದ್ಯೋಗ ನೀಡುವ ಕಾರ್ಖಾನೆಗಳು ಆರ್ಥಿಕ ಬೆಳವಣಿಗೆಯ ಬೆನ್ನೆಲುಬಾಗಿವೆ. ಆದರೆ ಕಾರ್ಮಿಕರ ಸುರಕ್ಷತೆ, ವೇತನ, ಆರೋಗ್ಯ ಮತ್ತು ಹಕ್ಕುಗಳ ವಿಷಯದಲ್ಲಿ ಕೆಲ ಕಾರ್ಖಾನೆಗಳು ಕಾರ್ಮಿಕ ಇಲಾಖೆಯ ನಿಯಮಗಳನ್ನು ಸರಿಯಾಗಿ ಪಾಲಿಸದಿರುವುದು ಆತಂಕಕಾರಿ ವಿಷಯವಾಗಿದೆ.

### ಸಂಪಾದಕೀಯ



**ಮಾಣಿಕರೆಡ್ಡಿ ಕೌಡಾಳೆ**
**ಪ್ರಧಾನ ಸಂಪಾದಕರು**
**ಮೊ: 9845028349**

ಕಾರ್ಮಿಕರು ದಿನವಿಡೀ ಶ್ರಮಪಟ್ಟು ಉತ್ಪಾದನೆ ಹೆಚ್ಚಿಸಲು ತಮ್ಮ ಸೇವೆ ಸಲ್ಲಿಸುತ್ತಾರೆ. ಇಂತಹ ಕಾರ್ಮಿಕರಿಗೆ ಸರ್ಕಾರ ನಿಗದಿಪಡಿಸಿದ ಕನಿಷ್ಠ ವೇತನ, ಸುರಕ್ಷಿತ ಕೆಲಸದ ವಾತಾವರಣ, ಆರೋಗ್ಯ ಸೌಲಭ್ಯ, ಕುಡಿಯುವ ನೀರು, ವಿಶ್ರಾಂತಿ ಸಮಯ ಹಾಗೂ ಕಾನೂನುಬದ್ಧ ರಜೆಗಳನ್ನು ನೀಡುವುದು ಪ್ರತಿಯೊಂದು ಕಾರ್ಖಾನೆಯ ಕರ್ತವ್ಯವಾಗಿದೆ. ಆದರೆ ಕೆಲವು ಕಡೆಗಳಲ್ಲಿ ಕಾರ್ಮಿಕರಿಂದ ಹೆಚ್ಚು ಸಮಯ ಕೆಲಸ ಮಾಡಿಸಿಕೊಂಡು, ಸಮರ್ಪಕ ವೇತನ ನೀಡದೆ ಶೋಷಣೆ ನಡೆಯುತ್ತಿರುವ ದೂರುಗಳು ಕೇಳಿಬರುತ್ತಿವೆ.

ಕಾರ್ಮಿಕ ಇಲಾಖೆಯ ಅಧಿಕಾರಿಗಳು ಕೂಡ ಸಮಯ ಸಮಯಕ್ಕೆ ಕಾರ್ಖಾನೆಗಳ ಪರಿಶೀಲನೆ ನಡೆಸಿ, ನಿಯಮ ಉಲ್ಲಂಘಿಸುವ ಸಂಸ್ಥೆಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು. ಕಾರ್ಮಿಕರ ಜೀವಕ್ಕೆ ಅಪಾಯ ಉಂಟಾಗುವಂತಹ ನಿರ್ಲಕ್ಷ್ಯವನ್ನು ಸಹಿಸಲು ಆಗುವುದಿಲ್ಲ. ಅಪಘಾತಗಳನ್ನು ತಪ್ಪಿಸಲು ಸುರಕ್ಷತಾ ಕ್ರಮಗಳನ್ನು ಕಡ್ಡಾಯವಾಗಿ ಜಾರಿಗೆ ತರಬೇಕು.

ಕಾರ್ಮಿಕರು ಮತ್ತು ಕಾರ್ಖಾನೆ ಮಾಲೀಕರ ನಡುವೆ ಉತ್ತಮ ಸಂಬಂಧ ಇದ್ದಾಗ ಮಾತ್ರ ಉತ್ಪಾದನೆ ಮತ್ತು ಅಭಿವೃದ್ಧಿ ಸಾಧ್ಯವಾಗುತ್ತದೆ. ಆದ್ದರಿಂದ ಎಲ್ಲಾ ಕಾರ್ಖಾನೆಗಳು ಕಾರ್ಮಿಕ ಇಲಾಖೆಯ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ, ಕಾರ್ಮಿಕ ಸ್ನೇಹಿ ವಾತಾವರಣ ನಿರ್ಮಿಸಬೇಕು. ಇದೇ ನಿಜವಾದ ಸಾಮಾಜಿಕ ಜವಾಬ್ದಾರಿಯಾಗಿದೆ.

## ಮೋದಿ ಸರ್ಕಾರದ ಪಡಿತರ ಹಂಚಿಕೆಯಲ್ಲೂ ರಾಜ್ಯ ಸರ್ಕಾರ ವಿಫಲ



**ಬೀದರ್:** ಪ್ರಧಾನಮಂತ್ರಿ ಗರಿಬ್ ಕಲ್ಯಾಣ್ ಅನ್ನ ಯೋಜನೆಯಡಿ ದೇಶದ 81.35 ಕೋಟಿ ಜನರಿಗೆ ಉಚಿತ ಆಹಾರ ಧಾನ್ಯ ನೀಡಲು ಕೇಂದ್ರದ ಮೋದಿ ಸರ್ಕಾರ ರೂ. 11.80 ಲಕ್ಷ ಕೋಟಿ ಅನುದಾನ ಮೀಸಲಿಟ್ಟು, ದೇಶದ ಜನರಿಗೆ ಪ್ರತಿ ತಿಂಗಳು ತಪ್ಪದೆ ಅಕ್ಕಿ/ಗೋದಿ ನೀಡುತ್ತಿದೆ, ಆದರೆ ನಮ್ಮಲ್ಲಿರುವ ಭ್ರಷ್ಟ ರಾಜ್ಯ ಸರ್ಕಾರ ಕೇಂದ್ರದ ಪಡಿತರ ಸಹ ರಾಜ್ಯದ ಜನರಿಗೆ ವಿತರಿಸುವಲ್ಲಿ ವಿಫಲವಾಗಿದೆ, ಸರಿಯಾಗಿ ಸರ್ವರ್ ನಿರ್ವಹಣೆ ಮಾಡದೆ ಇರುವುದರಿಂದ ಬಡವರು ಅವರ ಪಾಲಿನ ಪಡಿತರ ಪಡೆಯಲು ತನ್ನ ಎಲ್ಲಾ ಕೆಲಸ ಕಾರ್ಯಗಳೆಲ್ಲಾ ಬಿಟ್ಟು ವಾರಗಟ್ಟಲೆ ಪಡಿತರ ಅಂಗಡಿ ಮುಂದೆ ನಿಲ್ಲುವ ಹಾಗೆ ಮಾಡುತ್ತಿದೆ, ಸದ್ಯ ರಾಜ್ಯದ ತುಂಬಾ ಜನರು ಈ ಸಮಸ್ಯೆ ಎದುರಿಸುತ್ತಿದ್ದಾರೆ, ಲಜ್ಜೆಗೇಟ್ಟ ರಾಜ್ಯ ಸರ್ಕಾರ ಕೂಡಲೆ ಆಹಾರ ಇಲಾಖೆಯ ಸರ್ವರ್ ಸಮಸ್ಯೆ ಬಗೆಹರಿಸಿ, ರಾಜ್ಯದಲ್ಲಿರುವ ಎಲ್ಲಾ ಪಡಿತರಿಗೆ ಸದ್ಯ ಮೋದಿ ಸರ್ಕಾರದಿಂದ ನೀಡುತ್ತಿರುವ ಮೇ ಮತ್ತು ಜೂನ್ ತಿಂಗಳ ಪಡಿತರ ಸರಿಯಾಗಿ ಸಿಗುವಂತೆ ಕ್ರಮ ಕೈಗೊಳ್ಳಬೇಕೆಂದು ಮಾಜಿ ಕೇಂದ್ರ ಸಚಿವ ಭಗವಂತ ಖೂಬಾ ಅಗ್ರಹಿಸಿದ್ದಾರೆ.

ಮೋದಿ ಸರ್ಕಾರದಿಂದ ಅಂತ್ಯೋದಯ ಕಾರ್ಡನವರಿಗೆ ಪ್ರತಿ ಕಾರ್ಡಗೆ ಪ್ರತಿ ತಿಂಗಳು 35ಕೆ.ಜಿ ಅಕ್ಕಿ ಮತ್ತು ಬಿ.ಪಿ.ಎಲ್ ಕಾರ್ಡದಾರರಿಗೆ ಪ್ರತಿ ವ್ಯಕ್ತಿಗೆ ಪ್ರತಿ ತಿಂಗಳು 5 ಕೆ.ಜಿ ಅಕ್ಕಿ ನೀಡಲಾಗುತ್ತಿದೆ, ಸದ್ಯ ಬೆಸಿಗೆ ಇರುವ ಕಾರಣ ಮೇ ಮತ್ತು ಜೂನ್ ತಿಂಗಳ ಪಡಿತರ ಒಂದೆ ಸಮಯದಲ್ಲಿ ನೀಡಲಾಗುತ್ತಿದೆ, ಇದಕ್ಕೆ ಪ್ರತಿಯೊಬ್ಬರು 2 ಸಲ ಥಂಬ್ ಕೊಡಬೇಕಾಗುತ್ತದೆ. ಇದು ಸಂಪುರ್ಣ ಮೋದಿ ಸರ್ಕಾರದ ಆಹಾರ ಧಾನ್ಯವಾಗಿರುತ್ತದೆ, ನಿಯಮಾನುಸಾರ ಕೇಂದ್ರದ ಜೊತೆ ರಾಜ್ಯ ಸರ್ಕಾರವು ತನ್ನ ಪಾಲಿನ ಪಡಿತರ ನೀಡಬೇಕಿತ್ತು ಆದರೆ ದಿವಾಳಿ ಹಂತದಲ್ಲಿರುವ ರಾಜ್ಯ ಸರ್ಕಾರ ತನ್ನ ಪಾಲಿನ ಪಡಿತರ ಜುಲೈ ತಿಂಗಳಲ್ಲಿ ನೀಡಲು ನಿರ್ಧರಿಸಿದೆ ಎಂದು ಅಧಿಕಾರಿಗಳಿಂದ ಗೊತ್ತಾಗಿದೆ, ಆದರೆ ಕೇಂದ್ರ ಸರ್ಕಾರ ನೀಡುತ್ತಿರುವ ಪಡಿತರಕ್ಕಾದರೂ ಸರ್ವರ್ ಸಮಸ್ಯೆಯಾಗದಂತೆ ನೋಡಿಕೊಳ್ಳುವುದು ರಾಜ್ಯ ಸರ್ಕಾರದ ಜವಬ್ದಾರಿಯಾಗಿದೆ, ಆದರೆ ಜಿಲ್ಲಾ ಉಸ್ತುವಾರಿ ಮಂತ್ರಿಯಿಂದ ಹಿಡಿದು ಮುಖ್ಯಮಂತ್ರಿಯವರೆಗೆ ಎಲ್ಲರೂ ಕುರ್ಚಿ ಕಾಳಗದಲ್ಲಿ ಬ್ಯುಸಿ ಆಗಿದ್ದಾರೆ, ಅಧಿಕಾರಕ್ಕಾಗಿ ತನ್ನ ಜವಬ್ದಾರಿ ಮರೆತು ಕಾಂಗ್ರೆಸ್ ಕಚೇರಿಯ ಕಾವಲು ಕಾಯುತ್ತಿದ್ದಾರೆ, ಯಾರಿಗೂ ಬಡವರ ಕಷ್ಟ ಕಣ್ಣಿಗೆ ಕಾಣುತ್ತಿಲ್ಲಾ ಎಂದು ಆಕ್ರೋಷ ಹೊರಹಾಕಿದ್ದಾರೆ.

ಕಳೆದ ಒಂದು ವಾರದಿಂದ ಜನರು ಪಡಿತರಕ್ಕಾಗಿ ಹರಸಾಹಸ ಪಡುತ್ತಿದ್ದಾರೆ ಆದರೆ ಸ್ಪಂದಿಸುವವರು ಯಾರೂ ಇಲ್ಲದಂತಾಗಿದೆ, ಈ ರಾಜ್ಯ ಸರ್ಕಾರದ ಆಡಳತ ಸತ್ತುಹೊಗಿದೆ, ಕಾಂಗ್ರೇಸ್ ಪಕ್ಷ ಅಧಿಕಾರಕ್ಕೆ ಬರುವ ಮುನ್ನ ಪ್ರತಿ ವ್ಯಕ್ತಿಗೆ ತಲಾ 10 ಕೆ.ಜಿ ಅಕ್ಕಿ ನೀಡುವುದಾಗಿ ಹೇಳಿ ಅಧಿಕಾರಕ್ಕೆ ಬಂತು, ಆದರೆ ಬಂದ ಮೇಲೆ ಉಲ್ಟಾ ಹೊಡೆಯಿತು, ಇಷ್ಟಾದರೂ ಕೇಂದ್ರ ಸರ್ಕಾರ ನೀಡುವ ಅಕ್ಕಿಯೂ ಸಹ ಜನರಿಗೆ ಸರಿಯಾಗಿ ಸಿಗುವ ಹಾಗೆ ವ್ಯವಸ್ಥೆ ಮಾಡದೆ ಇರುವ ರಾಜ್ಯ ಸರ್ಕಾರಕ್ಕೆ ಬಡವರ ಶಾಪ ತಟ್ಟುತ್ತದೆ, ಈ ಸರ್ಕಾರಕ್ಕೆ ಉಳಿಗಾಲವಿಲ್ಲಾ, ಇಂತಹ ಆಡಳಿತ ಮುಂದುವರೆದರೆ ರಾಜ್ಯದಲ್ಲಿ ಜನರು ದಂಗೆ ಏಳುತ್ತಾರೆ ಎಂದು ಭಗವಂತ ಖೂಬಾ ರಾಜ್ಯ ಸರ್ಕಾರಕ್ಕೆ ಎಚ್ಚರಿಸಿದ್ದಾರೆ.

# ರಾಜಿನಾಮೆ ವಿರೋಧಿಸಿ ರಸ್ತೆ ತಡೆ ಚಳುವಳಿ

• **ಮಲ್ಲಮ್ಮ ನುಡಿ ವಾರ್ತೆ ಬೀದರ್**

ಮುಖ್ಯಮಂತ್ರಿ ಅವರನ್ನು ಉದ್ದೇಶಪೂರ್ವಕವಾಗಿ ಮುಖ್ಯಮಂತ್ರಿ ಸ್ಥಾನದಿಂದ ಕೆಳಗಿಳಿಸಲು ಕಾಂಗ್ರೆಸ್ ಪಕ್ಷ ಪ್ರಯತ್ನಿಸಿರುವುದನ್ನು ವಿರೋಧಿಸಿ ಇಂದು(29/05/2026) ಶುಕ್ರವಾರ ಬೆಳಿಗ್ಗೆ 11 ಗಂಟೆಗೆ ಬೀದರ್ ನಗರದ ಅಂಬೇಡ್ಕರ್ ವೃತ್ತದಲ್ಲಿ ರಸ್ತೆ ತಡೆ ನಡೆಸಿ ಪ್ರತಿಭಟನೆ ನಡೆಸಲಾಗುವುದೆಂದು ಶೋಷಿತ ಸಮುದಾಯಗಳ ಒಕ್ಕೂಟದ ಅಧ್ಯಕ್ಷರಾದ ಬಸವರಾಜ ಮಾಳಗೆ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಗುರುವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಅಹಿಂದ ವರ್ಗಗಳ ಮುಖಂಡರು ಹಾಗೂ ಪ್ರಗತಿಪರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಇಂದು ನಡೆಯುವ ಈ ಹೋರಾಟ ಯಶಸ್ವಿಗೊಳಿಸುವಂತೆ ಕರೆ ಕೊಟ್ಟರು.

ಡಿ. ದೇವರಾಜ ಅರಸು ಅವರ ನಂತರ ಸಾಮಾಜಿಕ ನ್ಯಾಯವನ್ನು ಎತ್ತಿಹಿಡಿದ ನಾಯಕ ಸಿದ್ದರಾಮಯ್ಯ. ಅಹಿಂದ ವರ್ಗಗಳ ಬೆಂಬಲದಿಂದ 2023ರಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಿದ್ದು, ಜನರಿಗೆ ನೀಡಿದ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದು ರಾಜ್ಯದ ಜನರ ತಲಾ ಆದಾಯ ಹೆಚ್ಚಿಸುವಲ್ಲಿ ಇವರ ಪಾತ್ರ ಬಹಳಷ್ಟಿದೆ ಎಂದು ತಿಳಿಸಿದರು.



ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಬರಬೇಕಾದ ಜಿಎಸ್‌ಟಿ ಪಾಲಿನ ಹಣವನ್ನು ಪಡೆಯಲು ಮುಖ್ಯಮಂತ್ರಿ ಸಿದ್ದರಾಮಯ್ಯ ದೆಹಲಿಯ ಜಂತರ್ ಮಂತರ್‌ನಲ್ಲಿ ಸಚಿವ ಸಂಪುಟದೊಂದಿಗೆ ಪ್ರತಿಭಟನೆ ನಡೆಸಿ ದೇಶದ ಗಮನ ಸೆಳೆದಿದ್ದರು. ನಂತರ ಸುಪ್ರೀಂ ಕೋರ್ಟ್ ಮೆಟ್ಟಿಲೇರಿದ್ದು, ರಾಜ್ಯದ ಹಕ್ಕಿಗಾಗಿ ಹೋರಾಟ ನಡೆಸಿದ ಬುದ್ದಿವಂತ ರಾಜಕಾರಣಿ ಅವರಾಗಿದ್ದಾರೆ. ಇತ್ತೀಚೆಗೆ ಹಿಂದುಳಿದ ವರ್ಗಗಳ ಶಾಶ್ವತ ಆಯೋಗದಿಂದ ಸಾಮಾಜಿಕ ಹಾಗೂ ಶೈಕ್ಷಣಿಕ ಜಾತಿ ಸಮೀಕ್ಷೆಯ ವರದಿ ಸ್ವೀಕರಿಸಿರುವುದು, ಸಾಮಾಜಿಕ ನ್ಯಾಯದ ಪರವಾದ ಮಹತ್ವದ ಹೆಜ್ಜೆಯಾಗಿದೆ ಎಂದು ಹೇಳಿದ ಅವರು, ಜನಸಂಖ್ಯೆ ಆಧಾರಿತ ಮೀಸಲಾತಿಯನ್ನು ಜಾರಿಗೆ ತರಬೇಕು ಹಾಗೂ ಯಾವುದೇ ಒತ್ತಡಕ್ಕೆ ಮಣಿದು ಸಿದ್ದರಾಮಯ್ಯ ಮುಖ್ಯಮಂತ್ರಿ ಸ್ಥಾನ ತೊರೆಯಬಾರದು ಎಂದು ಮಾಳಗೆ ಆಗ್ರಹಿಸಿದರು.

ಹಿಂದುಳಿದ ಜಾತಿಗಳ ಒಕ್ಕೂಟದ ಅಧ್ಯಕ್ಷರಾದ ಡಾ.ರಾಜಶೇಖರ ಸೇಡಮಕರ್ ಮಾತನಾಡಿ, ಸಿದ್ಧರಾಮಯ್ಯ ಅವರು ಈ ದೇಶದಲ್ಲಿ ಕೇವಲ ಒಬಿಸಿ ಸಮುದಾಯದ ಎಕೈಕ ಮುಖ್ಯಮಂತ್ರಿಗಳಾಗಿದ್ದಾರೆ. ಕಾಂಗ್ರೆಸ್ ಹೈಕಮಾಂಡ್ ಇಂತಹ ಜನಪ್ರಿಯ ನಾಯಕರೊಂದಿಗೆ ಅನ್ಯಾಯ ಮಾಡಬಾರದು. ಒಂದು ವೇಳೆ ಸಿದ್ದರಾಮಯ್ಯ ಅವರನ್ನು ಮುಖ್ಯಮಂತ್ರಿ ಸ್ಥಾನದಿಂದ ತೆರವುಗೊಳಿಸಿದರೆ ಮುಂದಿನ ಚುನಾವಣೆಗಳಲ್ಲಿ ಅದರ ಪರಿಣಾಮ ಎದುರಿಸಬೇಕಾಗುತ್ತದೆ ಎಂದು ಎಚ್ಚರಿಸಿದರು.

ಕಾಂಗ್ರೆಸ್ ಪಕ್ಷದ ಜಿಲ್ಲಾ ಪ್ರಚಾರ ಸಮಿತಿ ಅಧ್ಯಕ್ಷ ಅಮೃತರಾವ ಚಿಮಕೊಡೆ ಮಾತನಾಡಿ, ಹಿಂದೆ ಮಾಜಿ ಮುಖ್ಯಮಂತ್ರಿ ದಿ.ದೇವರಾಜ ಅರಸ್ ಅವರು ಮಲ ಹೊರುವ ಪದ್ದತಿಯನ್ನು ನಿಶೇಧಿಸಿದ್ದರು. ಜಮಿನು ಉಳುವವರಿಗೆ ಮಾಲಿಕತ್ವ ಹಕ್ಕು ನೀಡಿದ್ದರು. ಅದೇ ಮಾದರಿಯಲ್ಲಿ ಸಿದ್ಧರಾಮಯ್ಯನವರು ಪಂಚ ಗ್ಯಾರಂಟಿಗಳನ್ನು ರಾಜ್ಯಕ್ಕೆ ಪರಿಚಯಿಸಿ ಬಡವ, ಶ್ರೀಮಂತ, ಜಾತಿ ಭೇದ, ಪಕ್ಷ ಭೇದ ಯಾವುದನ್ನು ಲೆಕ್ಕಿಸದೆ ಎಲ್ಲರಿಗೂ ಅವನ್ನು ವಿಸ್ತರಿಸಿ ಸರ್ವರಿಗೂ ಸಮಪಾಲು, ಸಮಬಾಳು ಕರುಣಿಸಿದ ನಾಯಕ ಸಿದ್ಧರಾಮಯ್ಯನವರು. ಅವರನ್ನು ಕಾಂಗ್ರೆಸ್ ವರಿಷ್ಟರು ರಾಜಿನಾಮೆ ಪಡೆಯಬಾರದೆಂದು ಒತ್ತಾಯಿಸಿದರು.

ಒಬಿಸಿ ಆರ್ಮಿ ಅಧ್ಯಕ್ಷ ತಾನಾಜಿ ಸಗರ ಮಾತನಾಡಿ, ಸಿದ್ಧರಾಮಯ್ಯನವರು ಹಿಂದುಳಿದ ಜಾತಿಗಳ ಉದ್ಧಾರಕರಾಗಿದ್ದ ಕಾರಣ ಒಬಿಸಿ ಸಮುದಾಯ ಕಾಂಗ್ರೆಸ್ ಪಕ್ಷದ ಪರವಾಗಿ ನಿಂತಿದ್ದರಿಂದ 2023ರಲ್ಲಿ 136 ಸೀಟುಗಳು ಬರಲು ಸಾಧ್ಯವಾಗಿದೆ. ಅವರ ರಾಜಿನಾಮೆ ಪಡೆದರೆ ಭವಿಷ್ಯದಲ್ಲಿ ಎಲ್ಲ ಒಬಿಸಿ ಜಾತಿಗಳು ಕೈ ಪಾಳಯಕ್ಕೆ ತಕ್ಕ ಉತ್ತರ ನೀಡುತ್ತವೆ ಎಂದು ಎಚ್ಚರಿಸಿದರು.

ಒಬಿಸಿ ಆರ್ಮಿ ಪ್ರಧಾನ ಕಾರ್ಯದರ್ಶಿ ಶುರಾಜಕುಮಾರ ಟೀಳ್ಕೆಕರ್, ಭಾರತೀಯ ಭೀಮಸೇನೆ ರಾಷ್ಟ್ರೀಯ ಉಪಾಧ್ಯಕ್ಷ ಅಶೋಕ ಮಾಳಗೆ, ಅಹಿಂದ ವರ್ಗಗಳ ಒಕ್ಕೂಟದ ಜಿಲ್ಲಾಧ್ಯಕ್ಷ ತುಕಾರಾಮ ಚಿಮಕೋಡೆ ಮಾತನಾಡಿದರು. ಗೊಂಡ ಸಂಘಟನೆಗಳ ಒಕ್ಕೂಟದ ಜಿಲ್ಲಾಧ್ಯಕ್ಷ ಪಂಡಿತ ಹಾವಗೊಂಡ, ಮುಖಂಡರಾದ ರಮೇಶ್ ಪೋಳ್, ವೈಜಿನಾಥ ಪೋಳ್ ಸೇರಿದಂತೆ ಹಲವರು ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

## ಈಶ್ವರ ಖಂಡ್ರೆಗೆ ಡಿಸಿಎಂ ಹುದ್ದೆಗೆ ಆಗ್ರಹ

• **ಮಲ್ಲಮ್ಮ ನುಡಿ ವಾರ್ತೆ ಬೀದರ್**

ರಾಜ್ಯದಲ್ಲಿ ರಚನೆ ಆಗಲಿರುವ ಹೊಸ ಸರ್ಕಾರದಲ್ಲಿ ಅರಣ್ಯ, ಪರಿಸರ, ಜೀವಶಾಸ್ತ್ರ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರಿಗೆ ಉಪ ಮುಖ್ಯಮಂತ್ರಿ ಹುದ್ದೆ ಕೊಡಬೇಕು ಎಂದು ಕಾಂಗ್ರೆಸ್ ಜಿಲ್ಲಾ ಘಟಕದ ಪ್ರಧಾನ ಕಾರ್ಯದರ್ಶಿ ವಿನೋದಕುಮಾರ ಅಪ್ಪೆ ಒತ್ತಾಯಿಸಿದ್ದಾರೆ.

ಎರಡು ಬಾರಿ ಸಚಿವರಾಗಿ ಅತ್ಯುತ್ತಮವಾಗಿ ಕಾರ್ಯ ನಿರ್ವಹಿಸಿದ್ದಾರೆ. ವಿವಿಧ ಯೋಜನೆಗಳ ಮೂಲಕ ರಾಜ್ಯದ ಅಭಿವೃದ್ಧಿಗೆ ಅವಿರತ ಶ್ರಮಿಸಿದ್ದಾರೆ. ಕ್ರಿಯಾಶೀಲ ಸಚಿವರಾಗಿದ್ದಾರೆ. ರಾಜ್ಯದಾದ್ಯಂತ ತಮ್ಮ ಬೆಂಬಲಿಗರ ಪಡೆಯನ್ನು ಹೊಂದಿದ್ದಾರೆ ಎಂದು ತಿಳಿಸಿದ್ದಾರೆ.

ಕಲ್ಯಾಣ ಕರ್ನಾಟಕದ ಪ್ರಭಾವಿ ನಾಯಕರಲ್ಲಿ ಒಬ್ಬರಾಗಿದ್ದಾರೆ. ಎಲ್ಲ ಜಾತಿ, ಸಮುದಾಯಗಳ ಜನರನ್ನು ಒಟ್ಟಿಗೆ ತೆಗೆದುಕೊಂಡು ಹೋಗುವ ವಿಶೇಷತೆ ಅವರದ್ದಾಗಿದೆ. ಉಪ ಮುಖ್ಯಮಂತ್ರಿ



ಸ್ಥಾನಕ್ಕೆ ಬೇಕಾದ ಎಲ್ಲ ಅರ್ಹತೆಗಳೂ ಅವರಲ್ಲಿ ಇವೆ ಎಂದು ಹೇಳಿದ್ದಾರೆ. ಬೀದರ್ ಜಿಲ್ಲೆಗೆ ಈವರೆಗೂ ಉಪ ಮುಖ್ಯಮಂತ್ರಿ ಸ್ಥಾನ ಸಿಕ್ಕಿಲ್ಲ. ಹೀಗಾಗಿ ಸಾಮಾಜಿಕ ನ್ಯಾಯದ ಆಧಾರದಲ್ಲಿ ಈ ಬಾರಿ ಈಶ್ವರ ಖಂಡ್ರೆ ಅವರಿಗೆ ಉಪ ಮುಖ್ಯಮಂತ್ರಿ ಹುದ್ದೆ ನೀಡಬೇಕು ಎಂದು ಆಗ್ರಹಿಸಿದ್ದಾರೆ.

## ಶುಲ್ಕ ವಸೂಲಿ ಹಾವಳಿ ತಡೆ: ಬಿಇಒಗೆ ಮನವಿ

• **ಮಲ್ಲಮ್ಮ ನುಡಿ ವಾರ್ತೆ ಬಸವಕಲ್ಯಾಣ**

ತಾಲೂಕಿನಲ್ಲಿ ಖಾಸಗಿ ಶಾಲಾ ಕಾಲೇಜುಗಳಲ್ಲಿ ಹಾಗೂ ಕನ್ನಡ ಮಾಧ್ಯಮ ಮತ್ತು ಆಂಗ್ಲ ಮಾಧ್ಯಮ ಒಂದನೇ ತರಗತಿಯಿಂದ ಪದವಿವರೆಗೆ ಉಚಿತ ಶಿಕ್ಷಣ ನೀಡುವಂತೆ ಶುಲ್ಕ ಹಾವಳಿ ತಡೆಯಲು ಆಗ್ರಹಿಸಿ ವಿವಿಧ ಸಂಘಟನೆಗಳ ಪದಾಧಿಕಾರಿಗಳು ಮುಖ್ಯಮಂತ್ರಿ ಸಿದ್ದರಾಮಯ್ಯ ನವರಿಗೆ ಬರೆದ ಮನವಿ ಪತ್ರವನ್ನು ಬಿಇಒ ಸಿದ್ದವೀರಯ್ಯ ಅವರಿಗೆ ಸಲ್ಲಿಸಿದರು.

1ನೇ ತರಗತಿಯಿಂದ ಪಿಯುಸಿ ಹಾಗೂ ವಿದ್ಯಾರ್ಥಿಗಳಿಗೆ ಕಾಲೇಜು ದಾಖಲಾಗುವಾಗ ಕಾಲೇಜನವರ ಯಾವುದೇ ಶುಲ್ಕ ಪಡೆಯಬಾರದೆಂದು. ಸಮಾಜ ಕಲ್ಯಾಣ ಇಲಾಖೆ ಆದೇಶ ಆದರೆ ಪ್ರತಿ ವಿದ್ಯಾರ್ಥಿಗಳಿಂದ ದಾಖಲಾಗುವ ಸಮಯದಲ್ಲಿ ಕಾಲೇಜು ಶುಲ್ಕ ಪಡೆಯುತ್ತಿದ್ದು ಇದರ ಬಗ್ಗೆ ಕೂಡಲೇ ಕರ್ಮ ಕೈಗೊಳ್ಳಬೇಕು. 2 ಕಾಲೇಜು ಶುಲ್ಕವನ್ನು ಕಟ್ಟುವಾಗ ವಿಶ್ವವಿದ್ಯಾನಿಲಯಗಳು ತೀರ್ಮಾನಿಸಿರುವ ವಿಷಯಗಳ ಶುಲ್ಕ ಗಳನ್ನು ಮಾತ್ರ ಪಡೆಯಬೇಕೆಂದು ಆದೇಶವಿದ್ದರೂ ಆದೇಶಗಳಂತೆ ಕಾಲೇಜಿನವರು



ನಡೆದುಕೊಳ್ಳದೆ ತಮ್ಮ ಮನಸ್ಸಿಗೆ ಬಂದಂಗೆ ಕಾಲೇಜಿನವರು ಶುಲ್ಕ ವಸೂಲಿ ಮಾಡುತ್ತಿದ್ದವು ಕೂಡಲೇ ಸರ್ಕಾರ ಇತ್ತಕಡೆ ಗಮನ ಹರಿಸಬೇಕು. ಕಟ್ಟಡ ನಿರ್ಮಾಸಿ ಹತ್ತಾರು ವರ್ಷಗಳಾದರು ಕಟ್ಟಡ ಕಟ್ಟುವ ಹೆಸರಿನಲ್ಲಿ ದೇಣಿಗೆ ತೆಗೆದುಕೊಳ್ಳುತ್ತಿದ್ದಾರೆ ಬಟ್ಟೆ, ಭ್ಯಾಗ ನೋಟ್ ಬುಕ್ ಕಡೂತ್ತೇವೆ ಎಂದು ಪಾಲಕರಿಂದ ಬಲವಂತವಾಗಿ ಹಣ ಪಡೆಯುತ್ತಿದ್ದಾರೆ. ಆದರು ಮಕ್ಕಳಿಗೆ ಮೂಲ ಬೂತ್ ಸೌಲಭ್ಯಗಳನ್ನು ಒದಗಿಸುತ್ತಿಲ ಎಂದು ದೂರಿದ್ದಾರೆ.

ಈ ಸಂದರ್ಭದಲ್ಲಿ ಆಲ್ ಇಂಡಿಯಾ ಸಮತಾ ಸೈನಿಕ ದಳದ ತಾಲೂಕ ಅಧ್ಯಕ್ಷರಾದ ಮಾರುತಿ ಪುಲೆ ಕಿಟ್ಟಾ, ಶಂಕರ ಜಮಾದರ, ರೈತ ಸಂಘದ ವೀರಾರಡ್ಡಿ ಪಾಟೀಲ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಗೊಂಡ ನೌಕರರ ಸಂಘದಿಂದ ಕ್ಷೇತ್ರ ಶಿಕ್ಷಣಾಧಿಕಾರಿಗೆ ಮನವಿ

• **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ**

ತಾಲೂಕು ಗೊಂಡ (ಕುರುಬ) ನೌಕರರ ಸಂಘದ ವತಿಯಿಂದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಅಧಿಕೃತ ಮನವಿ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಸಂಘದ ಅಧ್ಯಕ್ಷ ಅರ್ಜುನ ಸೂರ್ಯವಂಶಿ ಮಾತನಾಡಿ, ತಳಮಟ್ಟದಲ್ಲಿ ಗೊಂಡ (ಕುರುಬ) ನೌಕರರನ್ನು ಸಂಘಟನೆಯನ್ನು ಸಂಘಟಿತಗೊಳಿಸಿ ಶೈಕ್ಷಣಿಕ, ಸಾಮಾಜಿಕ ಹಾಗೂ ಸೇವಾ ಚಟುವಟಿಕೆಗಳ ಮೂಲಕ ಸಮಾಜದ ಅಭಿವೃದ್ಧಿಗೆ ಕೈಜೋಡಿಸುವ ಕಾರ್ಯ ಮಾಡುತ್ತೇವೆ.

ತಾಲೂಕಿನ ಗೊಂಡ (ಕುರುಬ) ನೌಕರರ ಸಂಘವು ಅಧಿಕೃತವಾಗಿ ನೊಂದಾಯಿತ ಸಂಘಟನೆಯಾಗಿರುವುದರಿಂದ ಶೈಕ್ಷಣಿಕವಾಗಿ ನಡೆಯುವ ವಿವಿಧ ಪೂರ್ವಸಿದ್ಧತಾ ಸಭೆ, ಸಮಾರಂಭಗಳಲ್ಲಿ ಮತ್ತು ಸರ್ಕಾರಿ ಕಾರ್ಯಕ್ರಮಗಳಲ್ಲಿ ತಾಲೂಕು ಗೊಂಡ (ಕುರುಬ) ನೌಕರರ ಸಂಘವನ್ನು ಅಧಿಕೃತವಾಗಿ ಆಹ್ವಾನಿಸಿ ಭಾಗವಹಿಸಲು ಅವಕಾಶ ಕಲ್ಪಿಸಬೇಕೆಂದು ಮನವಿಯಲ್ಲಿ ಕೋರಲಾಯಿತು.



ಮನವಿ ಸ್ವೀಕರಿಸಿದ ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ಜಿ. ಹಳ್ಳದ ಮಾತನಾಡಿ, ಸಮಾಜದ ಸಂಘಟನೆಗಳು ಶೈಕ್ಷಣಿಕ ಹಾಗೂ ಸಾಮಾಜಿಕ ಕ್ಷೇತ್ರದಲ್ಲಿ ಸಕಾರಾತ್ಮಕ ಸೇವಾ ಕಾರ್ಯಗಳನ್ನು ಕೈಗೊಳ್ಳುವ ಮೂಲಕ ಸಮಾಜದ ಏಳಿಗೆಗೆ ಶ್ರಮಿಸಬೇಕು. ಮುಂದಿನ ದಿನಗಳಲ್ಲಿ ನಡೆಯುವ ಸಭೆ-ಸಮಾರಂಭಗಳಿಗೆ ಸಂಘದ ಪದಾಧಿಕಾರಿಗಳನ್ನು ಆಹ್ವಾನಿಸಲಾಗುವುದು ಎಂದು ಭರವಸೆ ನೀಡಿದರು. ಶಿವಕುಮಾರ ಫುಲಾರಿ ಪತ್ರಾಂಕಿತ ವ್ಯವಸ್ಥಾಪಕರು ಮಾತನಾಡಿ ಸಂಘವು ನೌಕರರಲ್ಲಿ ಐಕ್ಯತೆ, ಸಹಕಾರ ಹಾಗೂ ಸೇವಾ ಮನೋಭಾವ ಬೆಳೆಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸಬೇಕು, ಸಮಾಜಮುಖಿ ಕಾರ್ಯಕ್ರಮಗಳ ಮೂಲಕ ಯುವ ಪೀಳಿಗೆಗೆ ಪ್ರೇರಣೆಯಾಗುವ ಕೆಲಸ ಮಾಡಬೇಕೆಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಬಿ.ಆರ್.ಸಿ ರಾಜಕುಮಾರ ಜೋಳದಾಪಕೆ, ಎಡಿಪಿಐ ಮಲ್ಲಿನಾಥ ಸಜ್ಜನ, ಇಸಿಓ ಮಲ್ಲಿಕಾರ್ಜುನ ಕನ್ನಳೆ, ದತ್ತು ಕಾಟಕರ, ಕಾರ್ಯದರ್ಶಿ ಆನಂದ ಹಳೆಂಬರ, ಪಂಡಿತ ಬಿರಾದಾರ, ಬಸವಂತ ಶೇರಿಕಾರ, ಮಹಾನಂದಾ ಅಪ್ಪೆ, ಹಣಮಶೆಟ್ಟಿ ಸಿದ್ದೇಶ್ವರೆ, ಚನ್ನಪ್ಪ ಮೇತ್ರೆ, ಚಂದ್ರಕಾಂತ ತಳವಾಡೆ, ಸತೀಶ ಸಿದ್ದೇಶ್ವರೆ, ಜಾಲಿಂದರ ಮೇತ್ರೆ, ದಯಾನಂದ ಕಣಜೆ, ಸತೀಶ ಗುಂಜರ್ಗೆ, ಅಶೋಕ ಮಲ್ಲೇಶಿ, ದೇವಿದಾಸ ಮೇತ್ರೆ, ರೋಹಿದಾಸ, ಧನರಾಜ ಮೇತ್ರೆ, ಮಲ್ಲಿಕಾರ್ಜುನ ಮಲ್ಲೇಶಿ, ದಿಗಂಬರ ಮೇತ್ರೆ ಸೇರಿದಂತೆ ಅನೇಕ ನೌಕರರು ಉಪಸ್ಥಿತರಿದ್ದರು.

## ಮುಂಗಾರು ಹಂಗಾಮಿನ ಬಿತ್ತನೆ ಬೀಜ ವಿತರಣೆಗೆ ಚಾಲನೆ

• **ಮಲ್ಲಮ್ಮ ನುಡಿ ವಾರ್ತೆ ಬೀದರ್**

ಈ ಬಾರಿ ಉತ್ತಮ ಮಳೆಯಾಗುವ ನಿರೀಕ್ಷೆ ಇದ್ದು, ರೈತರು ಸಮಯಕ್ಕೆ ಸರಿಯಾಗಿ ಬಿತ್ತನೆ ಕಾರ್ಯ ಆರಂಭಿಸಬೇಕು. ಸರ್ಕಾರದ ವತಿಯಿಂದ ಗುಣಮಟ್ಟದ ಬೀಜ ಹಾಗೂ ರಸಗೊಬ್ಬರವನ್ನು ರೈತರಿಗೆ ತಲುಪಿಸುವ ಕೆಲಸ ನಡೆಯುತ್ತಿದೆ. ರೈತರು ಯಾವುದೇ ಮಧ್ಯವರ್ತಿಗಳ ಮಾತಿಗೆ ಒಳಗಾಗದೆ ಕೃಷಿ ಇಲಾಖೆಯ ಸಲಹೆ ಪಡೆದು ಬೆಳೆ ಬೆಳೆಸಬೇಕು ಎಂದು ಬೀದರ್ ದಕ್ಷಿಣ ಕ್ಷೇತ್ರದ ಶಾಸಕರಾದ ಡಾ. ಶೈಲೇಂದ್ರ ಬೆಲ್ದಾಳೆ ಅವರು ಹೇಳಿದರು.

ಬೀದರ್ ದಕ್ಷಿಣ ಕ್ಷೇತ್ರದ ಮನ್ನಳ್ಳಿ ಗ್ರಾಮದಲ್ಲಿ ಕೃಷಿ ಇಲಾಖೆ ವತಿಯಿಂದ ಆಯೋಜಿಸಲಾದ ರೈತರಿಗೆ ಮುಂಗಾರು ಹಂಗಾಮಿನ ಬಿತ್ತನೆ ಬೀಜ ವಿತರಣೆಗೆ ಚಾಲನೆ ನೀಡಿ ಅವರು ಮಾತನಾಡಿದರು.

ಸೋಯಾಬೀನ್, ತೊಗರಿ, ಹೆಸರು ಹಾಗೂ ಉದ್ದು ಬೆಳೆಗಳು ರೈತರಿಗೆ ಉತ್ತಮ ಆದಾಯ ತರುವ ಬೆಳೆಗಳಾಗಿದ್ದು, ವೈಜ್ಞಾನಿಕ ಕೃಷಿ ಪದ್ಧತಿಯನ್ನು ಅನುಸರಿಸಿದರೆ ಇನ್ನಷ್ಟು ಉತ್ತಮ ಉತ್ಪಾದನೆ ಪಡೆಯಬಹುದು. ಕೃಷಿಯಲ್ಲಿ ಹೊಸ ತಂತ್ರಜ್ಞಾನ ಅಳವಡಿಸಿಕೊಂಡು ಕಡಿಮೆ ವೆಚ್ಚದಲ್ಲಿ ಹೆಚ್ಚು ಲಾಭ ಪಡೆಯುವತ್ತ ಗಮನ ಹರಿಸಬೇಕು ಎಂದರು.

ಕೇಂದ್ರ ಹಾಗೂ ರಾಜ್ಯ ಸರ್ಕಾರ ರೈತರ ಪರವಾಗಿ ಹಲವಾರು ಯೋಜನೆಗಳನ್ನು ಜಾರಿಗೆ ತಂದಿದ್ದು, ಪ್ರತಿಯೊಬ್ಬ ರೈತನಿಗೂ ಅದರ ಸೌಲಭ್ಯ ತಲುಪಿಸುವ ಕೆಲಸ ನಿರಂತರವಾಗಿ ನಡೆಯಲಿದೆ. ರೈತರ ಸಮಸ್ಯೆಗಳಿಗೆ ಸ್ಪಂದಿಸುವುದು ನಮ್ಮ ಮೊದಲ ಆದ್ಯತೆಯಾಗಿದೆ ಎಂದು ತಿಳಿಸಿದರು.





ನಮ್ಮ ಬೀದರ್ ದಕ್ಷಿಣ ಕ್ಷೇತ್ರ ಕೃಷಿ ಪ್ರಧಾನ ಕ್ಷೇತ್ರವಾಗಿದೆ. ಇಲ್ಲಿನ ರೈತರು ಶ್ರಮಜೀವಿಗಳು. ನಿಮ್ಮ ಪರಿಶ್ರಮದಿಂದಲೇ ಈ ಭಾಗದ ಅಭಿವೃದ್ಧಿ ಸಾಧ್ಯವಾಗಿದೆ. ರೈತರ ಸಮಸ್ಯೆಗಳಿಗೆ ಸ್ಪಂದಿಸುವುದು ನನ್ನ ಕರ್ತವ್ಯವಾಗಿದೆ. ನೀರಾವರಿ, ರಸ್ತೆ, ವಿದ್ಯುತ್, ಕೃಷಿ ಸಂಪರ್ಕ ರಸ್ತೆ ಸೇರಿದಂತೆ ರೈತರ ಅನುಕೂಲಕ್ಕೆ ಬೇಕಾದ ಎಲ್ಲಾ ಅಭಿವೃದ್ಧಿ ಕಾಮಗಾರಿಗಳಿಗೆ ನಾನು ಸದಾ ಆದ್ಯತೆ ನೀಡುತ್ತೇನೆ.

ಈ ಕಾರ್ಯಕ್ರಮದ ಮೂಲಕ ರೈತರಿಗೆ ಸಮಯಕ್ಕೆ ಸರಿಯಾಗಿ ಬೀಜ ಹಾಗೂ ರಸಗೊಬ್ಬರ ವಿತರಣೆ ಆಗುತ್ತಿರುವುದು ಸಂತಸದ ವಿಚಾರ. ರೈತರು ಗುಣಮಟ್ಟದ ಬೀಜ ಬಳಸಿ ಉತ್ತಮ ಬೆಳೆ ಬೆಳೆಯಬೇಕು. ಕೃಷಿಯಲ್ಲಿ ನಷ್ಟವಾಗದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ಅನುಸರಿಸಬೇಕು ಎಂದು ರೈತರಿಗೆ ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಜಂಟಿ ಕೃಷಿ ನಿರ್ದೇಶಕರಾದ ದೇವಿಕಾ ಆರ್, ಸಹಾಯಕ ಕೃಷಿ ನಿರ್ದೇಶಕಿ ಆರತಿ ಪಾಟೀಲ್, ಮುಖಂಡರಾದ ಅನೀಲ್ ಪನ್ನಾಳೆ, ಚಂದು ಮಡಕಿ, ವಿಜಯಕುಮಾರ ಗಣಪುರ, ಮಲ್ಲಿಕಾರ್ಜುನ ಮೂಲಗಿ, ಸಂಜುಕುಮಾರ ಕೋಳಿ, ಗುಂಡಪ್ಪ ಬುಧೇರಾ, ಭೀಮರೆಡ್ಡಿ, ರಾಜ ರೆಡ್ಡಿ, ದೀಪಕ ಕುಲಕರ್ಣಿ, ಪರಮೇಶ ಪಾಟೀಲ, ಬಕ್ಕಪ್ಪ, ಮನ್ನಳ್ಳಿ ರೈತ ಸಂಪರ್ಕ ಕೇಂದ್ರ ಅಧಿಕಾರಿ, ವಿಜಯಕುಮಾರ, ಬಗದಲ ರೈತ ಸಂಪರ್ಕ ಕೇಂದ್ರ ಅಧಿಕಾರಿ ಅಂಬುಜಾ, ಕಮಠಾಣಾ ರೈತ ಸಂಪರ್ಕ ಕೇಂದ್ರ ಅಧಿಕಾರಿ ಸೌಮ್ಯ, ಚಿಟ್ಟಾ ರೈತ ಸಂಪರ್ಕ ಕೇಂದ್ರ ಅಧಿಕಾರಿ ಗಿರಿಶ, ಬೀದರ್ ತಾಂತ್ರಿಕ ಕೃಷಿ ವ್ಯವಸ್ಥಾಪಕರಾದ ಸತೀಶ ಕುಮಾರ ಶೇಟಕಾರ, ಅರುಣಕುಮಾರ ಮತ್ತಿತರರು ಉಪಸ್ಥಿತರಿದ್ದರು.

## ಶ್ರದ್ಧೆ ಭಕ್ತಿಯಿಂದ ಜರುಗಿದ ಗಂಗಾಪರಮೇಶ್ವರಿ ಜಾತ್ರಾ ಮಹೋತ್ಸವ

• ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ

ಸಮೀಪದ ಹೇರೂರು ಗ್ರಾಮದಲ್ಲಿ ಶ್ರೀ ಗಂಗಾಪರಮೇಶ್ವರಿ ಸೇವಾ ಸಮಿತಿ ಶ್ರೀ ಅಂಬಿಗರ ಚೌಡಯ್ಯ ಯುವಕ ಸಂಘ ಇವರ ಆಶ್ರಯದಲ್ಲಿ ಶ್ರೀ ಗಂಗಾಪರಮೇಶ್ವರಿ ದೇವಿಯ ಜಾತ್ರಾ ಮಹೋತ್ಸವ ಹಾಗೂ ಸಾಮೂಹಿಕ ವಿವಾಹಗಳು ಅದ್ದೂರಿಯಾಗಿ ವೈಭವದಿಂದ ಜರುಗಿದವು ಜಾತ್ರಾ ಮಹೋತ್ಸವದ ಅಂಗವಾಗಿ ದೇವಸ್ಥಾನದಲ್ಲಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಜರುಗಿದವು ನಂತರ ಶ್ರೀ ಗಂಗಾಪರಮೇಶ್ವರಿ ದೇವಿಯ ಭಾವಚಿತ್ರದ ಮೆರವಣಿಗೆಯು ಕುಂಭ ಕಳಸದೊಂದಿಗೆ ಹೇರೂರು ಗ್ರಾಮದ ಎಲ್ಲಾ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿತು ಸಾಮೂಹಿಕ ವಿವಾಹಗಳು ಜರುಗಿದ ನಂತರ ಭಕ್ತಾದಿಗಳಿಗೆ ಮತ್ತು ಸಾರ್ವಜನಿಕರಿಗೆ ಅನ್ನ ಸಂತರ್ಪಣೆ ವ್ಯವಸ್ಥೆ ನಡೆಯಿತು ಹೇರೂರು ಗ್ರಾಮದ ವೀರಶೈವ ಲಿಂಗಾಯತ ಸಮಾಜದ ಅಧ್ಯಕ್ಷರಾಗಿರುವ ಶಶಿಧರ್ ಗೌಡ ಮಾಲಿ ಪಾಟೀಲ್ ಮಾತನಾಡಿ ಸಾಮೂಹಿಕ ವಿವಾಹಗಳಿಂದ ದುಂದು ವೆಚ್ಚಕ್ಕೆ ಕಡಿವಾಣ ಹಾಕಲು ಅತ್ಯಂತ ಸಹಕಾರಿಯಾಗಿದೆ. ವಿಶೇಷವಾಗಿ ದೇವಿಯ ಸನ್ನಿಧಾನದಲ್ಲಿ ನೂತನ ದಾಂಪತ್ಯ ಜೀವನಕ್ಕೆ ಪಾದಾರ್ಪಣೆ ಮಾಡುತ್ತಿರುವ ವಧು-ವರರು ಸುಖ ಶಾಂತಿ ಹಾಗೂ ಸಮೃದ್ಧ ಜೀವನಕ್ಕೆ ಅಮ್ಮನವರು ಅನುಗ್ರಹ ನೀಡುವಂತಾಗಲಿ ಎಂದು ತಿಳಿಸಿದರು ಈ ಸಂದರ್ಭದಲ್ಲಿ ಗ್ರಾಮದ ಪ್ರಮುಖರಾಗಿರುವ ಮಂಜುನಾಥ ರೆಡ್ಡಿ ವಗರನಾಳ ಹಾಗೂ ಹೇರೂರು ಗ್ರಾಮದ ಸುತ್ತಮುತ್ತಲಿನ ಗ್ರಾಮಗಳ ಸಕಲ ಸದ್ಭಕ್ತರು ಗಣ್ಯರು ಜಾತ್ರಾ ಮಹೋತ್ಸವದಲ್ಲಿ ಪಾಲ್ಗೊಂಡಿದ್ದರು

## ಅಂಕೋಲಾ ಸುನ್ನಿ ಅಸೋಸಿಯೇಶನ್ ವತಿಯಿಂದ ಸಂಭ್ರಮದ ಬಕ್ರೀದ್ ಹಬ್ಬ ಆಚರಣೆ



• ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ

ಇಂದು ಮೇ 28 ರ ಗುರುವಾರದಂದು ಅಂಕೋಲಾದ ಮುಸ್ಲಿಂ ಬಾಂಧವರು ಅಂಕೋಲಾ ಸುನ್ನಿ ಅಸೋಸಿಯೇಶನ್ ಆವರಣದಲ್ಲಿ ಸಂಭ್ರಮದಿಂದ ಈದ್ ಉಲ್ ಅದಾ (ಬಕ್ರೀದ್) ಹಬ್ಬ ಆಚರಣೆಯನ್ನು ವಿಜೃಂಭಣೆಯಿಂದ ಆಚರಿಸಿದರು. ಸರಿಯಾಗಿ ಬೆಳಿಗ್ಗೆ 8 ಗಂಟೆಗೆ ನಮಾಜ್ ಪ್ರಾರ್ಥನೆಯನ್ನು ಕೈಗೊಳ್ಳಲಾಯಿತು. ಮೌಲ್ವಿಗಳು ಬಕ್ರೀದ ಹಬ್ಬದ ಆಚರಣೆ, ಮಹತ್ವ ಮತ್ತು ನಡೆದುಕೊಳ್ಳಬೇಕಾದ ರೀತಿಯನ್ನು ಮತ್ತು ಸಂಪ್ರದಾಯವನ್ನು ಮುಂದುವರೆಸಿಕೊಂಡು ಹೋಗುವಂತೆ ತಿಳಿಹೇಳುತ್ತ ಸಾರ್ವಜನಿಕ ಪ್ರಾರ್ಥನೆಯನ್ನು ಕೈಗೊಂಡು ಭಾರತ ದೇಶದ ಸರ್ವ ಸಮಾಜದ ಎಲ್ಲ ಬಾಂಧವರಿಗೂ ಬಕ್ರೀದ್ ಹಬ್ಬದ ಶುಭವನ್ನು ಕೋರಿ ಪ್ರಾರ್ಥನೆ ಕೈಗೊಂಡರು.

ಕೊಲ್ಲಿ ರಾಷ್ಟ್ರದಲ್ಲಿ ಯುದ್ಧ ಭೀತಿಯಿಂದ ದೇಶದಲ್ಲಿ ಸಂಚಾರ ವ್ಯವಸ್ಥೆಗೆ ಪೆಟ್ರೋಲ್ ದುಬಾರಿ ಬೆಲೆ ತೆತ್ತಬೇಕಾಗಿದೆ. ಯುದ್ಧ ಕೂಡಲೇ ನಿಲ್ಲಲಿ ಎಂದು ಎಲ್ಲರೂ ಪ್ರಾರ್ಥಿಸುವ ಎಂದರು. ಲಲಾಯನ್ನ ಸಾಧಿಕ, ಅಬ್ದುಲ್ ಖಾದರಖಾನ್, ಲಾಯನ್ಸ್ ಕ್ಲಬ್ ಅಧ್ಯಕ್ಷರು ಕಾರವಾರ, ಅಬ್ದುಲ್ ಖಯಾಮ್‌ಮುಲ್ಲಾ, ನಿವೃತ್ತ ರಾಷ್ಟ್ರಪ್ರಶಸ್ತಿ ವಿಜೇತ ಶಿಕ್ಷಕರು ಅಕ್ಬರ್ ಯಾನೆ ಅನ್ವರ್ ಮುಲ್ಲಾ, ಅಖ್ತರ ಜೆ. ಸೈಯದ್ ಜಿಲ್ಲಾ ಪತ್ರಿಕಾ ವರದಿಗಾರರು, ಅಮೀರ್ ಖುರೇಶಿ, ಅಲಿಶೇಖ್ ಬಾಬರ್, ಫೈರೋಜ ಇಸ್ಮಾಯಿಲ್ ಶೇಖ್, ಅಶ್ರಫ್ ಮೈದನ್ ಶೇಖ್, ಫಹಿಮ್ ಅಬ್ದುಲ್ ಖಯಾಂಮುಲ್ಲಾ, ಫೈರೋಜ್ ಮಹಮ್ಮದ್ ಶೇಖ್, ಅಬ್ದುಲ್ ಕರೀಮ್ ಮಹಮ್ಮದ ಸಾದಿಯಾ ಶೇಖ್, ಅನ್ವರ್ ಅಲಿಸಾಬ್ ಶೇಖ್, ಸಮೀರ ಇಸೂಬ್ ಶೇಖ್, ಅಬ್ದುಲ್ ಮುತಾಲಿಫ್ ಶೇಖ್ ಇತರ ಮುಖಂಡರು ಬಕ್ರೀದ್ ಹಬ್ಬದ ನಮಾಜ್ ಪ್ರಾರ್ಥನೆಯಲ್ಲಿ ಭಾಗವಹಿಸಿ ಸರ್ವರಿಗೂ ಶುಭ ಕೋರಿದರು. ಆಗಮಿಸಿದ ಎಲ್ಲರಿಗೂ ಸಿಹಿ ಶಾವಿಗೆ ಹಾಗೂ ತಿಂಡಿ ವ್ಯವಸ್ಥೆಯನ್ನು ಮಾಡಿದ್ದು ಬಕ್ರೀದ್ ಹಬ್ಬ ನಮಾಜ್‌ನ್ನು ಅತ್ಯಂತ ಸಂಭ್ರಮದಿಂದ ಆಚರಿಸಿದರು. ಅಖ್ತರ್ ಸೈಯದ್ ಜಿಲ್ಲಾ ವರದಿಗಾರರು ಸರ್ವರಿಗೂ ಬಕ್ರೀದ್ ಹಬ್ಬದ ಶುಭಾಶಯ ಕೋರಿದರು.

## ಸಿಡಿಲಿಗೆ ಮಹಿಳೆ ಬಲಿ



• ಮಲ್ಲಮ್ಮ ನುಡಿ ವಾರ್ತೆ ಹುಣಸೂರು

ಮೇ.28– ಕೃಷಿ ಕೆಲಸಕ್ಕೆ ತೆರಳಿದ ರೈತ ಮಹಿಳೆಯೊಬ್ಬರಿಗೆ ಇಂದು ಮದ್ಯಾಹ್ನ ಸಿಡಿಲು ಬಡಿದು ಸ್ಥಳದಲ್ಲೆ ಮೃತ ಪಟ್ಟಿರುವ ಘಟನೆ ತಾಲೂಕಿನ ಕಸಬಾ ಹೋಬಳಿ ಹೊಸಪುರ ಗ್ರಾಮದಲ್ಲಿ ಸಂಭವಿಸಿದೆ.ಗ್ರಾಮದ ಬೋರೆಗೌಡರ ಪತ್ನಿ ಯಶೋದಮ್ಮ( 65 ವರ್ಷ) ಎಂಬುವವರೆ ಸಿಡಿಲ ಬಡಿತಕ್ಕೆ ಸಿಲುಕಿ ಸ್ಥಳದಲ್ಲೇ ಮೃತಪಟ್ಟ ನತದೃಷ್ಟ ರೈತ ಮಹಿಳೆಯಾಗಿದ್ದಾರೆ.ಮೃತ ಮಹಿಳೆ ಬೇರೆ ಹೆಂಗಸರೋದಿಗೆ ಕೃಷಿ ಕಾರ್ಯಕ್ಕೆ ತೆರಳಿದ್ದು ಇಂದು ಮದ್ಯಾಹ್ನ 3.30ರ ಸಮಯದಲ್ಲಿ ಸುರಿದ ಬಾರಿ ಮಳೆಯ ಅಶ್ರಯಕ್ಕಾಗಿ ಜಮೀನಿನಲ್ಲಿದ್ದ ಮರ ಒಂದರ ಬಳಿ ಹೋಗಿ ಅಶ್ರಯ ಪಡೆದಿದ್ದರು ಬೇರೆ ಮೂರ್ನಾಲ್ಕು ಮಹಿಳೆಯರು ಬೇರೆ ಕಡೆ ಹೋಗಿ ಅಶ್ರಯ ಪಡೆದಿದ್ದರು 3.45ರ ಸಮಯಕ್ಕೆ ಅಶ್ರಯ ಪಡೆದಿದ್ದ ಮರಕ್ಕೆ ಹಠಾತ್ ಬಡಿದ ಬಾರಿ ಸಿಡಿಲಿನ ಒಡೆತಕ್ಕೆ ಕ್ಷಣಾರ್ದದಲ್ಲಿ ಮೃತ ಮಹಿಳೆ ಕುಸಿದು ಬಿದ್ದು ಪ್ರಾಣ ತೆತ್ತಿದ್ದಾರೆ.ಇನ್ನೊಂದು ಕಡೆ ಅಶ್ರಯ ಪಡೆದಿದ್ದ ಮಹಿಳೆಯರು ನೋಡು ನೋಡುತ್ತಿದಂತೆ ಕಣ್ಮುಂದೆ ನಡೆದ ಘಟನೆಯಿಂದ್ ಅಶಾಕ್ ಅಗಿ ಒಡಿ ಬಂದು ನೋಡಲಾಗಿ ಮೃತ ಯಶೋದಮ್ಮ ಮೃತಪಟ್ಟಿದರು. ಇದನ್ನು ನೋಡಿದ ಮಹಿಳೆಯರ ಅಕ್ರಂದನ ಮುಗಿಲುಮುಟ್ಟಿತು ಈ ಸಂಬಂದ ಬಿಳಿಕೆರೆ ಪೋಲಿಸ್ ಠಾಣೆಯಲ್ಲಿಮ್ ಪ್ರಕರಣ ದಾಖಲಾಗಿದ್ದು ಮುಂದಿನ ಕ್ರಮ ಕೈಗೊಂಡಿದ್ದಾರೆ.ಘಟನ ಸ್ಥಳಕ್ಕೆ ರಾಜ್ಯ ರೈತ ಸಂಘದ ಜಿಲ್ಲಾದ್ಯಕ್ಷ ಹೊಸೂರ್ ಕುಮಾರ್ ತಾಲೂಕು ಅದ್ಯಕ್ಷ ಬೆಂಕಿಪುರ ಚಿಕ್ಕಣ್ಣ, ಮತ್ತಿತರರು ಬೇಟಿ ನೀಡಿ ಮಮುಲು ಮರಗಿದರು ಇದೆ ಸಮಯಕ್ಕೆ ತಾಲೂಕು ಕಛೇರಿಯ ಕಂದಾಯ ಇಲಾಖೆಯ ಗ್ರಾಮ ಲೆಕ್ಕಿಗ ಮತ್ತು ಸಿಬಂದಿ ಬೇಟಿ ನೀಡಿ ಸ್ಥಳ ಪರಿಶಿಲನೆ ನಡೆಸಿದರು.ಈ ಸಂದರ್ಭದಲ್ಲಿ ರಾಜ್ಯ ರೈತ ಸಂಘದ ಜಿಲ್ಲಾದ್ಯಕ್ಷ ಹೊಸೂರ್ ಕುಮಾರ್ ಮೃತ ಮಹಿಳೆ ಕುಟುಂಬಕ್ಕೆ ಸರ್ಕಾರದಿಂದ ಅಂತ್ಯ ಸಂಸ್ಕಾರಕ್ಕೆ ಮತ್ತು ಕುಟುಂಬಕ್ಕೆ ಸೂಕ್ತ ಪರಿಹಾರ ವನ್ನು ಒದಗಿಸಿಕೋಡಬೇಕೆಂದು ಅಧಿಕಾರಿಗಳನ್ನು ಒತ್ತಾಯಿಸಿದರು ಸಮಂಜಸ ವರದಿಯನ್ನು ಸರ್ಕಾರಕ್ಕೆ ಸಕಾಲದಲ್ಲಿ ಕಳುಹಿಸಿ ಸಿಗಬಹುದಾದ ಪರಿಹಾರವನ್ನು ಶಿಘ್ರದಲ್ಲೇ ದೊರಕಿಸಿಕೋಡುವುದಾಗಿ ಅಧಿಕಾರಿಗಳು ತಿಳಿಸಿದರು ನಂತರ ಮೃತ ದೇಹವನ್ನು ಮರಣೊತ್ತರ ಪರೀಕ್ಷೆಗಾಗಿ ಬಿಳಿಕೆರೆ ಸಾರ್ವಜನಿಕ ಅಸ್ಪತ್ರೆಗೆ ಕಳುಹಿಸಲಾಯಿತು ಅದರೆ ಅಲ್ಲಿ ಡಾಕ್ಟರ್ ಇಲ್ಲದ ಕಾರಣ ಮತ್ತೆ ಮೃತ ದೇಹವನ್ನು ಹುಣಸೂರು ಸಾರ್ವಜನಿಕ ಅಸ್ಪತ್ರೆಗೆ ಕಳುಹಿಸಲಾಯಿತು.

# ವಿಶೇಷ ನವಜಾತ ಶಿಶು ಆರೈಕೆ ಕೇಂದ್ರ ಉದ್ಘಾಟನೆ

• ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ

ಇಂದು ಗಂಗಾವತಿಯ 60 ಹಾಸಿಗೆಗಳ ಹೆರಿಗೆ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ, ಕೆನರಾ ಬ್ಯಾಂಕ್ ಸಿ.ಎಸ್.ಆರ್ (ಅಖಖ) ನಿಧಿಯ 75 ಲಕ್ಷ ವೆಚ್ಚದಲ್ಲಿ ನಿರ್ಮಿಸಲಾದ ವಿಶೇಷ ನವಜಾತ ಶಿಶು ಆರೈಕೆ ಕೇಂದ್ರವನ್ನು (ಖಓಅಗ) ಶಾಸಕರಾದ ಗಾಲಿ ಜನಾರ್ದನ ರೆಡ್ಡಿ ಅವರು ಉದ್ಘಾಟಿಸಿದರು.

ಕೊಪ್ಪಳ ಜಿಲ್ಲೆಯಲ್ಲೇ ಈ ಅತ್ಯಾಧುನಿಕ ಸೌಲಭ್ಯವನ್ನು ಹೊಂದಿರುವ ಏಕೈಕ ಸರ್ಕಾರಿ ಆಸ್ಪತ್ರೆ ಇದಾಗಿದ್ದು, ಸಾರ್ವಜನಿಕರು ಈ ಸೌಲಭ್ಯದ ಸದುಪಯೋಗಪಡಿಸಿಕೊಳ್ಳಬೇಕಾಗಿ ವಿನಂತಿ.

ಈ ಸಂದರ್ಭದಲ್ಲಿ ಕೆನರಾ ಬ್ಯಾಂಕಿನ ಹುಬ್ಬಳ್ಳಿ ವೃತ್ತದ ಪ್ರಧಾನ ವ್ಯವಸ್ಥಾಪಕರಾದ ವೀರೇಂದ್ರಬಾಬು, ರಾಯಚೂರು ಪ್ರಾದೇಶಿಕ ಕಚೇರಿಯ ಸಹಾಯಕ ಪ್ರಧಾನ ವ್ಯವಸ್ಥಾಪಕರಾದ ಶ್ರೀಮತಿ ರಾಜೇಶ್ವರಿ, ಮುಖ್ಯ ವೈದ್ಯಾಧಿಕಾರಿಗಳಾದ ಡಾ.ಈಶ್ವರ್ ಸವಡಿ, ಹಾಗೂ ಪ್ರಮುಖ ಮುಖಂಡರಾದ ಮನೋಹರಗೌಡ ಹೇರೂರು, ಯಮನೂರು ಚೌಡ್ಕಿ, ವೀರೇಶ್ ಬಲಕುಂದಿ, ವೆಂಕಟೇಶ್ ಜಬ್ಬಲಗುಡ್ಡ, ವಿಶ್ವನಾಥ್ ಕೆಸರಟ್ಟಿ, ದೀಪಕ್ ಬಾಂಟೀಯ, ಆನಂದ್ ಗೌಡ, ರಮೇಶ್ ಹೊಸಮಲಿ, ಬಸವರಾಜ ಸೇರಿದಂತೆ ಹಲವು ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.







ಕಲಬುರಗಿ: ತ್ಯಾಗ ಮತ್ತು ಬಲಿದಾನದ ಪ್ರತೀಕವಾದ ಬಕ್ರೀದ್ ಹಬ್ಬದ ಅಂಗವಾಗಿ ನಗರದ ರಾಜಾಪೂರ ಈದಗಾ ಮೈದಾನದಲ್ಲಿ ಮುಸ್ಲಿಂ ಸಮುದಾಯದವರು ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು. ಮಕ್ಕಳು ಪರಸ್ಪರ ಶುಭಾಶಯ ವಿನಿಮಯ ಮಾಡಿಕೊಂಡು ಹಬ್ಬವನ್ನು ಸಂಭ್ರಮದಿಂದ ಆಚರಿಸಿದರು.

# ಮೂಲ ಸೌಕರ್ಯ ಕಲ್ಪಿಸಲು ಕ್ರಮ: ಶಾಸಕ ಪ್ರಭು ಚವ್ಹಾಣ

• ಮಲ್ಲಮ್ಮ ನುಡಿ ವಾರ್ತೆ ಔರಾದ



ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಮೇ.27ರಂದು ಔರಾದ(ಬಿ) ಪಟ್ಟಣ ಸೇರಿದಂತೆ ವಿವಿಧೆಡೆ ಸಂಚರಿಸಿ ಸುಮಾರು 8 ಕೋಟಿಗೂ ಹೆಚ್ಚು ಮೊತ್ತದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿ ಪೂಜೆ ನೆರವೇರಿಸಿದರು. ವನಮಾರಪಳ್ಳಿ ಗ್ರಾಮದಲ್ಲಿ 81.60 ಲಕ್ಷರೂ. ವೆಚ್ಚದಲ್ಲಿ ವನಮಾರಪಳ್ಳಿಯಿಂದ ಕೂಡ್ಲಿ ಬಾರ್ಡರ್‌ವರೆಗಿನ ರಸ್ತೆ, 105 ಲಕ್ಷ ಮೊತ್ತದ ಚಿಮ್ಮೆಗಾಂವನಿಂದ ಹಂದಿಕೇರಾ ರಸ್ತೆ, ಧೋಪರವಾಡಿಯಿಂದ ಅಮಕ್ಷಿದ್ ರಸ್ಥೆ, 9 ಲಕ್ಷದ ಸಮುದಾಯ ಭವನ, ಹಂದಿಕೇರಾದಲ್ಲಿ 58 ಲಕ್ಷ ಮೊತ್ತದ ಹೆಚ್ಚುವರಿ ತರಗತಿ ಕೋಣೆಗಳು, ಭಂಡಾರಕುಮಟಾದಲ್ಲಿ 20 ಲಕ್ಷದ ಬ್ರಿಜ್ ಕಂ ಬ್ಯಾರೇಜ್ ದುರಸ್ತಿ, ಕಾಳಾಪಟ್ಟಿ ತಾಂಡಾದಿಂದ ಸಾವರಗಾಂವ ಎಂ.ಎಸ್ ಬಾರ್ಡರ್ ಹಂಗರಗಾ ವರೆಗೆ 65 ಲಕ್ಷದ ಮೊತ್ತದ ರಸ್ತೆ, ಔರಾದ ಪಟ್ಟಣದಲ್ಲಿ ಉದ್ಯಾನವನ ಅಭಿವೃದ್ಧಿ, ಶಾಲೆಗಳಲ್ಲಿ ಶೌಚಾಲಯ ನಿರ್ಮಾಣ, ಬೋರವೆಲ್ ಅಳವಡಿಕೆ, ಸಿಸಿ ರಸ್ತೆ ಹಾಗೂ ಚರಂಡಿ ನಿರ್ಮಾಣ ಸೇರಿದಂತೆ ಸುಮಾರು 3 ಕೋಟಿಗೂ ಹೆಚ್ಚು ಮೊತ್ತದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿದರು.

ಈ ವೇಳೆ ಮಾತನಾಡಿದ ಶಾಸಕರು, ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಸರ್ಕಾರದಿಂದ ಹೆಚ್ಚಿನ ಅನುದಾನ ಮಂಜೂರು ಮಾಡಿಸಿ ಅಗತ್ಯ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುತ್ತಿದ್ದೇನೆ. ಜನತೆಗೆ ಅತ್ಯಂತ ಅವಶ್ಯಕತೆಯಿರುವ ಕೆಲಸಗಳನ್ನು ಕೈಗೆತ್ತಿಕೊಳ್ಳಲಾಗುತ್ತಿದೆ. ಪ್ರತಿಯೊಂದು ಕಾಮಗಾರಿಯೂ ಅತ್ಯುತ್ತಮ ಗುಣಮಟ್ಟದಿಂದ ಆಗಬೇಕು. ಅಧಿಕಾರಿಗಳು ನಿರಂತರವಾಗಿ ಸ್ಥಳ ಪರಿಶೀಲನೆ ನಡೆಸಿ ಕಾಮಗಾರಿಗಳ ಗುಣಮಟ್ಟವನ್ನು ಖಚಿತಪಡಿಸಿಕೊಳ್ಳಬೇಕು ಎಂದು ಸೂಚಿಸಿದರು.

ಗುತ್ತಿಗೆದಾರರು ಯಾವುದೇ ಕಾರಣಕ್ಕೂ ಕಳಪೆ ಸಾಮಗ್ರಿಗಳನ್ನು ಬಳಸಬಾರದು. ಅಂದಾಜು ಪತ್ರಿಕೆಯಲ್ಲಿರುವಂತೆ ಮತ್ತು ಮಾನದಂಡಗಳಿಗೆ ಅನುಗುಣವಾಗಿ ಕಾಮಗಾರಿಗಳನ್ನು ಪೂರ್ಣಗೊಳಿಸಬೇಕು. ಜನರ ವಿಶ್ವಾಸಕ್ಕೆ ಧಕ್ಕೆ ತರುವ ರೀತಿಯಲ್ಲಿ ಕೆಲಸ ಮಾಡಿದರೆ ಯಾರನ್ನೂ ಬಿಡುವುದಿಲ್ಲ. ಕಳಪೆ ಕಾಮಗಾರಿ ನಡೆಸಿದ ಅಧಿಕಾರಿಗಳು ಹಾಗೂ ಗುತ್ತಿಗೆದಾರರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಖಡಕ್ ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಮುಖಂಡರಾದ ಧೊಂಡಿಬಾ ನರೋಟೆ, ಶಿವಾಜಿರಾವ ಪಾಟೀಲ ಮುಂಗನಾಳ, ದಯಾನಂದ ಘೂಳೆ, ಕೇರಬಾ ಪವಾರ, ಸಂತೋಷ ಪೋಕಲವಾರ, ಸಂಜು ವಡೆಯಾರ್, ಅಬ್ದುಲ್ ಪಠಾಣ, ಚೇತನ ಕಪ್ಪಿಕೇರೆ, ಬಾಬು ರಾಠೋಡ, ರಾಮ ನರೋಟೆ, ಶಿವಾಜಿ ಬೋಗಾರ, ವಿರೇಶ ಅಲ್ಮಾಜೆ, ಪ್ರಕಾಶ ಅಲ್ಮಾಜೆ, ಅಶೋಕ ಅಲ್ಮಾಜೆ, ರಮೇಶ ಗೌಡಾ, ಬಸವರಾಜ ಹಳ್ಳೆ, ಅಂಬಾದಾಸ ನೇಳ್ಗೆ, ಆನಂದ ದ್ಯಾಡೆ, ಸಂತೋಷ ಫುಲಾರೆ, ಸಂದೀಪ ಪಾಟೀಲ ಸೇರಿದಂತೆ ಮುಖಂಡರು, ಅಧಿಕಾರಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ಬೈಲಪತರ್ ಸಮುದಾಯದ ಕುಲಶಾಸ್ತ್ರೀಯ ಅಧ್ಯಯನ: ಉತ್ತರ ಕರ್ನಾಟಕದ ಕ್ಷೇತ್ರ ಪ್ರವಾಸ

• ಮಲ್ಲಮ್ಮ ನುಡಿ ವಾರ್ತೆ ವಿಜಯನಗರ(ಹೊಸಪೇಟೆ)



ಮೇ 28: ಡಿ.ದೇವರಾಜ ಅರಸು ಸಂಶೋಧನಾ ಪ್ರಾಯೋಜಕತ್ವದಲ್ಲಿ, ಬೆಂಗಳೂರಿನ ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾನಿಲಯದ ಸಮಾಜಶಾಸ್ತ್ರ ಅಧ್ಯಯನ ಮತ್ತು ಸಂಶೋಧನಾ ಕೇಂದ್ರದಿಂದ ರಾಜ್ಯದಲ್ಲಿನ 'ಬೈಲಪತರ್' ಸಮುದಾಯದ ಕುಲಶಾಸ್ತ್ರೀಯ ಅಧ್ಯಯನ ಭರದಿಂದ ಸಾಗಿದೆ. ಇದರ ಅಂಗವಾಗಿ ಪ್ರಾಧ್ಯಾಪಕಿ ಡಾ.ವೀಣಾರಾಣಿ.ಸಿ ಅವರ ನೇತೃತ್ವದ ಸಂಶೋಧನಾ ತಂಡವು ಮೇ 25 ರಿಂದ 27 ವರಗೆ ವಿಜಯನಗರ, ಬಳ್ಳಾರಿ, ಕೊಪ್ಪಳ ಹಾಗೂ ಗದಗ, ಧಾರವಾಡ ಜಿಲ್ಲೆಗಳಲ್ಲಿ ವ್ಯಾಪಕ ಕ್ಷೇತ್ರಾಧ್ಯಯನ ಪ್ರವಾಸ ಕೈಗೊಂಡಿದೆ.ಅಧ್ಯಯನ ತಂಡವು ಮೇ 25 ರಂದು ವಿಜಯನಗರ ಜಿಲ್ಲೆಯ ಹಗರಿಬೊಮ್ಮನಹಳ್ಳಿ ಹಾಗೂ ಕೂಡ್ಲಿಗಿ ಪಟ್ಟಣಗಳಲ್ಲಿ ವಾಸವಾಗಿರುವ ಬೈಲಪತರ್ ಸಮುದಾಯದ ನೆಲೆಗಳಿಗೆ ಭೇಟಿ ನೀಡಿತು.ಈ ವೇಳೆ ಸಮುದಾಯದ ಪ್ರಮುಖ ಮುಖಂಡರೊಂದಿಗೆ ಸಮಾಲೋಚನೆ ನಡೆಸಿ ಅವರ ಸಾಮಾಜಿಕ,ಆರ್ಥಿಕ, ರಾಜಕೀಯ,ಶೈಕ್ಷಣಿಕ ಹಾಗೂ ಸಾಂಸ್ಕೃತಿಕ ಹಿನ್ನೆಲೆಯ ಪ್ರಮುಖ ಮಾಹಿತಿಗಳನ್ನು ಕಲೆಹಾಕಿತು.ಬೈಲಪತರ್ ಜಾತಿ ಜನರ ಸಾಂಪ್ರದಾಯಿಕ ವೃತ್ತಿ, ಸಂಪ್ರದಾಯ, ಮದುವೆ, ಮುಂಜಿ, ಶವಸಂಸ್ಕಾರ ಪದ್ಧತಿ ಹಾಗೂ ಜಾತಿ ಪಂಚಾಯಿತಿಯ ಕಾರ್ಯವೈಖರಿ ಕುರಿತು ವಿಸ್ತೃತ ವಿವರಗಳನ್ನು ಪಡೆದುಕೊಂಡಿತು. ಮಾತನಾಡಿದ ಬೈಲಪತರ್ ರಾಜ್ಯ ಸಂಘದ ಕಾರ್ಯಧ್ಯಾಕ್ಷ ಪ್ರಕಾಶ್ ಅಂಕೋಶಿ ಅವರು, ಬೈಲಪತರ್ ಜಾತಿಯು ವಿಶ್ವಕರ್ಮ ಹಾಗೂ ಅದರ ಉಪಜಾತಿಗಳಿಗಿಂತ ಸಂಪೂರ್ಣ ಭಿನ್ನವಾಗಿದೆ. ಬೈಲಪತರ್ ಜನರು ಅಲೆಮಾರಿಗಳಾಗಿದ್ದು, ಇಂದಿಗೂ ಗುಡಿಸಲು, ಟೆಂಟ್‌ಗಳಲ್ಲಿ ವಾಸಿಸುತ್ತಿದ್ದಾರೆ. ಇವರು ಪ್ರಧಾನವಾಗಿ ಮಾಂಸಾಹಾರಿಗಳಾಗಿದ್ದು, ಮದುವೆ ಹಾಗೂ ಉತ್ತರಕ್ರಿಯೆಗಳಲ್ಲೂ ಕುರಿ ಅಥವಾ ಮೇಕೆ ಮಾಂಸದ ಆಹಾರ ಸಿದ್ಧಪಡಿಸುತ್ತಾರೆ. ಜನಿವಾರ ಶಾಸ್ತ್ರ, ಮದುವೆ ನಿಯಮಗಳು, ಬಹುಪತ್ನಿತ್ವ, ವಿಧವಾ ವಿವಾಹ ಹಾಗೂ ವಿಚ್ಛೇದಿತ ಮಹಿಳೆಯರ ಮರುವಿವಾಹ ಪದ್ಧತಿಗಳು ವಿಶ್ವಕರ್ಮ ಸಮುದಾಯದೊಂದಿಗೆ ಯಾವುದೇ ಸಾಮ್ಯತೆ ಹೊಂದಿಲ್ಲ.ಹೀಗಾಗಿ ಮುಖ್ಯವಾಹಿನಿಯಿಂದ ದೂರವಿರುವ ನಮ್ಮ ಸಮುದಾಯದ ಕುಲಶಾಸ್ತ್ರೀಯ ಅಧ್ಯಯನವು ಅತ್ಯಂತ ವಸ್ತುನಿಷ್ಠವಾಗಿ ನಡೆಯಬೇಕು" ಎಂದು ಅಧ್ಯಯನ ತಂಡಕ್ಕೆ ಮನವಿ ಮಾಡಿದರು.ಮೇ.26 ರಂದು ಹಂಪಿ ಕನ್ನಡ ವಿಶ್ವವಿದ್ಯಾಯಕ್ಕೆ ಭೇಟಿ ನೀಡಿ ಹಂಪಿ ವಿಶ್ವ ವಿದ್ಯಾಲಯದ ನಿವೃತ್ತ ಪ್ರಾಧ್ಯಾಪಕ ಡಾ.ಕೆ. ಎಂ.ಮೈತ್ರಿ ಅವರೊಂದಿಗೆ,ಈ ಹಿಂದೆ ಬೈಲಪತರ್ ಸಮುದಾಯದ ಕುರಿತು ಜರುಗಿದ ಅಧ್ಯಯನಗಳ ಮಾಹಿತಿ ಪಡೆದಕೊಂಡಿತು.ಬಳ್ಳಾರಿಯ ಗುಡಾರ ನಗರದ ಹೊರವಲಯದಲ್ಲಿರುವ ಗುಡಿಸಲು ಹಾಗೂ ಟೆಂಟ್‌ಗಳಿಗೆ ಭೇಟಿ ನೀಡಿದ ಸಂಶೋಧನಾ ತಂಡ, ಬೈಲಪತರ್ ಜನರು ಜೀವನೋಪಾಯಕ್ಕಾಗಿ ತಾಮ್ರ ಹಾಗೂ ಇತರೆ ಲೋಹಗಳಿಂದ ತಯಾರಿಸುವ ಕೈಗಡಗಗಳು,ಉಂಗುರ, ಚೈನ್ ಸೇರಿದಂತೆ ವಿವಿಧ ಆಭರಣಗಳನ್ನು ವೀಕ್ಷಿಸಿ, ಅವರ ಕುಲಕಸುಬಿನ ಸಂಕಷ್ಟಗಳ ಕುರಿತು ಮಾಹಿತಿ ಪಡೆಯಿತು.ಮೇ.27ರಂದು ಕೊಪ್ಪಳ ಜಿಲ್ಲೆಯ ಪ್ರಸಿದ್ಧ ಧಾರ್ಮಿಕ ಕ್ಷೇತ್ರವಾದ ಹುಲಗಿಗೆ ಭೇಟಿ ನೀಡಿದ ಅಧ್ಯಯನಕಾರರು, ದೇವಸ್ಥಾನದ ಮುಖ್ಯ ರಸ್ತೆಯ ಇಕ್ಕೆಲಗಳಲ್ಲಿ ತಳ್ಳುಗಾಡಿ ಹಾಗೂ ನೆಲದ ಹಾಸಿನ ಮೇಲೆ ಕುಳಿತು ವ್ಯಾಪಾರ ಮಾಡುವ ಬೈಲಪತರ್ ಜನರನ್ನು ಭೇಟಿ ಮಾಡಿದರು.ಗದಗ ನಗರದ ಇಂದಿರಾ ಕಾಲೋನಿ ಹಾಗೂ ಹುಬ್ಬಳ್ಳಿ ನಗರದ ಮಧುರಾ ಕಾಲೋನಿ ಸ್ಥಳಗಳಿಗೂ ಭೇಟಿ ನೀಡಿ ಮಾಹಿತಿ ಕಲೆಹಾಕಲಾಯಿತು.ಈ ವೇಳೆ ಸಹ ಪ್ರಾಧ್ಯಾಪಕಿ ರಾಜೇಶ್ವರಿ,ಸಂಶೋಧನಾ ಸಹಾಯಕ ಹರ್ಷ,ಹಂಪಿ ವಿಶ್ವ ವಿದ್ಯಾಲಯದ ನಿವೃತ್ತ ಪ್ರಾಧ್ಯಾಪಕ ಕೆ.ಎಂ.ಮೈತ್ರಿ ಬೈಲಪತರ್ ರಾಜ್ಯ ಸಂಘದ ಅಧ್ಯಕ್ಷ ರಾಜೇಂದ್ರ ಪಂಚಮಹಲ್, ಗೌರವಾಧ್ಯಕ್ಷ ಸುಭಾಷ್‌ಚಂದ್ರ, ಪ್ರಧಾನ ಕಾರ್ಯದರ್ಶಿ ಅಶೋಕ್ ಕುಮಾರ್, ಖಜಾಂಚಿ ರಮೇಶ್ ಉತ್ರಾಜಿ ಹಾಗೂ ಸಂಘದ ಪ್ರಮುಖರಾದ ಸಂತೋಷ್, ಗಂಗಾಧರ್ ಗರಡ್, ಚಂದ್ರಶೇಖರ್, ಉಮೇಶ್, ಪರಶುರಾಮ್ ಸೇರಿದಂತೆ ಸ್ಥಳೀಯ ಮುಖಂಡರು ಉಪಸ್ಥಿತರಿದ್ದರು.

# ಕೊಪ್ಪಳದಲ್ಲಿ ವಿಶ್ವ ಯೋಗ ದಿನಾಚರಣೆ: 7 ದಿನಗಳ ಯೋಗ ಸಪ್ತಾಹದ ಯಶಸ್ವಿ ಸಮಾರೋಪ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ



ಇಂದಿನ ಆಧುನಿಕ ಸಮಾಜದಲ್ಲಿ ನೆಮ್ಮದಿ ಮತ್ತು ಏಕಾಗ್ರತೆ ಅಪರೂಪವಾಗಿ ಗೊತ್ತಿದ್ದು ಮನುಷ್ಯ ನೆಮ್ಮದಿ ಹಾಗೂ ಏಕಾಗ್ರತೆಯನ್ನು ಪಡೆಯಲು ಯೋಗ ಮಾರ್ಗ ಅನುಸರಿಸಿದಾಗ ಮಾತ್ರ ಸಾಧ್ಯ ಎಂದು ಗುರುರಾಜ ಉಮಚಗಿ ಹೇಳಿದರು. ಭಾರತ ಸರ್ಕಾರ ಮತ್ತು ಕರ್ನಾಟಕ ಸರ್ಕಾರ, ಜಿಲ್ಲಾಡಳಿತ ಭವನ, ಜಿಲ್ಲಾ ಪಂಚಾಯತ್ ಕೊಪ್ಪಳ, ಜಿಲ್ಲಾ ಆಯುಷ್ ಇಲಾಖೆ ಕೊಪ್ಪಳ, ನವೋದಯ ಸಮಗ್ರ ಗ್ರಾಮೀಣಾಭಿವೃದ್ಧಿ ಹಾಗು ಶೈಕ್ಷಣಿಕ ಸಂಸ್ಥೆ ಡಣಾಪುರ ಮತ್ತು ನವೋದಯ ಸಮಗ್ರ ವ್ಯಸನ ಮುಕ್ತಿ ಪುನರ್ವಸತಿ ಕೇಂದ್ರ ಮರಳಿ ಇವರ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ವಿಶ್ವ ಯೋಗ ದಿನಾಚರಣೆ 2026ರ ಅಂಗವಾಗಿ ನಡೆದ ಏಳು ದಿನಗಳ ಯೋಗಾಸಪ್ತಹ ಕಾರ್ಯಕ್ರಮದ ಸಮಾರೋಪ ಸಮಾರಂಭವನ್ನು ಅತ್ಯಂತ ಯಶಸ್ವಿಯಾಗಿ ಆಯೋಜಿಸಲಾಯಿತು. ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಗಂಗಾವತಿ ಸರ್ಕಾರಿ ಆಯುರ್ವೇದ ಆಸ್ಪತ್ರೆಯ ಆಡಳಿತ ವೈದ್ಯಾಧಿಕಾರಿ ಡಾ. ಗುರುರಾಜ ಉಮಚಗಿ ಮಾತನಾಡುತ್ತಾ ಯೋಗ ಎಂಬುದು ಕೇವಲ ದೈಹಿಕ ಕಸರತ್ತಲ್ಲ ಅದು ದೇಹ ಮತ್ತು ಮನಸ್ಸಿನ ರೋಗಗಳನ್ನು ದೂರ ಮಾಡಿ ಮನಸನ್ನು ಏಕಾಗ್ರತೆಯಲ್ಲಿ ಇರಿಸುವಂತಹ ಒಂದು ಅತ್ಯುತ್ತಮ ಸಾಧನವಾಗಿದೆ ಎಂದು ಹೇಳಿದರು. ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದ ಕೊಪ್ಪಳ ಜಿಲ್ಲಾ ಆಯುಷ್ ಅಧಿಕಾರಿಗಳಾದ ಡಾ. ಪರ್ವತಗೌಡ ಬಿ. ಹಿರೇಗೌಡ ಅವರು, "ಮನುಷ್ಯನ ಜೀವನ ಅತ್ಯಂತ ಶ್ರೇಷ್ಠವಾದದ್ದು. ಇಂತಹ ಅಮೂಲ್ಯವಾದ ಜೀವನವನ್ನು ಕೆಟ್ಟ ಚಟಗಳಿಗೆ ಬಲಿಯಾಗಿ ಹಾಳು ಮಾಡಿಕೊಳ್ಳಬೇಡಿ. ಪ್ರತಿಯೊಬ್ಬರೂ ಯೋಗವನ್ನು ಜೀವನದಲ್ಲಿ ಅಳವಡಿಸಿಕೊಳ್ಳುವ ಮೂಲಕ ಉತ್ತಮ ಆರೋಗ್ಯವನ್ನು ಸಾಧಿಸಬೇಕು," ಎಂದು ಕರೆ ನೀಡಿದರು. ಇದೇ ಸಂದರ್ಭದಲ್ಲಿ ಅವರು ಪರಿಸರ ಸಂರಕ್ಷಣೆ ಮತ್ತು ವೃಕ್ಷಗಳ ಮಹತ್ವದ ಕುರಿತು ಶಿಬಿರಾರ್ಥಿಗಳಲ್ಲಿ ಜಾಗೃತಿ ಮೂಡಿಸಿದರು. ಗಂಗಾವತಿ ಸರ್ಕಾರಿ ಆಸ್ಪತ್ರೆಯ ಖಿಃ ಊಗಿ ವಿಭಾಗದ ಶ್ರೀ ಮಲ್ಲಿಕಾರ್ಜುನ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿ, "ನಮ್ಮ ಸಾಂಪ್ರದಾಯಿಕ ಆರೋಗ್ಯ ಪದ್ಧತಿ ಹಾಗೂ ಆಯುರ್ವೇದವು ಪ್ರಸ್ತುತ ದಿನಗಳಲ್ಲಿ ಅತ್ಯಂತ ಬಹುಮುಖ್ಯ ಪಾತ್ರ ವಹಿಸುತ್ತವೆ. ಪ್ರತಿಯೊಬ್ಬರೂ ಇದರ ಸದುಪಯೋಗ ಪಡೆದುಕೊಳ್ಳಬೇಕು," ಎಂದು ತಿಳಿಸಿದರು.ಯೋಗ ತರಬೇತಿ ಮತ್ತು ಬಹುಮಾನ ವಿತರಣೆ:

ನಂದಿಹಳ್ಳಿಯ ಯೋಗ ತರಬೇತುದಾರರಾದ ಶ್ರೀ ಬಸವರಾಜ ನೀರಗಂಟಿ ಅವರು ಕಳೆದ 7 ದಿನಗಳ ಕಾಲ ನಡೆದ ಈ ಯೋಗ ಸಪ್ತಾಹದಲ್ಲಿ ಶಿಬಿರಾರ್ಥಿಗಳಿಗೆ ಯೋಗದ ವಿವಿಧ ಆಸನಗಳು ಮತ್ತು ಪ್ರಾಣಾಯಾಮಗಳ ಕುರಿತು ಯಶಸ್ವಿಯಾಗಿ ತರಬೇತಿ ನೀಡಿದ್ದರು. ಸಮಾರೋಪ ಸಮಾರಂಭದ ಅಂಗವಾಗಿ ಶಿಬಿರದಲ್ಲಿ ಅತ್ಯಂತ ಶಿಸ್ತು ಮತ್ತು ಉತ್ತಮವಾಗಿ ಯೋಗ ಪ್ರದರ್ಶಿಸಿದ ಶಿಬಿರಾರ್ಥಿಗಳನ್ನು ಗುರುತಿಸಿ, ಅತಿಥಿಗಳ ಹಸ್ತದಿಂದ ಬಹುಮಾನಗಳನ್ನು ವಿತರಿಸಿ ಪ್ರೋತ್ಸಾಹಿಸಲಾಯಿತು.ಕಾರ್ಯಕ್ರಮದ ಅಧ್ಯಕ್ಷತೆಯನ್ನು ಡಣಾಪುರದ ನವೋದಯ ಸಮಗ್ರ ಗ್ರಾಮೀಣಾಭಿವೃದ್ಧಿ ಹಾಗೂ ಶೈಕ್ಷಣಿಕ ಸಂಸ್ಥೆಯ ಅಧ್ಯಕ್ಷರಾದ ಶ್ರೀ ವಾಸುದೇವ ಬಿ. ಅವರು ವಹಿಸಿದ್ದರು.ಈ ಸಮಾರಂಭದಲ್ಲಿ ನಂದಿಹಳ್ಳಿ ಸರ್ಕಾರಿ ಆಯುರ್ವೇದ ಚಿಕಿತ್ಸಾಲಯದ ವೈದ್ಯಾಧಿಕಾರಿಗಳಾದ ಡಾ. ಎಸ್. ಎಸ್. ಸುಂಕದ, ನವೋದಯ ಸಂಸ್ಥೆಯ ಸದಸ್ಯರುಗಳಾದ ಶ್ರೀ ಜಯರಾಮ, ಶ್ರೀ ಲೋಹಿತ, ಶ್ರೀ ಬಸವರಾಜ ಕೆ., ಹಾಗೂ ನವೋದಯ ವ್ಯಸನಮುಕ್ತಿ ಕೇಂದ್ರದ ಆಪ್ತಸಮಾಲೋಚಕರಾದ ಶ್ರೀ ದೇವರಾಜ ಗುಂಡಿನ ಸೇರಿದಂತೆ ಸಂಸ್ಥೆಯ ಸಿಬ್ಬಂದಿಗಳು, ಯೋಗ ತರಬೇತುದಾರರು ಮತ್ತು ನೂರಾರು ಶಿಬಿರಾರ್ಥಿಗಳು ಉಪಸ್ಥಿತರಿದ್ದರು.

# ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷರಾಗಿ ರಾಘವೇಂದ್ರ ಅಳ್ಳಳ್ಳಿ ಎರಡನೇ ಬಾರಿ ಆಯ್ಕೆ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘಕ್ಕೆ ಅವಿರೋಧವಾಗಿ ಆಯ್ಕೆಯಾಗಿರುವ ಜಿಲ್ಲಾ ಘಟಕ, ಗುರುಮಿಟ್ಕಲ್ ಹಾಗೂ ಯಾದಗಿರಿ ತಾಲೂಕ ಘಟಕಗಳ ನೂತನ ಪದಾಧಿಕಾರಿಗಳಿಗೆ ಗುರುವಾರ ಡಿಡಿಪಿಐ ಸಿ.ಎಸ್.ಮುದೋಳ ಅವರು ಪ್ರಮಾಣ ಪತ್ರ ವಿತರಿಸಿದರು.



ನಗರದ ಸಪ್ನ ಮೈದಾನದಲ್ಲಿನ ಸರ್ಕಾರಿ ಕನ್ಯಾ ಪ್ರೌಢಶಾಲೆ ಸಪ್ನ ಮೈದಾನದಲ್ಲಿ ನಡೆದ ಕಾರ್ಯಕ್ರಮದಲ್ಲಿ ನೂತನ ಪದಾಧಿಕಾರಿಗಳನ್ನು ಉದ್ದೇಶಿಸಿ ಮಾತನಾಡಿದ ಮುದೋಳ, ಜಿಲ್ಲೆಯ ಪ್ರಾಥಮಿಕ ಪ್ರೌಢ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷರ ಸಹಕಾರದೊಂದಿಗೆ ಹಾಗೂ ಶಿಕ್ಷಕರ ಸತತ ಪ್ರಯತ್ನದ ಫಲವಾಗಿ ಉತ್ತಮ ಫಲಿತಾಂಶ ಬಂದಿದೆ ಎಂದು ಹೇಳಿದರು. ಮುಂದಿನ ದಿನದಲ್ಲಿ ಶಿಕ್ಷಕರ ಯಾವುದೇ ಕೆಲಸ ಇದ್ದರೂ ಸಹ ಬಾಕಿ ಉಳಿಯದ ಹಾಗೆ ಬಗೆಹರಿಸುತ್ತೇನೆ ಎಂದು ಹೇಳಿದರು. ಎಲ್ಲ ಪದಾಧಿಕಾರಿಗಳು ನಗರದ ಗಾಂಧಿ, ಕನಕದಾಸ, ಡಾ. ಅಂಬೇಡ್ಕರ್ ಹಾಗೂ ಸುಭಾಷ್ ಚಂದ್ರ ಬೋಸ್ ಪ್ರತಿಮೆಗಳಿಗೆ ಮಾಲಾರ್ಪಣೆ ಮಾಡಿ, ಪಟಾಕಿ ಸಿಡಿಸಿ ಸಂಭ್ರಮಿಸಿದರು.

ಪ್ರೌಢಶಾಲಾ ಸಹ ಶಿಕ್ಷಕರ ಸಂಘ ಜಿಲ್ಲಾಧ್ಯಕ್ಷ ಅಶೋಕ ಕೆಂಭಾವಿ ಸೇರಿದಂತೆ ಎಲ್ಲ ತಾಲೂಕು ಅಧ್ಯಕ್ಷರುಗಳು ಸೇರಿದಂತೆಯೇ ಇತರರಿದ್ದರು. ಈ ವೇಳೆ ಮಾತನಾಡಿದ ನೂತನ ಜಿಲ್ಲಾಧ್ಯಕ್ಷ ರಾಘವೇಂದ್ರ ಅಳ್ಳಳ್ಳಿ, ರಾಜ್ಯಾಧ್ಯಕ್ಷ ಚಂದ್ರಶೇಖರ್ ನುಗ್ಲಿ ಅವರ ಸಾರಥ್ಯದಲ್ಲಿ ಶಿಕ್ಷಕರ ಹಲವಾರು ಸಮಸ್ಯೆಗಳನ್ನು ಬಗೆಹರಿಸಿದ್ದೇವೆ ಯಾದಗಿರಿ ಜಿಲ್ಲೆಯಲ್ಲಿಯೂ ಸಹಿತ ಶಿಕ್ಷಕರ ಅನೇಕ ಬೇಡಿಕೆಗಳನ್ನು ಈಡೇರಿಸಿದ್ದು ಇನ್ನು ಎರಡು ಬೇಡಿಕೆಗಳು ಬಾಕಿ ಇದ್ದು ಅದರಲ್ಲಿ ಪದವಿ ಪಡೆದ ಶಿಕ್ಷಕರಿಗೆ ಒಂದು ವೇತನ ಬಡ್ತಿ ನೀಡುವುದು ಹಾಗೂ ಪ್ರಾಥಮಿಕ ಶಾಲೆಯಿಂದ ಪ್ರೌಢಶಾಲಾ ಶಿಕ್ಷಕರ ಹುದ್ದೆಗೆ ಬಡ್ತಿ ನೀಡುವುದು ಮತ್ತು ಮುಂಬರುವ ದಿನಗಳಲ್ಲಿ ಶಿಕ್ಷಕರ ಯಾವುದೇ ಬೇಡಿಕೆ ಹಾಗೂ ಸಮಸ್ಯೆಗಳಿದ್ದಲ್ಲಿ ಅತ್ಯಂತ ಪ್ರಾಮಾಣಿಕವಾಗಿ ಕೆಲಸ ಮಾಡುವುದಾಗಿ ತಿಳಿಸಿದರು ಮುಖ್ಯ ಅತಿಥಿಯಾಗಿ ಭಾಗವಹಿಸಿದ ಅಶೋಕ್ ಕೆಂಭಾವಿ ಅವರು ಮಾತನಾಡಿ, ಉಪ ನಿರ್ದೇಶಕರ ಸಹಕಾರ ಮಾರ್ಗದರ್ಶನದೊಂದಿಗೆ ಶಿಕ್ಷಕರ ಸತತ ಪ್ರಯತ್ನದಿಂದ ಎಸ್ ಎಸ್ ಎಲ್ ಸಿ ಉತ್ತಮ ಫಲಿತಾಂಶ ಜಿಲ್ಲೆಗೆ ಬಂದಿದೆ ಎಂದು ಹೇಳಿದರು. ಪದಾಧಿಕಾರಿಗಳು: ಯಾದಗಿರಿ ಜಿಲ್ಲಾ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾ ಅಧ್ಯಕ್ಷರಾಗಿ ರಾಘವೇಂದ್ರ ಅಳ್ಳಳ್ಳಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿಯಾಗಿ ದೇವರಾಜ್ ಪಾಟೀಲ್, ಖಜಾಂಚಿಯಾಗಿ ನಿಂಗಪ್ಪ ಅಂಗಡಿ, ಉಪಾಧ್ಯಕ್ಷರಾಗಿ ಪಂಪನಗೌಡ ಪಾಟೀಲ್, ಮಹಿಳಾ ವಿಭಾಗದಿಂದ ಉಮಾದೇವಿ ಮತ್ತು ಯಾದಗಿರಿ ತಾಲೂಕು ಅಧ್ಯಕ್ಷರಾಗಿ ಹಣಮಾ ನಾಯಕ್, ಪ್ರಧಾನ ಕಾರ್ಯದರ್ಶಿಯಾಗಿ ಬಸಿರ್ ಅಹಮದ್, ಉಪಾಧ್ಯಕ್ಷರಾಗಿ ಮೃತ್ಯುಂಜಯ ಮಹಿಳಾ ವಿಭಾಗದಿಂದ ಶಾಂತಮ್ಮ, ಖಜಾಂಚಿಯಾಗಿ ಕುಮಾರ್ ರವಿಚಂದ್ರ, ಸಂಘಟನಾ ಕಾರ್ಯದರ್ಶಿಯಾಗಿ ಸಂಗೀತ, ನಿರ್ದೇಶಕರಾಗಿ ಬಸವರಾಜ ಕೆರುಟಗಿ, ಸುಭಾಶರೆಡ್ಡಿ ಪೋಲಿಸ್ ಪಾಟೀಲ್ ಹಾಗೂ ಗುರುಮಿಟ್ಕಲ್ ತಾಲೂಕ ಅಧ್ಯಕ್ಷರಾಗಿ ನಾರಾಯಣ ರೆಡ್ಡಿ ಪೊಲೀಸ್ ಪಾಟೀಲ್, ಪ್ರಧಾನ ಕಾರ್ಯದರ್ಶಿಯಾಗಿ ಮಾಲಿನಿ ಖಜಾಂಚಿಯಾಗಿ ಚಂದ್ರಕಾಂತ್, ಉಪಾಧ್ಯಕ್ಷರಾಗಿ ನಾಗರೆಡ್ಡಿ ಮಾಲಿ ಪಾಟೀಲ್ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

## ಮಾದಿಗ ಸಮುದಾಯಕ್ಕೆ ಡಿಸಿಎಂ ಸ್ಥಾನ ನೀಡಲು ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಕರ್ನಾಟಕ ಕಾಂಗ್ರೆಸ್‌ನಲ್ಲಿ ಇದೀಗ "ಮಾದಿಗ ಸಮುದಾಯಕ್ಕೆ ಉಪಮುಖ್ಯಮಂತ್ರಿ (ಡಿಸಿಎಂ) ಸ್ಥಾನ ನೀಡಬೇಕು" ಎಂಬ ಬೇಡಿಕೆ ಜೋರಾಗಿ ಕೇಳಿಬರುತ್ತಿದೆ. ವಿಶೇಷವಾಗಿ ಕಾಂಗ್ರೆಸ್ ಹೈಕಮಾಂಡ್ ನಾಯಕತ್ವ ಬದಲಾವಣೆ ಆಗಿದ್ದ ಸಂದರ್ಭದಲ್ಲಿ ಈ ವಿಚಾರ ರಾಜಕೀಯವಾಗಿ ಮಹತ್ವ ಪಡೆದುಕೊಂಡಿದೆ.

ಏಕೆ ಈ ಬೇಡಿಕೆ?

ಮಾದಿಗ ಸಮುದಾಯದ ಹಲವು ಸಂಘಟನೆಗಳು ಹಾಗೂ ದಲಿತ ಮುಖಂಡರು ಕಾಂಗ್ರೆಸ್ ಸರ್ಕಾರದಲ್ಲಿ ತಮ್ಮ ಸಮುದಾಯಕ್ಕೆ ಸಮರ್ಪಕ ಪ್ರತಿನಿಧಿತ್ವ ಸಿಕ್ಕಿಲ್ಲ ಎಂದು ಆರೋಪಿಸುತ್ತಿದ್ದಾರೆ. ರಾಜ್ಯದಲ್ಲಿ ಎಸ್ಸಿ ಸಮುದಾಯದೊಳಗಿನ ದೊಡ್ಡ ವರ್ಗವಾದ ಮಾದಿಗರಿಗೆ ಡಿಸಿಎಂ ಸ್ಥಾನ ನೀಡುವುದರಿಂದ "ಸಾಮಾಜಿಕ ನ್ಯಾಯ" ಸಂದೇಶ ಹೋಗುತ್ತದೆ ಎಂಬ ವಾದ ಮುಂದಿಟ್ಟಿದ್ದಾರೆ.

ಹೈಕಮಾಂಡ್ ಮಟ್ಟದಲ್ಲಿ ಏನು ಚರ್ಚೆ?

ಇತ್ತೀಚಿನ ರಾಜಕೀಯ ಬೆಳವಣಿಗೆಗಳಲ್ಲಿ ಕಾಂಗ್ರೆಸ್ ಹೈಕಮಾಂಡ್ ರಾಜ್ಯ ನಾಯಕತ್ವ ಪುನರ್‌ವ್ಯವಸ್ಥೆ ಬಗ್ಗೆ ಚರ್ಚಿಸುತ್ತಿದೆ ಎಂಬ ವರದಿಗಳು ಬಂದಿವೆ. ಈ ಸಂದರ್ಭದಲ್ಲಿ:ಡಿ.ಕೆ. ಶಿವಕುಮಾರ್ ಅವರನ್ನು ಮುಂದಿನ ಮುಖ್ಯಮಂತ್ರಿ ಮಾಡುವ ಸಾಧ್ಯತೆ,

ಸಿದ್ದರಾಮಯ್ಯ ಅವರ ಮುಂದಿನ ರಾಜಕೀಯ ಪಾತ್ರ, ವಿವಿಧ ಜಾತಿ ಮತ್ತು ಪ್ರಾದೇಶಿಕ ಸಮತೋಲನ, ಇವೆಲ್ಲವನ್ನು ಗಮನದಲ್ಲಿಟ್ಟುಕೊಂಡು ಹೊಸ ಫಾರ್ಮುಲಾ ರೂಪಿಸಲಾಗುತ್ತಿದೆ ಎಂದು ವರದಿಗಳು ಹೇಳುತ್ತಿವೆ. ಈ ಹಿನ್ನೆಲೆಯಲ್ಲಿ "ಒಬ್ಬ ಮಾದಿಗ ನಾಯಕನಿಗೆ ಡಿಸಿಎಂ ಹುದ್ದೆ" ನೀಡುವ ಪ್ರಸ್ತಾವವೂ ಒಳಚರ್ಚೆಯಲ್ಲಿ ಇದೆ ಎಂಬ ಮಾತು ರಾಜಕೀಯ ವಲಯದಲ್ಲಿ ಹರಿದಾಡುತ್ತಿದೆ. ಯಾರ ಹೆಸರುಗಳು ಕೇಳಿಬರುತ್ತಿವೆ?

ಸದ್ಯ ಅಧಿಕೃತ ಘೋಷಣೆ ಏನೂ ಇಲ್ಲ. ಆದರೆ ಕಾಂಗ್ರೆಸ್‌ನ ದಲಿತ ನಾಯಕರು ಮತ್ತು ಮಾದಿಗ ಸಮುದಾಯದ ಕೆಲ ಹಿರಿಯ ನಾಯಕರ ಹೆಸರುಗಳು ರಾಜಕೀಯ ವಲಯದಲ್ಲಿ ಚರ್ಚೆಯಾಗುತ್ತಿವೆ.

ಕೆಲವರು ಸಚಿವ K. H. Muniyappa ಅವರ ಹೆಸರನ್ನೂ ಪ್ರಸ್ತಾಪಿಸುತ್ತಿದ್ದಾರೆ, ಆದರೆ ಪಕ್ಷದಿಂದ ಅಧಿಕೃತ ಸೂಚನೆ ಬಂದಿಲ್ಲ.

ಮಾದಿಗ ಸಂಘಟನೆಗಳ ಪ್ರತಿಭಟನೆ

ಮಾದಿಗ ಸಂಘಟನೆಗಳ ಒಕ್ಕೂಟ ಇತ್ತೀಚೆಗೆ ಸಭೆಗಳು ಮತ್ತು ಪ್ರತಿಭಟನೆಗಳನ್ನು ನಡೆಸಿ:

ಡಿಸಿಎಂ ಸ್ಥಾನ,

ಎಸ್ಸಿ ಒಳ ಮೀಸಲಾತಿ ಜಾರಿ,

ಹೆಚ್ಚಿನ ರಾಜಕೀಯ ಪ್ರತಿನಿಧಿತ್ವ,

ಇವುಗಳನ್ನು ಒತ್ತಾಯಿಸಿದೆ. ಇದರ ಕುರಿತ ವಿಡಿಯೋ ಮತ್ತು ಸಭೆಗಳ ಮಾಹಿತಿ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ.

ಕಾಂಗ್ರೆಸ್ ಒಳಗಿನ ಲೆಕ್ಕಾಚಾರ

ಕಾಂಗ್ರೆಸ್ ಹೈಕಮಾಂಡ್ ಈಗ "ಸಾಮಾಜಿಕ ನ್ಯಾಯ ಫಾರ್ಮುಲಾ" ಮೇಲೆ ಹೆಚ್ಚು ಒತ್ತು ಕೊಡುತ್ತಿದೆ ಎಂದು ವರದಿಗಳು ಹೇಳುತ್ತಿವೆ. ದಲಿತ, ಒಬಿಸಿ, ಲಿಂಗಾಯತ, ಒಕ್ಕಲಿಗ ಸಮತೋಲನ ಸಾಧಿಸುವುದು ಪಕ್ಷದ ಪ್ರಮುಖ ಗುರಿಯಾಗಿದೆ.

ರಾಜಕೀಯ ವಿಶ್ಲೇಷಕರ ಪ್ರಕಾರ:ಡಿಕೆ ಶಿವಕುಮಾರ್ ಸಿಎಂ ಆದರೆ, ದಲಿತ ಸಮುದಾಯಕ್ಕೆ ಬಲವಾದ ಡಿಸಿಎಂ ಸ್ಥಾನ ನೀಡುವ ಸಾಧ್ಯತೆ ಹೆಚ್ಚಿದೆ,

ಅದರಲ್ಲಿ ಮಾದಿಗ ಸಮುದಾಯಕ್ಕೆ ಆದ್ಯತೆ ಸಿಗಬಹುದು. ಬಿಜೆಪಿ ಮತ್ತು ವಿರೋಧ ಪಕ್ಷದ ಪ್ರತಿಕ್ರಿಯೆ

ಬಿಜೆಪಿ ನಾಯಕರು ಕಾಂಗ್ರೆಸ್ "ದಲಿತರನ್ನು ಕೇವಲ ಮತಬ್ಯಾಂಕ್ ಆಗಿ ಬಳಸುತ್ತಿದೆ" ಎಂದು ಟೀಕಿಸಿದ್ದಾರೆ. ಕಾಂಗ್ರೆಸ್ ಒಳಜಗಳ ಮತ್ತು ಅಧಿಕಾರ ಹಂಚಿಕೆ ರಾಜಕೀಯದ ಭಾಗವಾಗಿ ಈ ಬೇಡಿಕೆ ಹೊರಬಂದಿದೆ ಎಂದು ವಿರೋಧ ಪಕ್ಷ ಆರೋಪಿಸಿದೆ. ಪ್ರಸ್ತುತ ಸ್ಥಿತಿ ಕಾಂಗ್ರೆಸ್ ಹೈಕಮಾಂಡ್ ಇನ್ನೂ ಯಾವುದೇ ಅಧಿಕೃತ ಘೋಷಣೆ ಮಾಡಿಲ್ಲ.

ಡಿಸಿಎಂ ಸ್ಥಾನ ಹೆಚ್ಚಿಸುವುದೇ ಅಥವಾ ಹೊಸ ಮುಖಕ್ಕೆ ಅವಕಾಶ ಕೊಡಬೇಕೇ ಎಂಬ ಚರ್ಚೆ ಮುಂದುವರಿದಿದೆ. ಮುಂದಿನ ಕೆಲವು ದಿನಗಳಲ್ಲಿ ದೆಹಲಿ ಮಟ್ಟದ ಸಭೆಗಳ ನಂತರ ಸ್ಪಷ್ಟ ಚಿತ್ರಣ ಬರಬಹುದು ಎಂದು ರಾಜಕೀಯ ವಲಯ ಅಂದಾಜಿಸಿದೆ. ಸಮಾಜ ಸೇವಾಕ ಹಾಗೂ ಹಿರಿಯ ಪತ್ರಕರ್ತರು

## ಸರ್ಕಾರದ ಯೋಜನೆಗಳು ಸಮಾಜದ ಕಟ್ಟಕಡೆಯ ವ್ಯಕ್ತಿಗೂ ತಲುಪಲಿ: ಸಿ.ಕೆ. ಮಲ್ಲಪ್ಪ

• ಮಲ್ಲಮ್ಮ ನುಡಿ ವಾರ್ತೆ ಕಾರವಾರ



ಮೇ.28: ಸರ್ಕಾರದ ಯೋಜನೆಗಳು ಸಮಾಜದ ಕಟ್ಟಕಡೆಯ ವ್ಯಕ್ತಿಗೂ ತಲುಪಬೇಕು. ಆ ನಿಟ್ಟಿನಲ್ಲಿ ಸಾಮಾಜಿಕ ಪರಿಶೋಧನಾ ತಂಡದ ಕಾರ್ಯ ಅತ್ಯಂತ ಅವಶ್ಯಕ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸಾಮಾಜಿಕ ಪರಿಶೋಧನಾ ನಿರ್ದೇಶನಾಲಯದ ನಿರ್ದೇಶಕ ಸಿ.ಕೆ. ಮಲ್ಲಪ್ಪ ಹೇಳಿದರು.

ಅವರು ಬುಧವಾರ ಮುಂಡಗೋಡ ತಾಲೂಕಿನ ಕಾತೂರು ಗ್ರಾಮ ಪಂಚಾಯತಿಯಲ್ಲಿ ಸಾಮಾಜಿಕ ಪರಿಶೋಧನಾ ಕಾರ್ಯದ ಪರಿಶೀಲನೆ ಹಾಗೂ ಜಿಲ್ಲೆಯ ಎಲ್ಲ ತಾಲೂಕುಗಳ ಸಂಪನ್ಮೂಲ ವ್ಯಕ್ತಿಗಳು ಮತ್ತು ಗ್ರಾಮ ಸಂಪನ್ಮೂಲ ವ್ಯಕ್ತಿಗಳ ಸಾಮಾಜಿಕ ಪರಿಶೋಧನಾ ಕಾರ್ಯದ ಪ್ರಗತಿ ಪರಿಶೀಲನೆ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಸಭೆಯಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ, 15ನೇ ಹಣಕಾಸು ಸೇರಿದಂತೆ ಕೇಂದ್ರ ಪುರಸ್ಕೃತ ವಿವಿಧ ಯೋಜನೆಗಳ ಪ್ರಮುಖ ಕಡತಗಳು ಹಾಗೂ ದಾಖಲೆಗಳನ್ನು ಪರಿಶೀಲಿಸಿದರು. ಇದೇ ವೇಳೆ ಜಿಲ್ಲೆಯ ಎಲ್ಲ ತಾಲೂಕುಗಳ ಸಂಪನ್ಮೂಲ ವ್ಯಕ್ತಿಗಳು ಹಾಗೂ ಗ್ರಾಮ ಸಂಪನ್ಮೂಲ ವ್ಯಕ್ತಿಗಳ ಸಾಮಾಜಿಕ ಪರಿಶೋಧನಾ ಕಾರ್ಯದ ಪ್ರಗತಿ ಪರಿಶೀಲಿಸಿ, ಸರ್ಕಾರ ಯೋಜನೆಗಳ ಅನುಷ್ಠಾನದಲ್ಲಿ ಪಾರದರ್ಶಕತೆ, ಕಾಮಗಾರಿಗಳ ಗುಣಮಟ್ಟ ಪರಿಶೀಲನೆ, ದಾಖಲೆಗಳ ಪರಿಶೀಲನೆ, ವಿಶೇಷ ಗ್ರಾಮ ಸಭೆ ಆಯೋಜನೆ, ಜನರ ಸಹಭಾಗಿತ್ವ, ಕ್ರಮ ಮತ್ತು ವಸೂಲಾತಿ ಸೇರಿದಂತೆ ಯೋಜನೆಗಳನ್ನು ಸಮಾಜದ ಕಟ್ಟಕಡೆ-ಯ ವ್ಯಕ್ತಿಗೂ ತಲುಪಿಸುವಲ್ಲಿ ಮತ್ತು ಯೋಜನೆಗಳ ಬಗ್ಗೆ ಅರಿವು ಮೂಡಿಸುವಲ್ಲಿ ಸಾಮಾಜಿಕ ಪರಿಶೋಧನಾ ಸಂಪನ್ಮೂಲ ವ್ಯಕ್ತಿಗಳು ಮೈಗೂಡಿಸಿಕೊಳ್ಳಬೇಕಾದ ಮತ್ತು ಅನುಸರಿಸಬೇಕಾದ ಕ್ರಮಗಳ ಬಗ್ಗೆ ಮಾರ್ಗದರ್ಶನ ಹಾಗೂ ಅಗತ್ಯ ಸಲಹೆ ಸೂಚನೆಗಳನ್ನು ನೀಡಿದರು.

ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಮಹಾತ್ಮಗಾಂಧಿ ನರೇಗಾ ಯೋಜನೆಯಡಿ ಅನುಷ್ಠಾನವಾಗುತ್ತಿರುವ ಬಸನಕಟ್ಟೆ ಕೆರೆ ಹೂಳೆತ್ತುವ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ, ತಾಂತ್ರಿಕ ಸಂಯೋಜಕರು ಮತ್ತು ತಾಂತ್ರಿಕ ಸಹಾಯಕರೊಂದಿಗೆ

ಕಾಮಗಾರಿ ನಿರ್ವಹಣೆ ಕುರಿತು ಸಮಾಲೋಚಿಸಿ, ಅಗತ್ಯ ಸಲಹೆ ಸೂಚನೆಗಳನ್ನು ನೀಡಿದರು. ಇದೇ ವೇಳೆ ಕೂಲಿಕಾರರೊಂದಿಗೆ ಸಂವಾದ ನಡೆಸಿ, ಅಭಿಪ್ರಾಯ ಸಂಗ್ರಹಿಸಿದರು.

ಈ ಸಂದರ್ಭದಲ್ಲಿ ತಾಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿ ಟಿ.ವಾಯ್. ದಾಸನಕೊಪ್ಪ, ಸಹಾಯಕ ನಿರ್ದೇಶಕ (ಗ್ರಾಉ) ಸೋಮಲಿಂಗಪ್ಪ ಭಬ್ಬಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸಹಾಯಕ ಅಭಿಯಂತರರು ದೀಪಾ ಎಸ್ ಶೆಡಗೇರಿ, ಅನುಷ್ಠಾನ ಇಲಾಖೆಯ ಅಧಿಕಾರಿಗಳು, ಗ್ರಾಮ ಪಂಚಾಯತ್ ಆಡಳಿತಾಧಿಕಾರಿಗಳು, ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಸಾಮಾಜಿಕ ಪರಿಶೋಧನೆ ಜಿಲ್ಲಾ ಸಮಾಲೋಚಕರು, ತಾಲೂಕು ಮತ್ತು ಗ್ರಾಮ ಪಂಚಾಯತಿ ಮಟ್ಟದ ಸಂಪನ್ಮೂಲ ವ್ಯಕ್ತಿಗಳು, ಮನರೇಗಾ ತಾಂತ್ರಿಕ ಸಿಬ್ಬಂದಿ ಹಾಗೂ ಕೂಲಿಕಾರರು ಉಪಸ್ಥಿತರಿದ್ದರು.

### ಪಾಲಕ-ಪೋಷಕರಿಗೆ ಜಿಲ್ಲಾ ಪಂಚಾಯತ್ ಸಿ.ಇ.ಓ ಬಹಿರಂಗ ಪತ್ರ

## ಸರ್ಕಾರಿ ಶಾಲೆಗೆ ಮಕ್ಕಳನ್ನು ಸೇರಿಸುವಂತೆ ಮನವಿ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಮೇ.28(ಕರ್ನಾಟಕ ವಾರ್ತೆ) ಹೊಸ ಆಶಯಗಳು ಮತ್ತು ಕನಸುಗಳೊಂದಿಗೆ 2026-27ನೇ ಸಾಲಿನ ಶೈಕ್ಷಣಿಕ ವರ್ಷವು ಬರುವ ಜೂನ್ 1 ರಿಂದ ಆರಂಭವಾಗುತ್ತಿದ್ದು, ಜಿಲ್ಲೆಯ ಸರಕಾರಿ ಶಾಲೆಗಳಲ್ಲಿ ಶಾಲಾ ಪ್ರಾರಂಭೋತ್ಸವ ಆಯೋಜಿಸಲಾಗುತ್ತಿದೆ. ಮಕ್ಕಳನ್ನು ಸರ್ಕಾರಿ ಶಾಲೆಗೆ ಸೇರಿಸುವಂತೆ ಜಿಲ್ಲಾ ಪಂಚಾಯತ ಸಿ.ಇ.ಓ ರಾಹುಲ್ ಸಂಕನೂರ್ ಜಿಲ್ಲೆಯ ಪಾಲಕ-ಪೋಷಕರಲ್ಲಿ ಮನವಿ ಮಾಡಿದ್ದಾರೆ.



ಶಾಲಾ ಪ್ರಾರಂಭೋತ್ಸವ ಹಿನ್ನೆಲೆಯಲ್ಲಿ ಪಾಲಕ-ಪೋಷಕರಿಗೆ ಬಹಿರಂಗ ಪತ್ರ ಬರೆದಿರುವ ಅವರು, ಗುಣಮಟ್ಟದ ಶಿಕ್ಷಣವು ಪ್ರತಿಯೊಬ್ಬ ಮಗುವಿನ ಮೂಲಭೂತ ಹಕ್ಕಾಗಿದ್ದು, ಅದನ್ನು ಈಡೇರಿಸುವ ಮತ್ತು ಸಮೃದ್ಧ ಸಮಾಜ ನಿರ್ಮಾಣದ ಭದ್ರ ಅಡಿಪಾಯ ಹಾಕುವ ಜವಾಬ್ದಾರಿ ಪಾಲಕರ ಮೇಲಿದೆ. ಶಾಲೆ ಮತ್ತು ಸಮುದಾಯಗಳು ಒಂದೇ ಗುರಿಯೊಂದಿಗೆ ಕೈಜೋಡಿಸಿದಾಗ ಮಕ್ಕಳ ಭವಿಷ್ಯ ಮತ್ತಷ್ಟು ಉಜ್ವಲವಾಗುತ್ತದೆ. ಆದ್ದರಿಂದ, ಪೋಷಕರೆಲ್ಲರೂ ತಮ್ಮ ಮಕ್ಕಳನ್ನು ನಮ್ಮ ಸರ್ಕಾರಿ ಶಾಲೆಗಳಿಗೆ ದಾಖಲಿಸಬೇಕೆಂದು ಮನವಿ ಮಾಡಿದ್ದಾರೆ.

ಮಗುವಿಗೆ ಸಮಗ್ರ ಗುಣಮಟ್ಟದ ಮತ್ತು ಸ್ಪರ್ಧಾತ್ಮಕ ಶಿಕ್ಷಣವನ್ನು ನೀಡಲು, ನಮ್ಮ ಸರ್ಕಾರಿ ಶಾಲೆಗಳು ಬಲಿಷ್ಠ ಮೂಲಸೌಕರ್ಯ ಹಾಗೂ ಪೂರಕ ವ್ಯವಸ್ಥೆಗಳನ್ನು ಹೊಂದಿರುವ ಜ್ಞಾನದ ದೇಗುಲಗಳಾಗಿವೆ. ಅರ್ಹ ಮತ್ತು ಬದ್ಧತೆಯುಳ್ಳ ಶಿಕ್ಷಕರು, ಉಚಿತ ಪಠ್ಯಪುಸ್ತಕಗಳು ಮತ್ತು ಸಮವಸ್ತ್ರಗಳು, ಪೌಷ್ಟಿಕ ಬಿಸಿಯೂಟ ಯೋಜನೆ, ಸುರಕ್ಷಿತ ಮೂಲಸೌಕರ್ಯ, ಪ್ರೋತ್ಸಾಹಧನ ಮತ್ತು ವಿದ್ಯಾರ್ಥಿ ವೇತನ, ಸಮಗ್ರ ವ್ಯಕ್ತಿತ್ವ ವಿಕಸನ, ಗ್ರಂಥಾಲಯ, ಪ್ರಯೋಗಾಲಯ, ತಾಂತ್ರಿಕ ಶಿಕ್ಷಣ, ಡಿಜಿಟಲ್ ಕಲಿಕಾ ಹೀಗೆ ಅನೇಕ ಸೌಲಭ್ಯಗಳು ಇಲ್ಲಿವೆ. ಸರ್ಕಾರಿ ಶಾಲೆಗಳು ಸುರಕ್ಷಿತ, ಅಂತರ್ಗತ, ಗುಣಮಟ್ಟದ ಕಲಿಕೆ ಮತ್ತು ಅತ್ಯುತ್ತಮ ಕಲಿಕಾ ವಾತಾವರಣವನ್ನು ಖಚಿತಪಡಿಸಿಕೊಂಡಿವೆ ಎಂದಿದ್ದಾರೆ.

ಪಾಲಕರ ಮಹಾಸಭೆಗೆ ಬನ್ನಿ:

ಬರುವ ಜೂನ್ 1 ರಂದು ಜಿಲ್ಲೆಯ ಪ್ರತಿ ಸರ್ಕಾರಿ ಶಾಲೆಯಲ್ಲಿ ಪಾಲಕ-ಪೋಷಕರ ಮಹಾಸಭೆ ಆಯೋಜಿಸಲಾಗಿದ್ದು, ಜಿಲ್ಲೆಯ ಎಲ್ಲಾ ಪಾಲಕ-ಪೋಷಕರು ತಪ್ಪದೇ ಭಾಗವಹಿಸಬೇಕೆಂದು ಮನವಿ ಮಾಡಿರುವ ರಾಹುಲ್ ಸಂಕನೂರ್ ಅವರು, ನಾವೆಲ್ಲರು ಒಟ್ಟಾಗಿ ಸೇರಿ ನಮ್ಮ ಮಕ್ಕಳ ಭವಿಷ್ಯವನ್ನು ಉಜ್ವಲವಾಗಿಸೋಣ. ಹೆಚ್ಚಿನ ಸಂಖ್ಯೆಯಲ್ಲಿ ಪಾಲಕ-ಪೋಷಕರ ಉಪಸ್ಥಿತಿಗೆ ಎದುರು ನೋಡುತ್ತಿದ್ದೇವೆ ಎಂದು ಪತ್ರದಲ್ಲಿ ಆಹ್ವಾನ ನೀಡಿದ್ದಾರೆ.

## ಭಾಗ್ಯನಗರದಲ್ಲಿ ಸಂಭ್ರಮದ ಬಕ್ರೀದ್ ಹಬ್ಬ ಆಚರಣೆ



• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ತ್ಯಾಗಬಲಿದಾನದ ಸಂಕೇತವಾಗಿರುವ ಬಕ್ರೀದ್ ಹಬ್ಬವನ್ನು ಭಾಗ್ಯನಗರ ಪಟ್ಟಣದಲ್ಲಿ ಶ್ರದ್ಧೆ, ಭಕ್ತಿ ಹಾಗೂ ಸಂಭ್ರಮದಿಂದ ಆಚರಿಸಲಾಯಿತು. ಪಟ್ಟಣದ ಈದ್ಗಾ ಮೈದಾನದಲ್ಲಿ ಭಾಗ್ಯನಗರದ, ಓಜನಹಳ್ಳಿ, ಯತ್ನಟ್ಟಿ ಸೇರಿದಂತೆ ಸುತ್ತಲಿನ ಗ್ರಾಮಸ್ಥರು ಆಗಮಿಸಿ ಸಾಮೂಹಿಕ ಪ್ರಾರ್ಥನೆಯಲ್ಲಿ ಪಾಲ್ಗೊಂಡರು.

ಈ ಸಂದರ್ಭದಲ್ಲಿ ಜಾಮೀಯಾ ಮಜೀದ್ ಕಮಿಟಿಯ ಅಧ್ಯಕ್ಷರಾದ ಇಬ್ರಾಹಿಂಸಾಬ ಬಿಸರಳ್ಳಿ, ಪಟ್ಟಣ ಪಂಚಾಯತ್ ಸದಸ್ಯರಾದ ಹೊನ್ನೂರಸಾಬ ಬೈರಾಪೂರ, ಉಪಾಧ್ಯಕ್ಷರಾದ ಮೌಲಾಹುಸೇನ ಹಣಗಿ,, ಬಾಷುಸಾಬ ಖಾಜಾ ಪಟೇಲ್, ಹಾಜಿ ಕುತ್ಬುದ್ದಿನಸಾಬ, ಕಬೀರಸಾಬ ಬೈರಾಪೂರ, ಮೆಹಬೂಬ ಬಳಿಗಾರ ಎಫ್ ಎ ನೂರ ಭಾಶಾ, ಮರ್ದಾನ ಸಾಬ್ ಹಿರೇ ಮಸೂತಿ, ಮಹ್ಮದ್ ಸಾಬ್ ಬೈರಾಪುರ ಹಾಗೂ ಮೆಹಬೂಬಸಾಬ ಕೊತ್ವಾಲ, ಸೇರಿದಂತೆ ಇತರರು ಉಪಸ್ಥಿತರಿದ್ದರು

## ಬಳ್ಳಾರಿ ಜಿಲ್ಲೆಯ ಕಾಂಗ್ರೆಸ್ ಶಾಸಕರಲ್ಲಿ ಯಾರಿಗೆ ಒಲಿಯಲಿದೆ ಸಚಿವ ಸ್ಥಾನ?

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಜಿಲ್ಲೆಯ ಕಾಂಗ್ರೆಸ್ ಶಾಸಕರಲ್ಲಿ ಸಚಿವ ಸ್ಥಾನ ಯಾರಿಗೆ ಸಿಗಬಹುದು ಎಂಬ ಚರ್ಚೆ ಈಗ ರಾಜ್ಯ ರಾಜಕಾರಣದಲ್ಲಿ ಜೋರಾಗಿದೆ. ಮುಖ್ಯಮಂತ್ರಿ ಬದಲಾವಣೆ ಮತ್ತು ಸಚಿವ ಸಂಪುಟ ವಿಸ್ತರಣೆ ಕುರಿತ ಮಾತುಕತೆಗಳ ನಡುವೆ ಬಳ್ಳಾರಿ ಜಿಲ್ಲೆಯ ಕಾಂಗ್ರೆಸ್ ನಾಯಕರೂ ಲಾಬಿ ಆರಂಭಿಸಿದ್ದಾರೆ. ಈಗ ಹೆಚ್ಚು ಕೇಳಿಬರುತ್ತಿರುವ ಹೆಸರುಗಳು ಇವು:ಬಿ. ನಾಗೇಂದ್ರ ಬಳ್ಳಾರಿ ಜಿಲ್ಲೆಯಲ್ಲೇ ಅತ್ಯಂತ ಬಲವಾದ ಅಭ್ಯರ್ಥಿ ಎಂದು ಪರಿಗಣಿಸಲಾಗುತ್ತಿದೆ. ಈಗಾಗಲೇ ಸಚಿವರಾಗಿದ್ದ ಅನುಭವವೂ ಇದೆ. ಜಿಲ್ಲೆಯ ಕೆಲ ಶಾಸಕರು ಮತ್ತು ಬೆಂಬಲಿಗರು ಮತ್ತೆ ಅವರಿಗೆ ಸಚಿವ ಸ್ಥಾನ ನೀಡಬೇಕು ಎಂದು ಒತ್ತಾಯಿಸುತ್ತಿದ್ದಾರೆ. ಹೈಕಮಾಂಡ್ ಮಟ್ಟದಲ್ಲೂ ಅವರ ಹೆಸರು ಚರ್ಚೆಯಲ್ಲಿದೆ ಎನ್ನಲಾಗುತ್ತಿದೆ. ನಾರಾ ಭರತ್ ರೆಡ್ಡಿ ಯುವ ನಾಯಕತ್ವದ ಮುಖವಾಗಿ ಕಾಣಲಾಗುತ್ತಿದೆ. ನಗರ ಕ್ಷೇತ್ರದಲ್ಲಿ ಕಾಂಗ್ರೆಸ್ ಬಲಪಡಿಸಿದ ಕಾರಣದಿಂದ ಇವರಿಗೂ ಅವಕಾಶ ಸಿಗಬಹುದು ಎಂಬ ಮಾತಿದೆ. ಆದರೆ ಸೀನಿಯಾರಿಟಿ ವಿಷಯದಲ್ಲಿ ನಾಗೇಂದ್ರ ಅವರಿಗೆ ಮುನ್ನಡೆ ಇದೆ. ಜೆ.ಎನ್. ಗಣೇಶ್ ಪಕ್ಷ ಸಂಘಟನೆಯಲ್ಲಿ ಸಕ್ರಿಯರಾಗಿದ್ದರೂ, ಪ್ರಸ್ತುತ ಸಚಿವ ಸ್ಥಾನಕ್ಕೆ ಅವರ ಹೆಸರು ಮೊದಲ ಪಟ್ಟಿಯಲ್ಲಿ ಇಲ್ಲ ಎನ್ನಲಾಗುತ್ತಿದೆ. ಆದರೂ ಒಳರಾಜಕೀಯ ಸಮೀಕರಣ ಬದಲಾಗಿದ್ರೆ ಅವಕಾಶ ಸಿಗಬಹುದು. ತುಕಾರಾಂ ಪರಿಶಿಷ್ಟ ವರ್ಗದ ಸಮೀಕರಣದಲ್ಲಿ ಇವರ ಹೆಸರೂ ಕೇಳಿಬರುತ್ತಿದೆ.

ಆದರೆ ಹೈಕಮಾಂಡ್ ಯಾವ ಸಾಮಾಜಿಕ ಸಮತೋಲನ ನೋಡುತ್ತದೆ ಎನ್ನುವುದು ನಿರ್ಧಾರಕಾರಿ. ಪ್ರಸ್ತುತ ರಾಜಕೀಯ ಲೆಕ್ಕಾಚಾರ ನೋಡಿದರೆ:ಬಳ್ಳಾರಿ ಜಿಲ್ಲೆಗೆ ಪ್ರತಿನಿಧಿತ್ವ ಕೊಡಬೇಕೆಂಬ ಒತ್ತಡ ಇದೆ. ಅನುಭವ + ಸಮುದಾಯ ಸಮೀಕರಣದಲ್ಲಿ ಬಿ. ನಾಗೇಂದ್ರ ಅವರಿಗೆ ಹೆಚ್ಚು ಮುನ್ನಡೆ ಇದೆ. ಹೊಸ ಮುಖಗಳಿಗೆ ಅವಕಾಶ ಕೊಡಬೇಕೆಂಬ ಮಾತೂ ಕಾಂಗ್ರೆಸ್ ಒಳಗೆ ಕೇಳಿಬರುತ್ತಿದೆ. ಆದ್ದರಿಂದ ಈಗಿನ ಪರಿಸ್ಥಿತಿಯಲ್ಲಿ ಸಚಿವ ಸ್ಥಾನಕ್ಕೆ ಹೆಚ್ಚು ಸಾಧ್ಯತೆ ಇರುವ ನಾಯಕರೆಂದರೆ ಬಿ. ನಾಗೇಂದ್ರ ಎನ್ನುವುದು ರಾಜಕೀಯ ವಲಯದ ಚರ್ಚೆ. ಆದರೆ ಅಂತಿಮ ನಿರ್ಧಾರ ಕಾಂಗ್ರೆಸ್ ಹೈಕಮಾಂಡ್ ಮತ್ತು ಮುಖ್ಯಮಂತ್ರಿ ಮಟ್ಟದಲ್ಲಿ ಆಗಲಿದೆ.

# ಶುದ್ಧ ಕುಡಿಯುವ ನೀರು ಒದಗಿಸುವಂತೆ ಜಿಲ್ಲಾಧಿಕಾರಿ ಪಾಂಡ್ವೆ ರಾಹುಲ್ ಸೂಚನೆ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಮೇ.28: ಜಿಲ್ಲೆಯ ನಾಗರಿಕರಿಗೆ ಸುರಕ್ಷಿತ ಮತ್ತು ಶುದ್ಧ ಕುಡಿಯುವ ನೀರನ್ನು ಒದಗಿಸಲು ತ್ವರಿತ ಮತ್ತು ಪರಿಣಾಮಕಾರಿ ಕ್ರಮಗಳನ್ನು ಕೈಗೊಳ್ಳುವಂತೆ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರು ಆಗಿರುವ ಜಿಲ್ಲೆಯ ಜಿಲ್ಲಾಧಿಕಾರಿಗಳಾದ ಪಾಂಡ್ವೆ ರಾಹುಲ್ ತುಕಾರಾಂ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು. ಇತ್ತೀಚೆಗೆ ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ವತಿಯಿಂದ ಕುಡಿಯುವ ನೀರಿನ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಕುಡಿಯುವ ನೀರನ್ನು ಕನಿಷ್ಠ 5 ನಿಮಿಷಗಳ ಕಾಲ ಕುದಿಸಿ ಆರಿಸಿ ನಂತರ ಬಳಸಬೇಕು. ಸರ್ಕಾರಿ ಅಧಿಕೃತ ಪೈಪ್ ಲೈನ್ ನೀರು ಅಥವಾ ಮಾನ್ಯತೆ ಪಡೆದ ಪ್ಯಾಕೇಜ್ ಕುಡಿಯುವ ನೀರನ್ನು ಮಾತ್ರ ಬಳಸಬೇಕು. ಕುಡಿಯುವ ನೀರನ್ನು ಶುಭ್ರ ಮತ್ತು ಮುಚ್ಚಿದ ಪಾತ್ರೆಯಲ್ಲಿ ಸಂಗ್ರಹಿಸಿ; ನಿಯಮಿತವಾಗಿ ಪಾತ್ರೆ ತೊಳೆಬೇಕು. ಭೇದಿ ಅಥವಾ ವಾಂತಿ ಕಾಣಿಸಿಕೊಂಡಲ್ಲಿ ತಕ್ಷಣ ಓಆರ್.ಎಸ್ ಕುಡಿಯಬೇಕು. ಮತ್ತು ಹತ್ತಿರದ ಆರೋಗ್ಯ ಕೇಂದ್ರಕ್ಕೆ ತೆರಳಬೇಕು. ನಲ್ಲಿ ನೀರಿನಲ್ಲಿ ಕೆಟ್ಟ ವಾಸನೆ, ಬಣ್ಣ ಬದಲಾವಣೆ ಅಥವಾ ವಿಚಿತ್ರ ರುಚಿ ಕಂಡುಬಂದರೆ ಗ್ರಾಮ ಪಂಚಾಯತ್ ಅಥವಾ ಸಂಬಂಧಪಟ್ಟ ಸ್ಥಳಿಯ ಪ್ರಾಧಿಕಾರಕ್ಕೆ ತಿಳಿಸಬೇಕು. ಕುಡಿಯುವ ನೀರಿನ ಮೂಲಗಳ ಸುತ್ತಮುತ್ತ ಸ್ವಚ್ಛತೆ ಕಾಪಾಡಿಕೊಳ್ಳಬೇಕು. ಸಾರ್ವಜನಿಕರು ನದಿ, ಕೆರೆ, ಬಾವಿ, ತೆರೆದ ಜಲಮೂಲ ಅಥವಾ ಪ್ರವಾಹ ಪೀಡಿತ ಪ್ರದೇಶದ ನೀರನ್ನು ನೇರವಾಗಿ ಕುಡಿಯಬಾರದು. ಅಪರಿಚಿತ ಅಥವಾ ಪರೀಕ್ಷಿಸದ ಮೂಲದ ನೀರನ್ನು ಬಳಸಬಾರದು. ಕುಡಿಯುವ ನೀರಿನ ಮೂಲಗಳ ಸಮೀಪ ಬಯಲು ಶೌಚ ಮಾಡಬಾರದು. ನೀರಿನ



ಪೈಪ್‌ಲೈನ್ ಅಥವಾ ತೊಟ್ಟಿಗಳ ಬಳಿ ಕಸ ಅಥವಾ ತ್ಯಾಜ್ಯ ಬಿಸಾಡಬಾರದು. ವಿವಿಧ ಇಲಾಖೆಗಳಿಗೆ ಸೂಚನೆಗಳು: ಯಾದಗಿರಿ ಜಿಲ್ಲೆಯ ಜಿಲ್ಲಾ ಪಂಚಾಯತ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಆರೋಗ್ಯ ಇಲಾಖೆ, ನಗರ ಸ್ಥಳೀಯ ಸಂಸ್ಥೆಗಳು, ಕಂದಾಯ, ಪೊಲೀಸ್, ಶಿಕ್ಷಣ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ಆಹಾರ ಸುರಕ್ಷತಾ ಇಲಾಖೆ ಸೇರಿದಂತೆ ಎಲ್ಲಾ ಸಂಬಂಧಪಟ್ಟ ಇಲಾಖೆಗಳಿಗೆ ಕೆಳಕಂಡ ಸಾಮಾನ್ಯ ಸೂಚನೆಗಳನ್ನು ಕಡ್ಡಾಯವಾಗಿ ಪಾಲಿಸುವಂತೆ ನಿರ್ದೇಶಿಸಲಾಗಿದೆ. ನಿಮ್ಮ ವ್ಯಾಪ್ತಿಯ ಎಲ್ಲಾ ಪ್ರದೇಶಗಳಲ್ಲಿ ಶುದ್ಧ ಮತ್ತು ಸುರಕ್ಷಿತ ಕುಡಿಯುವ ನೀರಿನ ನಿಯಮಿತ ಪೂರೈಕೆ ಖಾತ್ರಿ ಪಡಿಸಿಕೊಳ್ಳಬೇಕೆಂದು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು. ನೀರು ಸರಬರಾಜು ವ್ಯವಸ್ಥೆಯ ಪೈಪ್ ಲೈನ್, ಓವರ್ ಹೆಡ್ ತೊಟ್ಟಿ ಮತ್ತು ಬೋರ್‌ವೆಲ್ ಗಳನ್ನು ನಿಯಮಿತವಾಗಿ ಪರೀಕ್ಷಿಸಿ; ಸೋರಿಕೆ ಅಥವಾ ದೋಷ ಕಂಡುಬಂದಲ್ಲಿ ತಕ್ಷಣ ದುರಸ್ತಿ ಮಾಡಬೇಕು. ಕೋರಿನೇಷನ್ ಮತ್ತು ನೀರಿನ ಗುಣಮಟ್ಟ ಪರೀಕ್ಷೆ ನಿಯಮಿತವಾಗಿ ನಡೆಸಬೇಕು. ನೀರು ಸರಬರಾಜು ವ್ಯತ್ಯಯವಾದ ಪ್ರದೇಶಗಳಿಗೆ ತಕ್ಷಣ ಪರ್ಯಾಯ ವ್ಯವಸ್ಥೆ ಮೂಲಕ ನೀರು ಪೂರೈಸುವ ಏರ್ಪಾಡು ಮಾಡಬೇಕೆಂದು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು. ಕ್ಲೋರಿನ್ ಮಾತ್ರೆ, ಬ್ಲೀಚಿಂಗ್ ಪೌಡರ್, ಓಆರ್.ಎಸ್ ಪ್ಯಾಕೆಟ್ ಮತ್ತು ಅಗತ್ಯ ಔಷಧಿಗಳ ದಾಸ್ತಾನು ಸಾಕಷ್ಟು ಇರಿಸಬೇಕು. ಜಲಜನ್ಯ ರೋಗಗಳಾದ ಅತಿಸಾರ, ವಾಂತಿ, ಜ್ವರ, ಕಾಮಾಲೆ ಮೊದಲಾದ ಪ್ರಕರಣಗಳ ಮೇಲ್ವಿಚಾರಣೆ ಬಲಪಡಿಸಿ; ಸಮೂಹ ಪ್ರಕರಣ ಕಂಡುಬಂದಲ್ಲಿ ಅಗತ್ಯ ಕ್ರಮವಹಿಸತಕ್ಕದ್ದು. ಸಾರ್ವಜನಿಕ ಜಲಮೂಲಗಳ ಸುತ್ತ ಸ್ವಚ್ಛತೆ ಕಾಪಾಡಿ; ತ್ಯಾಜ್ಯ ಅಥವಾ ಒಳಚರಂಡಿ ನೀರು ಕಲಸಿ ಹೋಗದಂತೆ ಮುಂಜಾಗ್ರತೆ ಕ್ರಮವಹಿಸುವುದು. ಗ್ರಾಮ, ವಾರ್ಡ್ ಮತ್ತು ಶಾಲಾ ಮಟ್ಟದಲ್ಲಿ ಸುರಕ್ಷಿತ ನೀರಿನ ಬಳಕೆ ಮತ್ತು ನೈರ್ಮಲ್ಯದ ಬಗ್ಗೆ ಜಾಗೃತಿ ಕಾರ್ಯಕ್ರಮ ನಡೆಸಬೇಕೆಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರು ಆಗಿರುವ ಜಿಲ್ಲೆಯ ಜಿಲ್ಲಾಧಿಕಾರಿಗಳಾದ ರಾಹುಲ್ ತುಕಾರಾಂ ಪಾಂಡ್ವೆ ಅವರು ಸಂಬಂಧಿಸಿದ ಇಲಾಖೆಯ ಅಧಿಕಾರಿಗೆ ಸೂಚಿಸಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಲವೀಶ್ ಒರಡಿಯಾ, ಅಪರ ಜಿಲ್ಲಾಧಿಕಾರಿ ರಮೇಶ ಕೋಲಾರ್ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# 2 ಕೋಟಿ ವೆಚ್ಚದ ಸುಸಜ್ಜಿತ ಮೀನು ಮಾರುಕಟ್ಟೆ ನಿರ್ಮಾಣ



• ಮಲ್ಲಮ್ಮ ನುಡಿ ವಾರ್ತೆ ವಿಜಯನಗರ(ಹೊಸಪೇಟೆ)

ಮೇ.28:ಮೀನುಗಾರರ ಆರ್ಥಿಕ ಸುಧಾರಣೆ ಹಾಗೂ ಮೂಲಸೌಕರ್ಯ ಕಲ್ಪಿಸುವ ನಿಟ್ಟಿನಲ್ಲಿ ತರಕಾರಿ ಮಾರುಕಟ್ಟೆಯ ಮಾದರಿಯಲ್ಲೇ ಕೆಎಂಇಆರ್‌ಸಿ

ಅನುದಾನದಡಿ 2 ಕೋಟಿ ವೆಚ್ಚದಲ್ಲಿ ಸುಸಜ್ಜಿತ ಹಾಗೂ ಪ್ರತ್ಯೇಕ ಮೀನು ಮಾರುಕಟ್ಟೆ ನಿರ್ಮಿಸಲಾಗುವುದು ಎಂದು ಶಾಸಕ ಹೆಚ್.ಆರ್.ಗವಿಯಪ್ಪ ಭರವಸೆ ನೀಡಿದರು.

ನಗರದ ಹೊರವಲಯದಲ್ಲಿನ ಕೊಂಡನಾಯಕನಹಳ್ಳಿಯಲ್ಲಿ ಸುಮಾರು 35 ಲಕ್ಷ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾದ ನೂತನ ಮೀನುಗಾರರ ಕಚೇರಿ ಕಟ್ಟಡ ಉದ್ಘಾಟಿಸಿ ಅವರು ಮಾತನಾಡಿದರು.

ರಸ್ತೆಬದಿಯಲ್ಲಿ ಕುಳಿತು ಮೀನು ಮಾರಾಟ ಮಾಡುವುದನ್ನು ತಪ್ಪಿಸಿ, ಮೀನುಗಾರರಿಗೆ ಗೌರವಯುತ ಸ್ಥಾನ ನೀಡಲು ನಾನೇ ಖುದ್ದಾಗಿ ಮಾರುಕಟ್ಟೆ ನಿರ್ಮಾಣಕ್ಕೆ ಬೇಕಾದ ಸ್ಥಳ ಹುಡುಕಿ ಕೊಡುತ್ತೇನೆ. ಮುಂದಿನ ಎರಡು ವರ್ಷಗಳಲ್ಲಿ ಕಟ್ಟಡ ಕಾಮಗಾರಿ ಪೂರ್ಣಗೊಳಿಸಬೇಕು ಎಂದು ತಿಳಿಸಿದರು.ಬಡ ಮೀನುಗಾರರು ಮತ್ತು ರೈತರು ಬದುಕಬೇಕಾದರೆ ಹಳೆಯ ಮಾದರಿಯ ಲೈಸೆನ್ಸ್ ಸಿಸ್ಟಮ್ ಮರು ಜಾರಿಗೆ ಬರಬೇಕು. ಇದಕ್ಕಾಗಿ ಮುಂದಿನ ದಿನಗಳಲಿ ರಾಜ್ಯ ಮತ್ತು ಆಂಧ್ರ ಸರ್ಕಾರಗಳನ್ನು ಒಗ್ಗೂಡಿಸಿ,ಬೋರ್ಡ್ ಅಧಿಕಾರಿಗಳಿಗೆ ಮತ್ತೊಮ್ಮೆ ಮನವಿ ಸಲ್ಲಿಸಿ ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದರು.ಆಂಧ್ರಪ್ರದೇಶ, ಪಶ್ಚಿಮ ಬಂಗಾಳ ಅಥವಾ ತಮಿಳುನಾಡಿನ ಯಾವುದೇ ಒಬ್ಬನೇ ಒಬ್ಬ ದೊಡ್ಡ ಗುತ್ತಿಗೆದಾರನಿಗೆ ಇಡೀ ವ್ಯವಸ್ಥೆಯ ಲಾಭ ಸಿಗಬಾರದು.ದುಡಿಯುವ ಸ್ಥಳೀಯ ಬಡ ಮೀನುಗಾರರ ಶ್ರಮಕ್ಕೆ ತಕ್ಕ ಪ್ರತಿಫಲ ಸಿಗಬೇಕು.ಕನಿಷ್ಠ ಶುಲ್ಕದೊಂದಿಗೆ ಲೈಸೆನ್ಸ್ ನೀಡಿ, ಅವರು ಸ್ವತಂತ್ರವಾಗಿ ಮೀನು ಹಿಡಿದು ಬದುಕಲು ಅವಕಾಶ ಕಲ್ಪಿಸಿಕೊಡಬೇಕು. ಅಧಿಕಾರಿಗಳು ಯಾವುದೇ ದೊಡ್ಡ ಕಾಂಟ್ರಾಕ್ಟರ್‌ಗಳಿಗೆ ಪ್ರೋತ್ಸಾಹ ನೀಡದೆ, ನಿಜವಾದ ಸ್ಥಳೀಯ ಫಲಾನುಭವಿಗಳಿಗೆ ಮಾತ್ರ ಮೀನು ಹಿಡಿಯುವ ಹಕ್ಕನ್ನು ನೀಡಬೇಕು ಎಂದು ಅಧಿಕಾರಿಗಳಿಗೆ ಕಡಕ್ ಸೂಚನೆ ನೀಡಿದರು.

ತಾಲ್ಲೂಕಿನಲ್ಲಿ ಪ್ರಸ್ತುತ 7 ಕೆರೆಗಳನ್ನು ಇಲಾಖೆ ವ್ಯಾಪ್ತಿಗೆ ಪಡೆಯಲಾಗಿದ್ದು, ಮುಂದಿನ ದಿನಗಳಲ್ಲಿ ಇನ್ನೂ 15 ರಿಂದ 17 ಕೆರೆಗಳನ್ನು ವಶಕ್ಕೆ ಪಡೆದು ಸ್ಥಳೀಯ ಮೀನುಗಾರರಿಗೆ ಹಂಚಿಕೆ ಮಾಡಲಾಗುವುದು. ಇದರಿಂದ ಸ್ಥಳೀಯರಿಗೆ ಉದ್ಯೋಗ ಮತ್ತು ಆದಾಯ ದೊರೆ–ಯುತ್ತದೆ. ಈ ವರ್ಷ ಅಥವಾ ಬರುವ ವರ್ಷದೊಳಗೆ ಜಲ ಪ್ರದೇಶದಲ್ಲಿ 'ಫಿಶ್ ಫಾರ್ಮ್' ಯೋಜನೆಗಳನ್ನು ಆರಂಭಿಸಲು ಚಿಂತನೆ ನಡೆಸಲಾಗುವುದು ಎಂದು ತಿಳಿಸಿದರು ಇಲಾಖೆಯಿಂದ ನೀಡಲಾಗುವ ನೆಟ್,ಕಿಟ್ ಸೇರಿದಂತೆ ಯಾವುದೇ ಸೌಲಭ್ಯವನ್ನು ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಕಿವಿ ಮಾತು ಹೇಳಿದರು. ಟಿ.ಬಿ. ಡ್ಯಾಂ ಆವರಣದಲ್ಲಿ ಲಭ್ಯವಿರುವ ಪ್ಯಾಕೇಜಿಂಗ್ ಯೂನಿಟ್ ಮತ್ತು ಕೋಲ್ಡ್ ಸ್ಟೋರೇಜ್ ಯೂನಿಟ್ ಸರ್ಕಾರಿ ಸ್ವಾಮ್ಯದಲ್ಲೇ ಸೂಕ್ತ ಶುಲ್ಕದೊಂದಿಗೆ ಸಾರ್ವಜನಿಕವಾಗಿ ನಡೆಸಿ, ಮೀನುಗಾರಿಕಾ ಉದ್ಯಮಕ್ಕೆ ಹೆಚ್ಚಿನ ಉತ್ತೇಜನ ನೀಡಲು ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು. ಅಲ್ಲದೆ, ಟಿ.ಬಿ. ಡ್ಯಾಂ,ಕಮಲಾಪುರ, ಮಲಪನಗುಡಿ ಮುಂತಾದ ಪ್ರದೇಶಗಳಲ್ಲಿ ಮೂರು ಸಾವಿರಕ್ಕೂ ಅಧಿಕ ಮೀನುಗಾರರ ಕುಟುಂಬ ವಾಸಿಸುತ್ತಿವೆ.ಇವರಲ್ಲಿ ಹೆಚ್ಚಿನವರಿಗೆ ವಸತಿ ಸೌಲಭ್ಯಗಳಿಲ್ಲ. ಅಂತಹವರನ್ನು ಗುರುತಿಸಿ ವಸತಿ ರಹಿತರ ಅರ್ಹ ಫಲಾನುಭವಿಗಳ ಪಟ್ಟಿ ನೀಡಲು ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಅವರಿಗೆ ವಸತಿ ವ್ಯವಸ್ಥೆ ಕಲ್ಪಿಸಲು ಅಧಿಕಾರಿಗಳೊಂದಿಗೆ ಚರ್ಚಿಸಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗುವುದು ಎಂದು ಮಾಹಿತಿ ನೀಡಿದರು.ಇದೇ ಸಂದರ್ಭದಲ್ಲಿ ಫಲಾನುಭವಿಗಳಿಗೆ ಮೀನು ಹಿಡಿಯುವ ಉಚಿತ ಕಿಟ್ ವಿತರಿಸಲಾಯಿತು.

ಈ ಸಂದರ್ಭದಲ್ಲಿ ಮೀನುಗಾರಿಕೆ ಇಲಾಖೆ ಉಪನಿರ್ದೇಶಕ ಬಿ.ಮಲ್ಲೇಶ್, ಮೀನುಗಾರರ ಸಹಕಾರ ಸಂಘದ ಪದಾಧಿಕಾರಿಗಳಾದ ಮಾಧವರಾವ್, ಬಸವರಾಜ್, ಕೊಟ್ರಪ್ಪ ಇದ್ದರು.

# ಮುಟ್ಟಾದ ದಿನವನ್ನು ಸಂಭ್ರಮಿಸೋಣ, ಮುಟ್ಟಿನ ಬಗ್ಗೆ ಕೀಳರಿಮೆ ಬೇಡ :ಪ್ರಿಯದರ್ಶಿನಿ ಮುಂಡರಗಿಮಠ



• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ನಗರದ ಕುಷ್ಟಗಿ ರಸ್ತೆಯಲ್ಲಿರುವ ಸ್ಫೂರ್ತಿ ಬಾಲಕಿಯರ ವಸತಿ ನಿಲಯದಲ್ಲಿ ಮಹಿಳಾ ಧ್ವನಿ ಸಂಸ್ಥೆಯ ವತಿಯಿಂದ ಮುಟ್ಟು ನೈರ್ಮಲ್ಯದ ಜಾಗೃತಿ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಕಾರ್ಯಕ್ರಮವನ್ನು ಮುಟ್ಟು ನೈರ್ಮಲ್ಯದ ಸಂಕೇತವಾಗಿರುವ ರೆಡ್ ರಿಬನ್ ಕೈಗೆ ಕಟ್ಟುವ ಮೂಲಕ ಮಹಿಳಾ ಧ್ವನಿ ಸಂಸ್ಥೆಯ ಸಂಸ್ಥಾಪಕಿ ಪ್ರಿಯದರ್ಶಿನಿ ಮುಂಡರಗಿಮಠ ಉದ್ಘಾಟಿಸಿ ಮಾತನಾಡಿದರು.ಮುಟ್ಟು ನೈರ್ಮಲ್ಯ ಮಹಿಳೆಯರ ಆರೋಗ್ಯದ ಆಧಾರ,ಸ್ವಚ್ಛತೆ ಪಾಲಿಸುವುದು ಪ್ರತಿಯೊಬ್ಬರ ಜವಾಬ್ದಾರಿ.ಸರಿಯಾದ ನೈರ್ಮಲ್ಯದಿಂದ ಸೋಂಕುಗಳನ್ನು ತಡೆಯಬಹುದು,ಆರೋಗ್ಯಕರ ಜೀವನಕ್ಕೆ ಮುಟ್ಟು ನೈರ್ಮಲ್ಯವೇ ದಾರಿ.ಮುಟ್ಟಿನ ಬಗ್ಗೆ ಮಹಿಳೆಯರಲ್ಲಿರುವ ಕಿಳರಿಮೆ ಮೌಢ್ಯಾಚರಣೆ ಕುರಿತು ಜಾಗೃತಿ ಇರಲಿ ಮುಟ್ಟಿನ ದಿನವನ್ನು ಸಂಭ್ರಮಿಸಲು ಕರೆಕೊಟ್ಟರು.

ಇದೇ ವೇಳೆ ಶೋಭಾ ನಾಲ್ವಡ, ಸಂಗೀತಾ ದೊಡ್ಡಮನಿ ಹಾಗೂ ವಿದ್ಯಾರ್ಥಿಗಳು ಅನಿಸಿಕೆ ವ್ಯಕ್ತ ಪಡಿಸಿದರು.

# ಬಲ್ಡೋಟ ಸಮೂಹದಿಂದ ಶಂಕರ ಆನಂದ್ ಸಿಂಗ್ ಕಾಲೇಜು ಸಹಯೋಗದಲ್ಲಿ ಸ್ವಚ್ಛತಾ ಕಾರ್ಯಕ್ರಮ

• ಮಲ್ಲಮ್ಮ ನುಡಿ ವಾರ್ತೆ ವಿಜಯನಗರ(ಹೊಸಪೇಟೆ)

ಮೇ 28:ನಗರದ ಕಾಲೇಜು ರಸ್ತೆಯಲ್ಲಿ ಬಲ್ಡೋಟ ಸಮೂಹದ ಎಂಎಸ್‌ಪಿಎಲ್ ಹಾಗೂ ಎನ್‌ಎಸ್‌ಎಸ್ ಘಟಕ, ಶಂಕರ ಆನಂದ್ ಸಿಂಗ್ ಪ್ರಥಮ ದರ್ಜೆ ಕಾಲೇಜು ಇವರ ಸಹಯೋಗದಲ್ಲಿ ಸ್ವಚ್ಛತಾ ಅಭಿಯಾನ ಕಾರ್ಯಕ್ರಮವನ್ನು ಆಯೋಜಿಸಲಾಯಿತು.

ಕಾರ್ಯಕ್ರಮದಲ್ಲಿ ವೀರಭದ್ರಪ್ಪ ತಂಬ್ರಳ್ಳಿ, ಪ್ರಾಂಶುಪಾಲರು, ಮಲ್ಲಿಕಾರ್ಜುನ ಕಪ್ಪಿ, ಎನ್‌ಎಸ್‌ಎಸ್ ಸಂಯೋಜ–ಕರು ಘಟಕ 1, ವೀರೇಶ್ ಹಳೆಮನೆ, ಎನ್‌ಎಸ್‌ಎಸ್ ಸಂಯೋಜಕರು ಘಟಕ 2, ಎಂಎಸ್‌ಪಿಎಲ್ ಸಂಸ್ಥೆಯ ಅಶ್ವಿನ್ ಕುಮಾರ್,ಜನರಲ್ ಮ್ಯಾನೇಜರ್ ಸಿಎಸ್ ಆರ್, ರವಿ ಕೆ. ಬಿಸಗುಪ್ಪಿ, ಎಜಿಎಂ ಸಿಎಸ್ ಆರ್, ಬಿ.ಎಂ. ನಾಗರಾಜ್,ಕೃಷ್ಣರಾವ್ ಹಾಗೂ ಕಾಲೇಜಿನ ಸಿಬ್ಬಂದಿ ವರ್ಗ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಒಟ್ಟು 78 ವಿದ್ಯಾರ್ಥಿಗಳು ಪಾಲ್ಗೊಂಡು



ಕಾಲೇಜು ರಸ್ತೆ,ಬಸ್ ನಿಲ್ದಾಣ, ಪಾದಚಾರಿ ದಾರಿ ಹಾಗೂ ಸುತ್ತಮುತ್ತಲಿನ ಪ್ರದೇಶಗಳನ್ನು ಸ್ವಚ್ಛಗೊಳಿಸಿದರು. ಕಾರ್ಯಕ್ರಮದ ಮೂಲಕ ಸಾರ್ವಜನಿಕರಲ್ಲಿ ಸ್ವಚ್ಛತೆ ಕುರಿತು ಜಾಗೃತಿ ಮೂಡಿಸಲಾಯಿತು.

# ವಿಶ್ವಚೇತನ ಟ್ಯುಟೋರಿಯಲ್‌ನಲ್ಲಿ ವಿದ್ಯಾರ್ಥಿಗಳ ಬೀಳ್ಕೊಡುಗೆ, ಸನ್ಮಾನ



• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ನಗರದ ನಂದಿನಗರ ಸಿದ್ದೇಶ್ವರ ಸರ್ಕಲ್‌ನಲ್ಲಿರುವ ವಿಶ್ವಚೇತನ ಟ್ಯುಟೋರಿಯಲ್‌ನಲ್ಲಿ ಬೇಸಿಗೆ ಶಿಬಿರದ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭ, ವಿ.ಡಿ. ಸಾವರ್ಕರ್ ಜಯಂತಿ ಆಚರಣೆ, ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಬಹುಮಾನ ವಿತರಣೆ ಹಾಗೂ ಗಣ್ಯರ ಸನ್ಮಾನ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಆಯೋಜಿಸಲಾಯಿತು.

ಕಾರ್ಯಕ್ರಮವನ್ನು ಬಿ.ಎನ್. ಹೊರಪೇಟೆ ಹಾಗೂ ಮಹಿಳಾ ಧ್ವನಿ ಸಂಸ್ಥೆ ಕೊಪ್ಪಳದ ಸಂಸ್ಥಾಪಕರಾದ ಪ್ರಿಯದರ್ಶಿನಿ ಮುಂಡರಗಿಮಠ ಅವರು ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಮಕ್ಕಳ ಸರ್ವಾಂಗೀಣ ಬೆಳವಣಿಗೆಗೆ ಶಿಕ್ಷಣದ ಜೊತೆಗೆ ಸಾಂಸ್ಕೃತಿಕ ಮತ್ತು ವ್ಯಕ್ತಿತ್ವ ವಿಕಸನ ಚಟುವಟಿಕೆಗಳೂ ಅಗತ್ಯವಾಗಿದ್ದು, ಬೇಸಿಗೆ ಶಿಬಿರಗಳು ಮಕ್ಕಳ ಪ್ರತಿಭೆ ಅನಾವರಣಗೊಳಿಸಲು ಉತ್ತಮ ವೇದಿಕೆಯಾಗಿವೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಶರಣಪ್ಪ ಸಿಂಗನಾಳ ಅವರು ಮಕ್ಕಳಲ್ಲಿ ಉತ್ತಮ ಮೌಲ್ಯಗಳು, ಶಿಸ್ತು ಹಾಗೂ ಸಾಮಾಜಿಕ ಜವಾಬ್ದಾರಿಯನ್ನು ಬೆಳೆಸುವ ಅಗತ್ಯತೆಯನ್ನು ವಿವರಿಸಿದರು.

ಅಧ್ಯಕ್ಷತೆ ವಹಿಸಿದ್ದ ಚಿದಾನಂದಯ್ಯ ಬನ್ನಿಮಠ ಅವರು ಬೇಸಿಗೆ ಶಿಬಿರದ ಉದ್ದೇಶ ಮತ್ತು ಸಾಧನೆಗಳ ಕುರಿತು ಸವಿವರವಾಗಿ ಮಾಹಿತಿ ನೀಡಿದರು. ಪಠ್ಯ ಹಾಗೂ ಪಠ್ಯೇತರ ಚಟುವಟಿಕೆಗಳ ಮೂಲಕ ಮಕ್ಕಳಲ್ಲಿ ಶಿಸ್ತು,ಸಮಯಪಾಲನೆ,ನಯ–ವಿನಯ, ನಮ್ರತೆ ಮತ್ತು ಸೃಜನಶೀಲತೆಯನ್ನು ಬೆಳೆಸುವ ನಿಟ್ಟಿನಲ್ಲಿ ಶಿಬಿರ ಯಶಸ್ವಿಯಾಗಿ ಕಾರ್ಯನಿರ್ವಹಿಸಿದೆ ಎಂದು ತಿಳಿಸಿದರು.ಕಾರ್ಯಕ್ರಮದಲ್ಲಿ ಪ್ರಶಾಂತ ಡಂಗೂರಮಠ, ಶ್ವೇತಾ ನಾಲ್ವಡ್ ಮತ್ತಿರರು ಉಪಸ್ಥಿತಿ ಇದ್ದರು. ಸಹನಾ ಮತ್ತು ಜಯಶ್ರೀ ನಿರೂಪಿಸಿದರು ಪ್ರಿಯಾಂಕ ಸ್ವಾಗತಿಸಿದರು ಕೃತಿಕಾ ಹಾಗೂ ಹುಲಿಗೆಮ್ಮ ಅವರು ವಂದಿಸಿದರು.ಶಿಕ್ಷಕಿ ವಚನಶ್ರೀ ವಿದ್ಯಾರ್ಥಿಗಳಿಗೆ ಬಹುಮಾನ ವಿತರಣೆ ನೆರವೇರಿಸಿದರು. ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳು ಹಾಗೂ ಗಣ್ಯರನ್ನು ಚಿದಾನಂದಯ್ಯ ಬನ್ನಿಮಠ ಅವರು ಸನ್ಮಾನಿಸಿದರು.ಇದೆ ವೇಳೆ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು. ವಿದ್ಯಾರ್ಥಿಗಳು, ಪೋಷಕರು ಹಾಗೂ ಗಣ್ಯರ ಸಕ್ರಿಯ ಭಾಗವಹಿಸುವಿಕೆಯಿಂದ ಕಾರ್ಯಕ್ರಮ ಯಶಸ್ವಿಯಾಗಿ ನೆರವೇರಿತು.

# ಬೆಲೆ ಏರಿಕೆಯಿಂದ ಸಂತ್ರಸ್ಥ ರೈತರ ಆರ್ಥಿಕ ಹೊರೆ ಕಡಿಮೆ ಮಾಡಲು ಆಗ್ರಹಿಸಿ ಧರಣಿ


• ಮಲ್ಲಮ್ಮ ನುಡಿ ವಾರ್ತೆ ಹುಣಸೂರು



ರಸಗೊಬ್ಬರ ಮತ್ತು ಡೀಸೆಲ್,ಪೆಟ್ರೋಲ್ ಬೆಲೆ ಏರಿಕೆಯಿಂದ ರೈತರಿಗೆ ಉಂಟಾಗುತ್ತಿರುವ ಆರ್ಥಿಕ ಹೊರೆಯನ್ನು ಕಡಿಮೆ ಮಾಡಲು, ತಾಲೂಕು ಕಚೇರಿ ಮುಂಭಾಗ ಪ್ರತಿಭಟನಾ ಧರಣಿ ನಡೆಸಿ ಉಪವಿಭಾಗಾಧಿಕಾರಿಗಳ ಕಾವ್ಯ ರಾಣಿ ಮುಖಾಂತರ ಕೇಂದ್ರ ಹಾಗೂ ರಾಜ್ಯ ಸರ್ಕಾರಕ್ಕೆ ಕರ್ನಾಟಕರಾಜ್ಯ ರೈತ ಸಂಘದ ವತಿಯಿಂದ ಮನವಿ ಪತ್ರ ಸಲ್ಲಿಸಲಾಯಿತು ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ರೈತ ಸಂಘದ ಜಿಲ್ಲಾಧ್ಯಕ್ಷರಾದ ಹೊಸೂರು ಕುಮಾರ್ ರವರು ಮಾತನಾಡಿ ರಾಜ್ಯದಲ್ಲಿ ಮುಂಗಾರು/ಹಿಂಗಾರು ಹಂಗಾಮಿಗೆ ಸಿದ್ಧತೆ ನಡೆಸುತ್ತಿರುವ ರೈತರಿಗೆ ರಸಗೊಬ್ಬರ ಮತ್ತು ಡೀಸೆಲ್ ಬೆಲೆ ಏರಿಕೆಯು ತೀವ್ರ ಆಘಾತವನ್ನು ಉಂಟುಮಾಡಿದೆ. ಕಳೆದ ಕೆಲವು ತಿಂಗಳುಗಳಿಂದ ಡೀಸೆಲ್ ಬೆಲೆ ನಿರಂತರವಾಗಿ ಏರಿಕೆಯಾಗುತ್ತಿರುವುದರಿಂದ ಟ್ರ್ಯಾಕ್ಟರ್ ಉಳುಮೆ, ನೀರಾವರಿ ಪಂಪ್ಸೆಟ್ ಬಳಕೆ ಮತ್ತು ಬೆಳೆ ಸಾಗಾಣಿಕಾ ವೆಚ್ಚವು ದುಪ್ಪಟ್ಟಾಗಿದೆ. ಇದರ ಜೊತೆಗೆ ರಸಗೊಬ್ಬರಗಳ ಬೆಲೆಯೂ ಗಗನಕ್ಕೇರಿದ್ದು, ಸಣ್ಣ ಮತ್ತು ಮಧ್ಯಮ ವರ್ಗದ ರೈತರಿಗೆ ಬಿತ್ತನೆ ಮಾಡುವುದೇ ದುಸ್ತರವಾಗಿದೆ. ರೈತರು ಬೆಳೆದ ಬೆಳೆಗಳಿಗೆ ಸೂಕ್ತ ಮಾರುಕಟ್ಟೆ ಸಿಗದೆ ನಷ್ಟ ಅನುಭವಿಸುತ್ತಿರುವ ಈ ಸಂದರ್ಭದಲ್ಲಿ, ಕೃಷಿ ವೆಚ್ಚದ ಈ ಹೊರೆ ರೈತರ ಬೆನ್ನುಮೂಳೆ ಮುರಿದಂತಾಗಿದೆ. ಆದ್ದರಿಂದ, ರೈತರ ಹಿತದೃಷ್ಟಿಯಿಂದ ಈ ಕೆಳಗಿನ ಬೇಡಿಕೆಗಳನ್ನು ಈಡೇರಿಸಬೇಕಾಗಿ ವಿನಂತಿ.ತಾಲ್ಲೂಕುಗಳಿಂದ ಅತೀ ಹೆಚ್ಚು ಯೂರಿಯಾ ರವಾನೆಯಾಗುತ್ತಿದ್ದು, ಕೃಷಿಗೆ ಬಳಸಬೇಕಾದ ಯೂರಿಯಾವನ್ನು ಪ್ಲೈವುಡ್ ಕಾರ್ಖಾನೆಗಳಿಗೆ ಬಳಕೆ ಮಾಡುತ್ತಿರುವುದರಿಂದ ಪ್ರತಿವರ್ಷ ಯೂರಿಯಾ ಗೊಬ್ಬರ ಅಭಾವಕ್ಕೆ ಕಾರಣವಾಗಿದೆ. ಹೊರ ರಾಜ್ಯಗಳಿಗೆ ಯೂ–ರಿಯಾ ರವಾನೆಯಾಗುತ್ತಿರುವುದರ ಬಗ್ಗೆ ಹಲವಾರು ಪ್ರಕರಣಗಳು ದಾಖಲಾಗಿದ್ದರೂ ಯಾವುದೇ ಕ್ರಮ ಕೈಗೊಳ್ಳದೇ ಇರುವುದರಿಂದ ಈ ಒಂದು ಸಾಗಾಣಿಗೆ ನಿರಂತರವಾಗಿ ಸಾಗುತ್ತಿದೆ. ಇದರ ಬಗ್ಗೆ ಕಠಿಣ ಕ್ರಮ ಕೈಗೊಳ್ಳಬೇಕೆಂದು ಕೋರುತ್ತಾ,ಹುಣಸೂರು ಮತ್ತು ಹೆಚ್.ಡಿ ಕೋಟೆ ತಾಲ್ಲೂಕಿನ ಭೂ ಹಿಡುವಳಿದಾರರು ಸುಮಾರು 60–70 ವರ್ಷಗಳಿಂದ ಅನುಭವದಲ್ಲಿದ್ದು,ಸರ್ಕಾರದಿಂದ ಸಾಗುವಳಿ ಮಂಜೂರಾತಿ ಪಡೆದಿದ್ದು, ಇಂದಿನ ದಿನಗಳಲ್ಲಿ ದುರಸ್ತಿ ಕಾರ್ಯ ಸಂದರ್ಭದಲ್ಲಿ ಅರಣ್ಯ ಇಲಾಖೆಯವರು ಸದರಿ ಜಮೀನುಗಳು ಅರಣ್ಯ ಇಲಾಖೆಗೆ ಸೇರಿದೆ ಎಂದು ದುರಸ್ತಿ ಕಾರ್ಯ–ಕ್ಕೆ ಅಡ್ಡಿಪಡಿಸುತ್ತಿರುವುದರಿಂದ ದುರಸ್ತಿ ಕಾರ್ಯವು ಸ್ಥಗಿತಗೊಂಡಿರುತ್ತದೆ. ಆದ್ದರಿಂದ ಕಂದಾಯ ಇಲಾಖೆ ಹಾಗೂ ಅರಣ್ಯ ಇಲಾಖೆಯವರು ಜಂಟಿ ಸರ್ವೆ ನಡೆಸಿ ವರದಿ ತಯಾರಿಸಿ ಸಾಗುವಳಿದಾರರಿಗೆ ಅನುಭವದಂತೆ ದುರಸ್ತಿ ಕಾರ್ಯವನ್ನು ಕೂಡಲೇ ಪೂರ್ಣಗೊಳಿಸಲು ಮನವಿ ಮಾಡುತ್ತೇವೆ.ಈ ಮೇಲ್ಕಂಡ ಎಲ್ಲಾ ವಿಷಯಗಳನ್ನು ಗಂಭೀರವಾಗಿ ಪರಿಗಣಿಸಿ, ಕೂಡಲೇ ರೈತಪರ ಕ್ರಮಗಳನ್ನು ಕೈಗೊಳ್ಳಬೇಕಾಗಿ ಒತ್ತಾಯಿಸಲಾಯಿತು.ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷರದ ಹೊಸೂರು ಕುಮಾರ್, ತಾಲೂಕು ಅಧ್ಯಕ್ಷರಾದ ಬೆಂಕಿಪುರ ಚಿಕ್ಕಣ್ಣ, ತಾಲೂಕು ಪ್ರಧಾನ ಕಾರ್ಯದರ್ಶಿ ರಾಮೇಗೌಡ ಅಗ್ರಹಾರ, ತಂಬಾಕು ಬೆಳೆಗಾರರ ಕ್ಷೇಮಾಭಿವೃದ್ಧಿ ಸಂಘದ ಗೌರವ ಅಧ್ಯಕ್ಷರಾದ ಉಂಡವಾಡಿ ಚಂದ್ರೇಗೌಡ, ಅಧ್ಯಕ್ಷರಾದ ಮೋದೂರು ಶಿವಣ್ಣ, ಜಿಲ್ಲಾ ಖಜಾಂಚಿ ಈಶ್ವರ ತಾಲೂಕು ಸಂಚಾಲಕರಾದ ಅರಳಹಳ್ಳಿ ಬಸವರಾಜೇಗೌಡ, ಜಿಲ್ಲಾ ಉಪಾಧ್ಯಕ್ಷರದ ಅಲಿಜಾನ್, ಗೌರವಾಧ್ಯಕ್ಷರದ ಕಲ್ಲಹಳ್ಳಿ ವಿಷಕಂಠಪ್ಪ, ಕೆ. ಬಿ ಜಯಣ್ಣ ಧನಂಜಯ ಕಿರಿಜಾಜಿ, ಕಟ್ಟೆಮಳಲವಾಡಿ ಮಹದೇವು, ಬಸವರಾಜೇಗೌಡ ಮುಂತಾದ ನೂರಾರು ರೈತ ಸಂಘಟನೆಯ ಸದಸ್ಯರುಗಳು ಹಾಜರಿದ್ದು ಮನವಿ ಪತ್ರ ಸಲ್ಲಿಸಿದರು.

# ಸಚಿವ ಪ್ರಿಯಾಂಕ ಖರ್ಗೆಯವರನ್ನು ಉಪಮುಖ್ಯಮಂತ್ರಿಯಾಗಿ ಮಾಡಬೇಕೆಂದು ಬಸವರಾಜ ದೇಶಮುಖ ಒತ್ತಾಯ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ



ಕಲ್ಯಾಣ ಕರ್ನಾಟಕ ಹೋರಾಟ ಸಮಿತಿಯ ಗೌರವಾಧ್ಯಕ್ಷರು ಮತ್ತು ಪ್ರಸಿದ್ಧ ಶಿಕ್ಷಣ ತಜ್ಞರಾದ ಶ್ರೀ ಬಸವರಾಜ ದೇಶಮುಖ ಅವರು, ಕರ್ನಾಟಕ ಸಚಿವಾಲಯದ ಪುನರ್ ರಚನೆಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಐಟಿಬಿಟಿ ಸಚಿವರಾದ ಪ್ರಿಯಾಂಕ ಖರ್ಗೆ ಅವರನ್ನು ಕರ್ನಾಟಕದ ಉಪಮುಖ್ಯಮಂತ್ರಿಯಾಗಿ ನೇಮಿಸಬೇಕೆಂದು, ಲೋಕಸಭೆಯ ವಿರೋಧ ಪಕ್ಷದ ನಾಯಕ ಶ್ರೀ ರಾಹುಲ್ ಗಾಂಧಿ ಮತ್ತು ಎಐಸಿಸಿ ಅಧ್ಯಕ್ಷ ಶ್ರೀ ಮಲ್ಲಿಕಾರ್ಜುನ ಖರ್ಗೆ ಅವರನ್ನು ಈ ಮೂಲಕ ಅಗ್ರಹಿಸಿದ್ದಾರೆ. ಕಲಬುರಗಿ ನಗರದಲ್ಲಿ ಬಿಡುಗಡೆ ಮಾಡಿದ ಹೇಳಿಕೆಯಲ್ಲಿ, ಶತಮಾನೋತ್ಸವ ಆಚರಿಸಿದ ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಕಾರ್ಯದರ್ಶಿಯೂ ಆಗಿರುವ ಶ್ರೀ ದೇಶಮುಖ, ಶರಣಬಸವ ವಿಶ್ವವಿದ್ಯಾಲಯ ಸೇರಿದಂತೆ ಶಿಕ್ಷಣ ಸಂಸ್ಥೆಗಳ ಸರಪಳಿಯನ್ನು ನಡೆಸುತ್ತಿದ್ದಾರೆ. ಶ್ರೀ ಪ್ರಿಯಾಂಕ ಖರ್ಗೆ ಅವರ ನೇಮಕದಿಂದ ರಾಜ್ಯದ ಎಲ್ಲಾ ಅಂಶಗಳಲ್ಲಿಯೂ ಹಾಗೂ ಹಿಂದುಳಿದಿರುವ ಈ ಕಲ್ಯಾಣ ಕರ್ನಾಟಕ ಪ್ರದೇಶವು, ಅಭಿವೃದ್ಧಿ ಹೊಂದಿದ ಜಿಲ್ಲೆಗಳಿಗೆ ಸಮನಾಗಿ ಅಭಿವೃದ್ಧಿಹೊಂದಲು ಸಹಾಯ ಮಾಡುತ್ತದೆ ಎಂದಿದ್ದಾರೆ. ಶ್ರೀ ಸಿದ್ದರಾಮಯ್ಯ ಸರಕಾರದಲ್ಲಿ ಸಚಿವರಾಗಿ ಪ್ರಿಯಾಂಕ ಅವರು ತಮ್ಮ ಕರ್ತವ್ಯಗಳನ್ನು ಬಹುನಿಷ್ಠೆಯಿಂದ ನಿರ್ವಹಿಸಿದ್ದಾರೆ. ವಿಶೇಷವಾಗಿ 371 (ಜೆ) ವಿಧಿಯ ನಿಬಂಧನೆಗಳ ಅನುಷ್ಠಾನಕ್ಕಾಗಿ ಕ್ಯಾಬಿನೆಟ್ ಉಪಸಮಿತಿಯ ಅಧ್ಯಕ್ಷರಾಗಿ ಅವರು ತಮ್ಮ ಕರ್ತವ್ಯಗಳನ್ನು ನಿಭಾಯಿಸುವಲ್ಲಿ ಎಲ್ಲರ ಮೆಚ್ಚುಗೆಗೆ ಪಾತ್ರರಾಗಿದ್ದಾರೆ. ಸಚಿವರಾಗಿ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಪಟ್ಟಿಯಲ್ಲಿದ್ದ ಗೊಂದಲಗಳನ್ನು ಪ್ರಿಯಾಂಕ ಅವರು ಸರಿಪಡಿಸಿದ್ದಾರೆ. ಕೆಲವು ತಿಂಗಳ ಹಿಂದೆ ಕಲ್ಯಾಣ ಕರ್ನಾಟಕ ಪ್ರಾದೇಶಿಕ ಅಭಿವೃದ್ಧಿ ಮಂಡಳಿಗೆ ಹೆಚ್ಚುವರಿ ಹಣ ಹಂಚಿಕೆ ಮತ್ತು ರಾಜ್ಯದಲ್ಲಿ ಖಾಲಿ ಇರುವ ಸುಮಾರು 15,000 ಹುದ್ದೆಗಳನ್ನು ಭರ್ತಿ ಮಾಡಲು ಮುಖ್ಯಮಂತ್ರಿಯ ಸಿದ್ದರಾಮಯ್ಯ ಅವರನ್ನು ಮನವಲಿಸುವಲ್ಲಿ ಶ್ರೀ ಪ್ರಿಯಾಂಕ ಅವರು ಯಶಸ್ವಿಯಾಗಿದ್ದರು. 371 (ಜೆ) ವಿಧಿಯ ಅನುಷ್ಠಾನಕ್ಕಾಗಿ ಪ್ರತ್ಯೇಕ ಸಚಿವಾಲಯದ ಮಂಜೂರಾತಿಯಲ್ಲಿಯೂ ಕೂಡ ಅವರು ಪ್ರಮುಖ ಪಾತ್ರ ವಹಿಸಿದ್ದಾರೆ. ಶ್ರೀ ಖರ್ಗೆ ಅವರ ಮತ್ತೊಂದು ಗಮನಾರ್ಹ ಸಾಧನೆಯೆಂದರೆ ಈ ಪ್ರದೇಶದ ವಿದ್ಯಾರ್ಥಿಗಳ ಸ್ಪರ್ಧಾತ್ಮಕ ಪರೀಕ್ಷೆಗಳಿಗಾಗಿ ವಿಶೇಷವಾಗಿ ಯುಪಿಎಸ್‌ಸಿ ಮತ್ತು ಕೆಪಿಎಸ್‌ಸಿ ಪರೀಕ್ಷೆಗಳಿಗೆ ತರಬೇತಿ ನೀಡಲು ಪ್ರಭುದ್ಧ ಅಕಾಡೆಮಿ ಸ್ಥಾಪಿಸಿದ್ದು ಶ್ಲಾಘನೀಯ. ಜಿಲ್ಲಾ ಉಸ್ತುವಾರಿ ಸಚಿವರಾಗಿ ಕಲಬುರಗಿ ಜಿಲ್ಲೆಗೆ ಸಂಬಂಧಿಸಿದ ಎಲ್ಲಾ ಸಮಸ್ಯೆಗಳನ್ನು ಶ್ರೀ ಪ್ರಿಯಾಂಕ ಅವರು ನಿಷ್ಠೆಯಿಂದ ನಿಭಾಯಿಸಿದ್ದಾರೆ. ಉಪಮುಖ್ಯಮಂತ್ರಿಯಾಗಿ ಶ್ರೀ ಪ್ರಿಯಾಂಕ ಖರ್ಗೆ ಅವರ ನೇಮಕದಿಂದ ಈ ಕಲ್ಯಾಣ ಕರ್ನಾಟಕ ಪ್ರದೇಶದ ಅಭಿವೃದ್ಧಿಗೆ ವಿಶೇಷವಾಗಿ ಈ ಪ್ರದೇಶದ ಕೈಗಾರಿಕೀಕರಣದ ಬಹುದಿನಗಳ ಬೇಡಿಕೆಯನ್ನು ಪೂರೈಸಿದಂತಾಗುತ್ತದೆ ಮತ್ತು ಪ್ರದೇಶದ ವಿದ್ಯಾವಂತ ಯುವಕರಿಗೆ ಉದ್ಯೋಗವಕಾಶಗಳ ಮಾರ್ಗಗಳನ್ನು ತೆರೆದಂತಾಗುತ್ತದೆ ಎಂದು ಶ್ರೀ ದೇಶಮುಖ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 9 ಕಾರ್ಖಾನೆಗಳಿಗೆ ನೋಟಿಸ್ ಜಾರಿ
## 209ನೇ ದಿನದ ಧರಣಿಯಲ್ಲಿ ಸಿಹಿ ಹಂಚಿ ಸ್ವಾಗತ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ




ಜಿಲ್ಲಾ ಬಚಾವೋ ಆಂದೋಲನ ಸಮಿತಿ ಹಾಗೂ ಪರಿಸರ ಹಿತರಕ್ಷಣಾ ವೇದಿಕೆ ನೇತೃತ್ವದಲ್ಲಿ ನಡೆಯುತ್ತಿರುವ ಬಲ್ಡೋಟ ತೊಲಗಿಸಿ ಕೊಪ್ಪಳ–ಭಾಗ್ಯನಗರ ಉಳಿಸಿ ಧರಣಿ 209ನೇ ದಿನದಲ್ಲಿ ಯಶಸ್ವಿಯಾಯಿತು. ಮಾಲಿನ್ಯ ನಿಯಂತ್ರಣ ಮಂಡಳಿಯಿಂದ ಇಲ್ಲಿನ ಮಾಲಿನ್ಯಕಾರಿ 9 ಸ್ಪಾಂಜ್ ಐರನ್ ಕಾರ್ಖಾನೆಗಳಿಗೆ ಮುಚ್ಚುವ ಕಾರಣ ಕೇಳುವ ನೋಟಿಸ್ ಜಾರಿ ಮಾಡಿದ್ದನ್ನು ವೇದಿಕೆ ಸಿಹಿ ಹಂಚಿ ಸ್ವಾಗತಿಸಿತು. ಈಗಾಗಲೇ 5 ಕಾರ್ಖಾನೆಗಳಿಗೆ ಮುಚ್ಚುವ ಆದೇಶವಿದ್ದು, ಭಾಗಶಃ ಜಾರಿಯಾಗಿದೆ. ಹಿರೇಬಗನಾಳ, ಕಾಸನಕಂಡಿ ಗ್ರಾಮಗಳ ಜನರ ಆರೋಗ್ಯ ಕಸಿದುಕೊಂಡಿರುವ ಎಚ್.ಆರ್.ಜಿ ಅಲಾಯ್ಸ್, ವನ್ಯ ಸ್ಟೀಲ್ ಘಟಕ 1 ಮತ್ತು 2 ಇವುಗಳನ್ನು ತ್ವರಿತವಾಗಿ ಮುಚ್ಚಿ ಜನರ ಜೀವ ಉಳಿಸಬೇಕು. ನಗರದ ಅರ್ಧ ಭಾಗ ಮಾಲಿನ್ಯ ಮಾಡುತ್ತಿರುವ ಬಲ್ಡೋಟ ಎಂ.ಎಸ್.ಪಿ.ಎಲ್ ಪೆಲ್ಲೆಟ್ ಘಟಕ ಮುಚ್ಚಬೇಕು. ಈ ಘಟಕ ಮುಚ್ಚುವ ವಿಷಯದಲ್ಲಿ ಮೃದು ಧೋರಣೆ ತಳೆಯಬಾರದು ಎಂದು ವೇದಿಕೆಯಿಂದ ಸರ್ಕಾರಕ್ಕೆ ಆಗ್ರಹ ಮಾಡಲಾಯಿತು. ಈ ಘಟಕದ ಮಾಲಿನ್ಯ ತಡೆಯಬೇಕೆಂದು ಗವಿಶ್ರೀನಗರ, ಕವಲೂರು ಬಡಾವಣೆ, ಡಾಲರ್ಸ್ ಕಾಲೊನಿ ಮುಂತಾದ ವಾರ್ಡ್ ಜನರು ದೂರು ನೀಡುತ್ತಾ ಬಂದಿದ್ದಾರೆ. ಇದನ್ನು ಜಿಲ್ಲಾಡಳಿತ ಮತ್ತು ಜನಪ್ರತಿನಿದಿನಗಳು ಗಂಭೀರವಾಗಿ ತೆಗೆದುಕೊಂಡು ಈ ಘಟಕ ಬಂದ್ ಮಾಡಿ ನಗರ ಉಳಿಸಬೇಕು ಎನ್ನುವುದು ವೇದಿಕೆಯ ಹೋರಾಟದ ಬೇಡಿಕೆಯಾಗಿದೆ. ಇನ್ನುಳಿದ ಕ್ರಿಮಿನಾಶಕ, ಆಸಿಡ್, ಗೊಬ್ಬರ, ಪೆಲ್ಲೆಟ್ ಘಟಕಗಳನ್ನು ಗ್ರಾಮಗಳ ಅಂತರ್ಜಲ, ಜನರ ಆರೋಗ್ಯ ರಕ್ಷಣೆ ಉದ್ದೇಶದಿಂದ ಮುಚ್ಚಬೇಕು ಎನ್ನುವ ಬಲವಾದ ಆಗ್ರಹವನ್ನು ವೇದಿಕೆ ಮಾಡಿದೆ.

ಧರಣಿಯಲ್ಲಿ ಪ್ರಧಾನ ಸಂಚಾಲಕರಾದ ಅಲ್ಲಮಪ್ರಭು ಬೆಟ್ಟದೂರು, ಸಂಚಾಲಕ ಮಲ್ಲಿಕಾರ್ಜುನ ಗೋನಾಳ, ಸಂಚಾಲಕ ಮಂಜುನಾಥ ಜಿ. ಗೊಂಡಬಾಳ, ನಿವೃತ್ತ ಉಪನ್ಯಾಸಕರಾದ ಡಾ. ಬಸವರಾಜ ಪೂಜಾರ, ಶಂಭುಲಿಂಗಪ್ಪ ಹರಗೇರಿ, ಶಿವಾನಂದಯ್ಯ ಬೀಳಗಿಮಠ, ಸರೋಜಾ ಬಾಕಳೆ, ರವಿ ಕಾಂತನವರ, ಮೂಕಪ್ಪ ಮೇಸ್ತ್ರಿ ಬಸಾಪುರ, ರಾಜಶೇಖರ ಏಳುಬಾವಿ, ಚಾರಣ ಬಳಗದ ಸಿ.ಬಿ.ಪಾಟೀಲ್, ಶರಣು ಗಡ್ಡಿ, ಶರಣು ಪಾಟೀಲ್, ಸುಭಾನ ಸಾಬ್ ನೀರಲಗಿ, ಶಾರದಾ ಗಡ್ಡಿ, ಸಿಂಧು, ಎಸ್. ಮಹಾದೇವಪ್ಪ ಮಾವಿನಮಡು, ಶಿವಪ್ಪ ಜಲ್ಲಿ, ಮಂಗಳೇಶ ರಾಠೋಡ್, ನಿಂಗಪ್ಪ ಜಿ. ಎಸ್. ಬೆಣಕಲ್ ಇದ್ದರು.

# ಭಟ್ಕಳ ತಾಲ್ಲೂಕಿನಲ್ಲಿ ಮದ್ಯ ನಿಷೇಧ

• ಮಲ್ಲಮ್ಮ ನುಡಿ ವಾರ್ತೆ ಕಾರವಾರ

ಮೇ.28: ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವ ಉದ್ದೇಶದಿಂದ, ಮೇ 28 ರಂದು ಮಧ್ಯರಾತ್ರಿ 12 ಗಂಟೆಯಿಂದ ಮೇ 30 ರ ಬೆಳಗ್ಗೆ 6 ಗಂಟೆಯವರೆಗೆ ಭಟ್ಕಳ ತಾಲ್ಲೂಕಿನಾದ್ಯಂತ ಎಲ್ಲಾ ರೀತಿಯ ಮದ್ಯದ ಅಂಗಡಿಗಳನ್ನು ಬಂದ್ ಮಾಡಿ, ಮದ್ಯ ಮಾರಾಟ ಮತ್ತು ಸಾಗಾಟ ನಿಷೇಧಿಸಿ, ಜಿಲ್ಲಾಧಿಕಾರಿ ಕೆ.ಲಕ್ಷ್ಮೀ ಪ್ರಿಯಾ ಆದೇಶಿಸಿದ್ದಾರೆ.

# ತ್ಯಾಗ ಬಲಿದಾನದ ಪ್ರತಿಕ ಬಕ್ರೀದ್ ಹಬ್ಬ ಆಚರಣೆ

• ಮಲ್ಲಮ್ಮ ನುಡಿ ವಾರ್ತೆಯಲಬುರ್ಗಾ



ಯಲಬುರ್ಗಾ : ತ್ಯಾಗ ಬಲಿದಾನದ ಪ್ರತಿಕವಾದ ಬಕ್ರೀದ್ ಹಬ್ಬವನ್ನು ಮುಸ್ಲಿಂ ಬಾಂದವರು ಗುರುವಾರ ಶ್ರದ್ಧಾಭಕ್ತಿ ಭಾವದಿಂದ ಸಾಮೂಹಿಕ ಪ್ರಾಥನೆ ಸಲ್ಲಿಸಿದರು. ಬಳಿಕ ಅವರ ಕುಟುಂಬದ ಮೃತರ ಸಮಾಧಿಗಳ ಬಳಿ ಹೋಗಿ ಪೂಜೆಸಲ್ಲಿಸಿ ಅವರ ಆತ್ಮಕ್ಕೆ ಶಾಂತಿ ಕೋರಿದರು.ನಂತರ ಬಡವರಿಗೆ ತಮ್ಮ ಶಕ್ತಿಗೆ ಅನುಸಾರವಾಗಿ ಬಟ್ಟೆ, ಹಣ, ಹಣ್ಣು, ದಾನಮಾಡಿ ಹಂಚಿ ಉಣ್ಣುವ ಪ್ರವೃತ್ತಿ ಇವರದಾಗಿತ್ತು, ತಮ್ಮ ಮನೆಗೆ ಆತ್ಮೀಯರನ್ನು ಪ್ರೀತಿಯಿಂದ ಕರೆತಂದು ಉಣಬಡಿಸಿ ಬಕ್ರೀದ್ ಹಬ್ಬವನ್ನು ಶಾಂತಿಯಿಂದ ಆಚರಿಸಿದರು.

# 406 ಕ್ವಿಂಟಾಲ್ ಅಕ್ರಮ ಪಡಿತರ ಅಕ್ಕಿ ಜಪ್ತಿ, 3 ಪ್ರಕರಣ ದಾಖಲು

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಮೇ 28:ಜಿಲ್ಲೆಯಲ್ಲಿ ಅಕ್ರಮವಾಗಿ ಪಡಿತರ ಅಕ್ಕಿಯನ್ನು ಸಂಗ್ರಹಿಸಿ, ಸಾಗಾಣಿಕೆ ಮಾಡುತ್ತಿದ್ದ ಜಾಲದ ವಿರುದ್ಧ ತೀವ್ರ ನಿಗಾ ವಹಿಸಿದ್ದು, ಜಿಲ್ಲೆಯ ವಿವಿಧೆಡೆ ದಾಳಿ ನಡೆಸಿ ಲಕ್ಷಾಂತರ ರೂಪಾಯಿ ಮೌಲ್ಯದ ಅಕ್ಕಿ ಹಾಗೂ ವಾಹನಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪ ನಿರ್ದೇಶಕ ಕೆ.ಆರ್ ದೇವರಾಜ್ ಅವರು ತಿಳಿಸಿದ್ದಾರೆ.ಮೇ 27 ರಂದು ಜಿಲ್ಲೆಯ ಮೂರು ಪ್ರತ್ಯೇಕ ಕಡೆಗಳಲ್ಲಿ ಅಗತ್ಯ ವಸ್ತುಗಳ ಕಾಯ್ದೆಯಡಿ (ಇ.ಸಿ ಕಾಯ್ದೆ) ಪ್ರಕರಣಗಳನ್ನು ದಾಖಲಿಸಲಾಗಿದೆ.ಕುರುಗೋಡು ತಾಲೂಕಿನ ಬಾದನಹಟ್ಟಿ ಗ್ರಾಮದ ನಂದಿ ಲೇಔಟ್‌ನಲ್ಲಿ ಕಾರ್ಡುದಾರರಿಂದ ಅಕ್ರಮವಾಗಿ ಪಡಿತರ ಅಕ್ಕಿ ಸಂಗ್ರಹಿಸಿ ಲಾರಿಗೆ ತುಂಬಿಸುತ್ತಿದ್ದ ವೇಳೆ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಈ ವೇಳೆ ಕೆ.ಎ–36/ಸಿ–5899 ಸಂಖ್ಯೆಯ ಲಾರಿ ಹಾಗೂ ಅದರಲ್ಲಿದ್ದ 226 ಕ್ವಿಂಟಾಲ್ ಅಕ್ಕಿಯನ್ನು ಜಪ್ತಿ ಮಾಡಲಾಗಿದೆ. ಈ ಸಂಬಂಧ ಕುರುಗೋಡು ನಿವಾಸಿಗಳಾದ ಯರಿಸ್ವಾಮಿ, ಉಮಾಶಂಕರ್, ಮಾನ್ವಿ ತಾಲೂಕಿನ ವೀರಭದ್ರಪ್ಪ, ಚಾಲಕ ವಿನೋದ್ ಹಾಗೂ ಲಾರಿ ಮಾಲೀಕ ಪಂಪನಗೌಡ ಎಂಬುವವರ ವಿರುದ್ಧ ಕುರುಗೋಡು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ.ಸಿರುಗುಪ್ಪ ತಾಲ್ಲೂಕಿನ ಬಂಡ್ರಾಳ್ ಗ್ರಾಮದಲ್ಲಿ ಮಾರುತಿ ಓಮಿನಿ ವಾಹನ (ಸಂಖ್ಯೆ: ಕೆ.ಎ–34/ಎನ್–7709) ಮೂಲಕ ಅಕ್ರಮವಾಗಿ ಪಡಿತರ ಅಕ್ಕಿ ಸಾಗಿಸುತ್ತಿದ್ದ ಜಾಲವನ್ನು ಪತ್ತೆಹಚ್ಚಲಾಗಿದ್ದು, ವಾಹನ ಸೇರಿದಂತೆ 150 ಕ್ವಿಂಟಾಲ್ ಅಕ್ಕಿಯನ್ನು ಸಿರುಗುಪ್ಪ ಪೊಲೀಸರು ವಶಪಡಿಸಿಕೊಂಡಿದ್ದಾರೆ.

ಬಳ್ಳಾರಿ ತಾಲ್ಲೂಕಿನ ಚೆಳಗುರ್ಕಿ ಗ್ರಾಮದಲ್ಲಿ ಕಾರ್ಡುದಾರರಿಂದ ಅಕ್ರಮವಾಗಿ ಸಂಗ್ರಹಿಸಿ ಸಾಗಿಸುತ್ತಿದ್ದ 30 ಕ್ವಿಂಟಾಲ್ ಅಕ್ಕಿ ಮತ್ತು ಸಾಗಾಣಿಕೆಗೆ ಬಳಸಿದ್ದ ವಾಹನವನ್ನು ಅಧಿಕಾರಿಗಳು ವಶಕ್ಕೆ ಪಡೆದಿದ್ದು, ಪಿ.ಡಿ.ಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.ಈ ಮೂರೂ ಕಾರ್ಯಾಚರಣೆಗಳಲ್ಲಿ ಒಟ್ಟು 406 ಕ್ವಿಂಟಾಲ್ ಪಡಿತರ ಅಕ್ಕಿ ಹಾಗೂ ಸಾಗಾಣಿಕೆಗೆ ಬಳಸಲಾಗಿದ್ದ 3 ವಾಹನಗಳನ್ನು ಜಪ್ತಿ ಮಾಡಲಾಗಿದ್ದು, ಇವುಗಳ ಅಂದಾಜು ಒಟ್ಟು ಮೌಲ್ಯ ರೂ.14,33,800 ಆಗಿದೆ. ಸಾರ್ವಜನಿಕರ ಹಿತದೃಷ್ಟಿಯಿಂದ ಅಕ್ರಮ ದಂಧೆಕೋರರ ವಿರುದ್ಧ ಇಲಾಖೆಯು ಕಠಿಣ ಕ್ರಮ ಮುಂದುವರಿಸಲಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶರಣಬಸವೇಶ್ವರರ ದೇಗುಲದಲ್ಲಿ 101 ಈಡುಗಾಯಿ ಒಡೆದು ಪ್ರಾರ್ಥನೆ ಸಚಿವ ಖರ್ಗೆ ಡಿಸಿಎಂ ಪಟ್ಟಕ್ಕಾಗಿ ವಿಶೇಷ ಪೂಜೆ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಕಾಂಗ್ರೆಸ್ ನೇತೃತ್ವದ ರಾಜ್ಯ ಸರ್ಕಾರದಲ್ಲಿ ಭಾರಿ ಬದಲಾವಣೆ ಹಾಗೂ ಮುಖ್ಯಮಂತ್ರಿ ಸಿದ್ದರಾಮಯ್ಯನವರ ರಾಜೀನಾಮೆ ನೀಡುವ ಇಂಗಿತ ವ್ಯಕ್ತಪಡಿಸಿದ ಬೆನ್ನಲೆಯಲ್ಲಿ ಸಚಿವ ಪ್ರಿಯಾಂಕ ಖರ್ಗೆ ಅವರನ್ನು ಉಪಮುಖ್ಯಮಂತ್ರಿ ಹುದ್ದೆ ನೀಡುವಂತೆ ಕೋರಿ ಪ್ರಿಯಾಂಕ ಖರ್ಗೆ ಅಭಿಮಾನಿಗಳ ಬಳಗ ಹಾಗೂ ನಿಜಶರಣ ಅಂಬಿಗರ ಚೌಡಯ್ಯ ಜಯಂತ್ಯುತ್ಸವ ಸಮಿತಿ ಜಿಲ್ಲಾಧ್ಯಕ್ಷ ಶಿವಾನಂದ ಹೊನಗುಂಟಿ ಅವರ ನೇತೃತ್ವದಲ್ಲಿ ಗುರುವಾರ ಬೆಳಗ್ಗೆ ಶ್ರೀ ಶರಣಬಸವೇಶ್ವರರ ದೇವಸ್ಥಾನದಲ್ಲಿ 101 (ತೆಂಗಿನ ಕಾಯಿ) ಈಡುಗಾಯಿ ಒಡೆದು ವಿಶೇಷ ಪೂಜೆ ಮತ್ತು ವಿಶೇಷ ಪ್ರಾರ್ಥನೆ ಸಲ್ಲಿಸಿದರು.

ಈ ವೇಳೆ ಕಾಂಗ್ರೆಸ್ ಯುವ ಮುಖಂಡ ಶಿವಾನಂದ ಹೊನಗುಂಟಿ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿ, 2023ರ ವಿಧಾನಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಆಡಳಿತದ ಚುಕ್ಕಾಣಿ ಹಿಡಿಯುವಲ್ಲಿ ಪ್ರಿಯಾಂಕ ಖರ್ಗೆ ಅವರ ಪಾತ್ರವೂ ಹಿರಿದಾಗಿದೆ. ಹಿಂದಿನ ಬಿಜೆಪಿ ಸರ್ಕಾರದಲ್ಲಿನ ಪಿಎಸ್ ಐ ಅಕ್ರಮ ನೇಮಕಾತಿ ಹಗರಣ, ಕೆಕೆಆರ್‌ಡಿಬಿ ಹಗರಣ ಮತ್ತು ಕಲ್ಯಾಣ ಕರ್ನಾಟಕ ಕೃಷಿ, ಸಾಂಸ್ಕೃತಿಕ ಮತ್ತು ಮಾನವ ಸಂಪನ್ಮೂಲ ಸಂಘದಲ್ಲಿನ ಹಗರಣ ಹೀಗೆ ಅನೇಕ ಹಗರಣಗಳನ್ನು ಬಯಲಿಗೆಳೆಯುವಲ್ಲಿ ಮುಂಚೂಣಿ ಪಾತ್ರವಹಿಸಿದ್ದಾರೆ. ಬಿಜೆಪಿ ಸರ್ಕಾರದ ಸಾಲು ಸಾಲು ಅಕ್ರಮ ದಂಧೆಗಳನ್ನು ಬಹಿರಂಗಪಡಿಸಿ



ದುರಾಡಳಿತ ವಿರುದ್ಧ ಹೋರಾಟ ಮಾಡಿದವರು ಎಂದು ಸ್ಮರಿಸಿದರು.

2013ರ ಕಾಂಗ್ರೆಸ್ ಸರ್ಕಾರದಲ್ಲಿ ಐಟಿ ಬಿಟಿ ಸಚಿವರಾಗಿ ಭಾರಿ ಬದಲಾವಣೆ ತಂದಿರುವ ಹಿನ್ನೆಲೆಯಲ್ಲಿ ಎರಡನೇ ಬಾರಿಗೆ ಸಿದ್ದರಾಮಯ್ಯನವರ ಸರ್ಕಾರಲದಲ್ಲೂ ಅದೇ ಖಾತೆ ನೀಡುವಂತೆ ಐಟಿ ಬಿಟಿ ದಿಗ್ಗಜರು ಸಿಎಂ ಮೇಲೆ ಒತ್ತಡ ಹಾಕಿ ಅದೇ ಖಾತೆ ದೊರೆಕಿಸಿ ಕೊಟ್ಟಿದ್ದ ಕ್ಕೆ ಈಗ ಅವರ ಆಡಳಿತಕ್ಕೆ ಹಿಡಿದ ಕೈಗನ್ನಡಿ. ಈ ನಿಟ್ಟಿನಲ್ಲಿ ಐಟಿ ಬಿಟಿ ಸೇರಿ ತಮಗೆ ನೀಡಿದ ಎಲ್ಲ ಖಾತೆಗಳನ್ನು ಸಮರ್ಥವಾಗಿ ನಿಭಾಯಿಸಿದ್ದಾರೆ ಎಂದರು. ರಾಜ್ಯದ ಅಭಿವೃದ್ಧಿ ದೃಷ್ಟಿಯಿಂದ ಹಾಗೂ ಕಲ್ಯಾಣ ಕರ್ನಾಟಕ ಜನರ ಆಶೋತ್ತರಗಳಿಗೆ ಸ್ಪಂದಿಸುವ ದೂರದೃಷ್ಟಿ ರಾಜಕಾರಣಿ ಹಾಗೂ ಅಭಿವೃದ್ಧಿ ಹರಿಕಾರ ಸಚಿವ ಖರ್ಗೆ ಅವರನ್ನು ಡಿಸಿಎಂ ಪಟ್ಟ ನೀಡಬೇಕು ಎಂದು ಆಗ್ರಹಿಸಿದರು. ಇನ್ನೂ ಸ್ವಕ್ಷೇತ್ರ ಚಿತ್ತಾಪುರದಲ್ಲಿ ಮೂಲಸೌಕರ್ಯ ಒದಗಿಸಿ ಮಾದರಿ ಕ್ಷೇತ್ರವನ್ನಾಗಿ ಪಣತೊಟ್ಟಿದ್ದು, ಕಲಬುರಗಿ ಜಿಲ್ಲೆ ಸೇರಿ ಕಲ್ಯಾಣ ಕರ್ನಾಟಕ ಭಾಗದಲ್ಲಿ ಕೋಲಿ ಸಮಾಜದ ಜನಸಂಖ್ಯೆ ಹೆಚ್ಚಿದೆ. ಕೋಲಿ ಸಮಾಜದ ನಿರ್ಣಾಯಕ ಮತದಾರರಾಗಿದ್ದು, ಇವರ ಸಮಸ್ಯೆ ಗಳಿಗೆ ಸ್ಪಂದಿಸಿ ಅವರ ಬೇಕು ಬೇಡಿಕೆಗಳಿಗೆ ಸ್ಪಂದಿಸುತ್ತಿದ್ದರಿಂದ ಸಚಿವ ಖರ್ಗೆ ಅವರನ್ನು ಡಿಸಿಎಂ ಹುದ್ದೆ ನೀಡಬೇಕು ಎಂಬ ಕೋಲಿ ಸಮಾಜದ ಒತ್ತಾಯವೂ ಆಗಿದೆ ಎಂದರು.

ಕೋಲಿ ಸಮಾಜದ ಮುಖಂಡರಾದ ರಾಯಪ್ಪ ಹೊನಗುಂಟಿ, ಬಸವರಾಜ ಸೋಮಪುರ, ಶರಣಪ್ಪ ಹೊಸೂರ ಮಾತನಾಡಿ, ಕಲ್ಯಾಣ ಕರ್ನಾಟಕ ಭಾಗದಲ್ಲಿ ಕೋಲಿ ಸಮಾಜದ ಜನಸಂಖ್ಯೆ ಅತ್ಯಧಿಕವಾಗಿದ್ದು, ಕೋಲಿ ಸಮಾಜದ ಮೇಲೆ ವಿಶೇಷ ಕಾಳಜಿ ಇಟ್ಟಿರುವ ಸಚಿವ ಖರ್ಗೆ ಅವರನ್ನು ಡಿಸಿಎಂ ಸ್ಥಾನಕ್ಕೆ ಪರಿಗಣಿಸಬೇಕು. ಮುಂದಿನ ದಿನಗಳಲ್ಲಿ ಕೋಲಿ, ಕಬ್ಬಲಿಗ, ಬೆಸ್ತ, ಮೊಗವೀರ ಮತ್ತು ಅಂಬಿಗ ಪರ್ಯಾಯ ಪದಗಳನ್ನು ಎಸ್ ಟಿಗೆ ಸೇರಿಸುವುದಕ್ಕೆ ಸುಲಭ ಮಾರ್ಗವಾಗಲಿದೆ. ಹೀಗಾಗಿ ಸಚಿವ ಖರ್ಗೆ ಅವರನ್ನು ಡಿಸಿಎಂ ಮಾಡಲು ಕಾಂಗ್ರೆಸ್ ಹೈಕಮಾಂಡ್ ಇದನ್ನು ಗಂಭೀರ ವಾಗಿ ಪರಿಗಣಿಸಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಯುವ ಮುಖಂಡರಾದ ಅಶ್ವಿನ ಸಂಕಾ, ಪರಶುರಾಮ ನಾಡೇಕಾರ್, ಖರ್ಗೆ ಅಭಿಮಾನಿಗಳು, ಕಾಂಗ್ರೆಸ್ ಕಾರ್ಯಕರ್ತರು, ಹಿತೈಷಿಗಳು ಭಾಗವಹಿಸಿದ್ದರು.

# ಪಿಣರಾಯಿ ವಿಜಯನ್ ನಿವಾಸದ ಮೇಲಿನ ಇಡಿ ದಾಳಿ ಖಂಡಿಸಿ ಸಿಪಿಐಎಂ ಪ್ರತಿಭಟನೆ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಕೇರಳದ ಮಾಜಿ ಮುಖ್ಯಮಂತ್ರಿ ಹಾಗೂ ಸಿಪಿಐ(ಎಂ) ಪೊಲಿಟ್ ಬ್ಯೂರೋ ಸದಸ್ಯರಾದ ಪಿಣರಾಯಿ ವಿಜಯನ್ ಅವರ ನಿವಾಸದ ಮೇಲಿನ ಜಾರಿ ನಿರ್ದೇಶನಾಲಯ (ಇಡಿ) ದಾಳಿಯನ್ನು ಖಂಡಿಸಿ ಭಾರತ ಕಮ್ಯುನಿಸ್ಟ್ ಪಕ್ಷ (ಮಾರ್ಕ್ಸ್‌ವಾದಿ) ಜಿಲ್ಲಾ ಸಮಿತಿಯ ನೇತೃತ್ವದಲ್ಲಿ ನಗರದ ಎಸ್‌ವಿಪಿ ವೃತ್ತದಲ್ಲಿ ಪ್ರತಿಭಟನೆ ನಡೆಸಲಾಯಿತು.ಇಡಿ ದಾಳಿಯು ರಾಜಕೀಯ ಪ್ರತೀಕಾರದ ಕ್ರಮವಾಗಿದ್ದು, ಕೇಂದ್ರ ಸರ್ಕಾರವು ವಿರೋಧ ಪಕ್ಷಗಳ ನಾಯಕರನ್ನು ಗುರಿಯಾಗಿಸಿಕೊಂಡು ಕೇಂದ್ರ ತನಿಖಾ ಸಂಸ್ಥೆಗಳನ್ನು ದುರುಪಯೋಗಪಡಿಸಿಕೊಳ್ಳುತ್ತಿದೆ ಎಂದು ಪ್ರತಿಭಟನಾಕಾರರು ಆರೋಪಿಸಿದರು.ಪ್ರತಿಭಟನೆ ವೇಳೆ ದೆಹಲಿಯಲ್ಲಿ ಹಿರಿಯ ನಾಯಕಿ ಬೃಂದಾ ಕಾರಟ್, ಪೊಲಿಟ್ ಬ್ಯೂರೋ ಸದಸ್ಯರಾದ




ಅಶೋಕ್ ಧವಳೆ, ಮರಿಯಮ್ ಧವಳೆ ಸೇರಿದಂತೆ ಹಲವರನ್ನು ಪೊಲೀಸರು ಬಂಧಿಸಿರುವುದನ್ನು ಪಕ್ಷ ತೀವ್ರವಾಗಿ ಖಂಡಿಸಿದೆ.ಪಿಣರಾಯಿ ವಿಜಯನ್ ಅವರಿಗೆ ಎಕ್ಸಲಾಜಿಕ್ ಪ್ರಕರಣದೊಂದಿಗೆ ಯಾವುದೇ ಸಂಬಂಧ ಇಲ್ಲವೆಂದು ನ್ಯಾಯಾಲಯಗಳು ಹೇಳಿದ್ದರೂ ರಾಜಕೀಯ ದ್ವೇಷದಿಂದ ಅವರನ್ನು ಗುರಿಯಾಗಿಸಲಾಗುತ್ತಿದೆ ಎಂದು ಮುಖಂಡರು ದೂರಿದರು.ಪ್ರಜಾಪ್ರಭುತ್ವ ಹಕ್ಕುಗಳ ಮೇಲಿನ ದಾಳಿ ಹಾಗೂ ವಿರೋಧ ಪಕ್ಷಗಳ ನಾಯಕರ ವಿರುದ್ಧ ನಡೆಯುತ್ತಿರುವ ರಾಜಕೀಯ ಪ್ರೇರಿತ ಕ್ರಮಗಳ ವಿರುದ್ಧ ದೇಶಾದ್ಯಂತ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲಾಗುವುದು ಎಂದು ಪಕ್ಷದ ನಾಯಕರು ಎಚ್ಚರಿಸಿದರು.ಪ್ರತಿಭಟನೆಯಲ್ಲಿ ಕೆ. ನೀಲಾ, ಭೀಮಶೆಟ್ಟಿ ಯಂಪಳ್ಳಿ, ಸುಧಾಮ ಧನ್ನಿ, ಶ್ರೀಮಂತ ಬಿರಾದಾರ ಶಾಂತಾ ಘಂಟೆ, ಚಂದಮ್ಮ ಗೋಳಾ, ಪದ್ಮನಿ ಕಿರಣಗಿ, ನಾಗಪ್ಪ ರಾಯಚೂರಕರ್, ಪ್ರಕಾಶ ಕುಸಾಳೆ ಸೇರಿದಂತೆ ಹಲವು ಮುಖಂಡರು ಹಾಗೂ ಕಾರ್ಯಕರ್ತರು ಭಾಗವಹಿಸಿದ್ದರು.

# ಪ್ರಿಯಾಂಕ್ ಖರ್ಗೆಯವರಿಗೆ ಡಿಸಿಎಂ ಸ್ಥಾನ ನೀಡಲು ಮನವಿ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ರಾಜ್ಯದ ಪ್ರಭುದ್ಧ ರಾಜಕಾರಣಿ, ದಲಿತ ಸಮುದಾಯದ ಯುವ ನಾಯಕ ಹಾಗೂ ಜನಪರ ಚಿಂತಕರಾದ ಪ್ರಿಯಾಂಕ್ ಖರ್ಗೆ ಅವರನ್ನು ಕರ್ನಾಟಕ ರಾಜ್ಯದ ಉಪ ಮುಖ್ಯಮಂತ್ರಿಯಾಗಿ ನೇಮಕ ಮಾಡಬೇಕೆಂದು ಸಂವಿಧಾನ ರಕ್ಷಣಾ ಹೋರಾಟ ಸಮಿತಿ ಆಗ್ರಹಿಸಿದೆ.

ಈ ಕುರಿತು ಕಲಬುರಗಿ ಜಿಲ್ಲಾ ಕಾಂಗ್ರೆಸ್ ಸಮಿತಿಯ ಜಿಲ್ಲಾಧ್ಯಕ್ಷರಿಗೆ ಮನವಿ ಸಲ್ಲಿಸಿರುವ ಸಮಿತಿಯವರು, ಮೂರು ಬಾರಿ ಸಚಿವರಾಗಿ ಸೇವೆ ಸಲ್ಲಿಸಿರುವ ಪ್ರಿಯಾಂಕ್ ಖರ್ಗೆ ಅವರು ಸಾಮಾಜಿಕ ನ್ಯಾಯ, ಸಂವಿಧಾನದ ಮೌಲ್ಯಗಳು ಹಾಗೂ ಜನಪರ ಆಡಳಿತಕ್ಕಾಗಿ ನಿರಂತರವಾಗಿ ಹೋರಾಟ ನಡೆಸಿರುವ ನಾಯಕರು ಎಂದು ತಿಳಿಸಿದ್ದಾರೆ.

ಸಮಾನತೆಯ ಹರಿಕಾರ ಬಸವಣ್ಣ ಅವರನ್ನು ಕರ್ನಾಟಕ ಸರ್ಕಾರ "ಸಾಂಸ್ಕೃತಿಕ ನಾಯಕ" ಎಂದು ಘೋಷಿಸುವಲ್ಲಿ ಪ್ರಿಯಾಂಕ್ ಖರ್ಗೆ ಅವರ ಪಾತ್ರ ಮಹತ್ವದ್ದಾಗಿದೆ. ಜೊತೆಗೆ ಡಾ. ಬಿ. ಆರ್. ಅಂಬೇಡ್ಕರ್ ಸ್ಕೂಲ್ ಆಫ್ ಎಕನಾಮಿಕ್ಸ್ ಸ್ಥಾಪನೆಯ ಮೂಲಕ ಶಿಕ್ಷಣ ಕ್ಷೇತ್ರದಲ್ಲಿ ಸಾಮಾಜಿಕ ಬದಲಾವಣೆಗೆ ಬುನಾದಿ ಹಾಕಿದ್ದಾರೆ ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ.

ಬಿಜೆಪಿ ಸರ್ಕಾರದ ಅವ್ಯವಹಾರ, ಭ್ರಷ್ಟಾಚಾರ ಹಾಗೂ ವಿವಿಧ ಹಗರಣಗಳನ್ನು ದಾಖಲೆ ಸಮೇತ ಜನರ ಮುಂದಿಟ್ಟಿರುವ ಪ್ರಿಯಾಂಕ್ ಖರ್ಗೆ ಅವರು ರೈತರು, ಮಹಿಳೆಯರು, ದಲಿತರು ಹಾಗೂ ನಿರುದ್ಯೋಗಿಗಳ ಸಮಸ್ಯೆಗಳನ್ನು ಸದನದೊಳಗೂ




ಹೊರಗೂ ಪ್ರಖರವಾಗಿ ಎತ್ತಿಹಿಡಿದಿದ್ದಾರೆ ಎಂದು ಸಮಿತಿಯವರು ತಿಳಿಸಿದ್ದಾರೆ.

ಸಮಾಜ ಕಲ್ಯಾಣ ಸಚಿವರಾಗಿ "ಸಮೃದ್ಧಿ", "ಐರಾವತ", "ಪ್ರಬುದ್ಧ" ಹಾಗೂ "ಉನ್ನತಿ" ಯೋಜನೆಗಳನ್ನು ಜಾರಿಗೆ ತಂದು ಯುವಕರು, ವಿದ್ಯಾರ್ಥಿಗಳು ಮತ್ತು ಹಿಂದುಳಿದ ವರ್ಗಗಳ ಸಬಲೀಕರಣಕ್ಕೆ ವಿಶೇಷ ಒತ್ತು ನೀಡಿದ್ದಾರೆ ಎಂದು ಪ್ರಶಂಸಿಸಲಾಗಿದೆ.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಅವರ ಸಾಧನೆಗೆ ಕೇಂದ್ರ ಸರ್ಕಾರದಿಂದಲೂ ಮೆಚ್ಚುಗೆ ವ್ಯಕ್ತವಾಗಿದ್ದು, ಪಂಚಾಯತ್ ರಾಜ್ ವಿಕೇಂದ್ರೀಕರಣದಲ್ಲಿ ಕರ್ನಾಟಕವನ್ನು ದೇಶದ

ಮುಂಚೂಣಿ ರಾಜ್ಯವನ್ನಾಗಿ ರೂಪಿಸುವಲ್ಲಿ ಅವರ ಕೊಡುಗೆ ಗಮನಾರ್ಹವಾಗಿದೆ ಎಂದು ಮನವಿಯಲ್ಲಿ ಹೇಳಲಾಗಿದೆ.

ರಾಜ್ಯಾದ್ಯಂತ ಕಾಂಗ್ರೆಸ್ ಪಕ್ಷವನ್ನು ಬಲಪಡಿಸಿ, ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬರಲು ಪ್ರಮುಖ ಪಾತ್ರವಹಿಸಿರುವ ಕಾರಣದಿಂದ ಪ್ರಿಯಾಂಕ್ ಖರ್ಗೆ ಅವರಿಗೆ ಉಪ ಮುಖ್ಯಮಂತ್ರಿಯ ಸ್ಥಾನಮಾನ ನೀಡಬೇಕೆಂದು ಸಂವಿಧಾನ ರಕ್ಷಣಾ ಹೋರಾಟ ಸಮಿತಿ ಒತ್ತಾಯಿಸಿದೆ.

ಈ ಸಂದರ್ಭದಲ್ಲಿ ಅರ್ಜುನ್ ಭದ್ರೆ, ಭೀಮರಾವ ಟಿಟಿ, ಪರಮೇಶ್ವರ ಕಾನಾಪುರ, ದೇವೇಂದ್ರ ಸಿನೂರ್, ದಿನೇಶ ದೊಡ್ಡಮನಿ, ದೇವೇಂದ್ರ ನಡುವಿನಮನಿ, ರಮೇಶ ಜಾಧವ್, ಮಹಾಂತಪ್ಪ ಸಂಗಾವಿ, ಸಿದ್ದರಾಮ ಬೆಳಕೋಟಿ, ಮಲ್ಲಿಕಾರ್ಜುನ ನೀಲೂರ್, ಸುನೀಲ್ ಮಾನಪಡೆ, ರಾಜಕುಮಾರ ಕಪನೂರ್, ಕಿಶೋರ್ ಗಾಯಕವಾಡ ಸೇರಿದಂತೆ ಹಲವು ಮುಖಂಡರು ಇದ್ದರು.

# ವಿದ್ಯಾರ್ಥಿ ನಿಲಯ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಪಿರಿಯಾಪಟ್ಟಣ

ಡಾ. ಬಿ ಆರ್ ಅಂಬೇಡ್ಕರ್ ಬಾಲಕರ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯ ಪಿರಿಯಾಪಟ್ಟಣ ಟೌನ್ ಇಲ್ಲಿ 2026–27 ನೇ ಸಾಲಿನ ಪ್ರವೇಶಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ. ಪಿಯುಸಿ ಡಿಗ್ರಿ ಐಟಿಐ ಡಿಪ್ಲೋಮೋ ವಿದ್ಯಾರ್ಥಿಗಳಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗದ ವಿದ್ಯಾರ್ಥಿಗಳಿಗೆ ಉಚಿತ ಪ್ರವೇಶ ನೀಡಲಾಗುವುದು. 2 ಭಾವಚಿತ್ರ ಆಧಾರ್ ಕಾರ್ಡ್. ಜಾತಿ ಮತ್ತು ಆದಾಯ ದೃಢೀಕರಣ ಪತ್ರ. ಬ್ಯಾಂಕ್ ಪಾಸ್ ಬುಕ್ ಪ್ರತಿ ಅಂಕಪಟ್ಟಿ ಹಾಗೂ ಅರ್ಜಿ ನಮೂನೆ ಹೊಂದಿಗೆ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಮೊ. ನಂ.9902642143 ಸಿದ್ದಲಿಂಗಶೆಟ್ಟಿ ವಾರ್ಡನ್ ರವರನ್ನು ಸಂಪರ್ಕಿಸಬಹುದಾಗಿದೆ. ಪಿರಿಯಾಪಟ್ಟಣ : ಮಹಾಷಿ9 ವಾಲ್ಮೀಕಿ ಆದಿವಾಸಿ ಬುಡಕಟ್ಟು ವಸತಿ ಶಾಲೆ, ಮುತ್ತೂರು ಕಾಲೋನಿ. ಅಪ್ಪಳತಿ. ದೊಡ್ಡ ಹೊಸೂರು ಮತ್ತು ಗಿರಿಜನ ಪಾಲಕರ ವಿದ್ಯಾರ್ಥಿ ನಿಲಯ ಪಂಚವಳ್ಳಿ. ಇಲ್ಲಿಗೆ 2026–27ನೇ ಸಾಲಿಗೆ ಪ್ರವೇಶಕ್ಕೆ ಅರ್ಜಿ ಸಲ್ಲಿಸಬಹುದಾಗಿದೆ. ವಸತಿ ಶಾಲೆಗಳಿಗೆ 1ರಿಂದ 8ನೇ ತರಗತಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗ ಹಾಗೂ ಹಿಂದುಳಿದ ವರ್ಗಗಳ ಪ್ರವೇಶ ನೀಡಲಾಗುವುದು. ವಿದ್ಯಾರ್ಥಿ ನಿಲಯವನ್ನು ಸೇರ ಬಯಸುವ ವಿದ್ಯಾರ್ಥಿಗಳು ಟಿಸಿ ಎರಡು ಭಾವಚಿತ್ರ. ಆಧಾರ್ ಕಾರ್ಡ್. ಜಾತಿ ಮತ್ತು ಆದಾಯ ಪ್ರಮಾಣ ಪತ್ರದ ಹಿಂದಿನ ತರಗತಿಯ ಅಂಕಪಟ್ಟಿ ಅರ್ಜಿ ನಮೂನೆ ಯೆಂದಿಗೆ ಲಗತಿಸಬೇಕು.

ಮಹಾಷಿ9 ವಾಲ್ಮೀಕಿ ಆದಿವಾಸಿ ಬುಡಕಟ್ಟು ವಸತಿ ಶಾಲೆ, ಮುತ್ತೂರು ಕಾಲೋನಿ 1ರಿಂದ 8ನೇ ತರಗತಿ ಬಿಟಿ ಮಹಾದೇವ್ 9449131475. ಅಬ್ಬಳತಿ ದೇವಿ 7760456705. ದೊಡ್ಡ ಹೊಸೂರು 1ರಿಂದ 8ನೇ ತರಗತಿ ಸಿದ್ದಲಿಂಗ ಶೆಟ್ಟಿ 9902652143 ಪರಿಶಿಷ್ಟ ವರ್ಗಗಳ ಬಾಲಕರ ವಿದ್ಯಾರ್ಥಿ ನಿಲಯ ಪಂಚವಳ್ಳಿ 5ರಿಂದ 10ನೇ ತರಗತಿ ವಾರ್ಡನ್ ಬಿಟಿ ಮಹಾದೇವ್ 944913147 ರವರನ್ನು ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಬೇಕೆಂದು ಕೋರಲಾಗಿದೆ.

# ಸಿದ್ದರಾಮಯ್ಯ ಪರ ಕುರುಬರ ಸಂಘದಿಂದ ಪ್ರತಿಭಟನೆ



• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಸಿದ್ದರಾಮಯ್ಯ ಅವರನ್ನು 2028ರವರೆಗೆ ಪೂರ್ಣಾವಧಿ ಮುಖ್ಯಮಂತ್ರಿಯಾಗಿ ಮುಂದುವರಿಸಬೇಕೆಂದು ಆಗ್ರಹಿಸಿ ಕರ್ನಾಟಕ ಪ್ರದೇಶ ಕುರುಬಗೊಂಡ ಸಂಘದಿಂದ ಪ್ರತಿಭಟನೆ ನಡೆಸಲಾಯಿತು.

ನಗರದ ಎಸ್‌ವಿಪಿ ವೃತ್ತದಿಂದ ಜಿಲ್ಲಾಧಿಕಾರಿ ಕಚೇರಿ ಎದುರು ನಡೆದ ಪ್ರತಿಭಟನೆಯಲ್ಲಿ ಸಂಘದ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವ ಮುಂದುವರಿಯಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಜಿಲ್ಲಾಧ್ಯಕ್ಷ ಗುರುನಾಥ ಪೂಜಾರಿ, ಧರ್ಮರಾಜ ಹೇರೂರ, ನಾಗೇಶ್ ಮುಚಖೇಡ್, ರೇವಣಸಿದ್ದಪ್ಪ ಸಾತನೂರ, ಲಕ್ಷ್ಮಣ ಪೂಜಾರಿ, ಅಮೋಘಸಿದ್ಧ, ಕುಪೇಂದ್ರ ಬರಗಾಲಿ, ಶಿವಲಿಂಗ ಬಾಸ್ಸಿ ಸಾವಳಗಿ ಸೇರಿದಂತೆ ಹಲವರು ಭಾಗವಹಿಸಿದ್ದರು.

# ಪ್ರಿಯಾಂಕ್ ಖರ್ಗೆಗೆ ಡಿಸಿಎಂ ಸ್ಥಾನಕ್ಕಾಗಿ ರಾಮಮಂದಿರದಲ್ಲಿ ವಿಶೇಷ ಪೂಜೆ



• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಸಚಿವ ಪ್ರಿಯಾಂಕ್ ಖರ್ಗೆಅವರಿಗೆ ಉಪಮುಖ್ಯಮಂತ್ರಿ ಸ್ಥಾನ ನೀಡುವಂತೆ ವಿಶೇಷ ಪ್ರಾರ್ಥನೆ ಸಲ್ಲಿಸಿ ಇಂದು ನಗರದ ರಾಮಮಂದಿರದಲ್ಲಿ ಯುವ ಅಭಿಮಾನಿಗಳು ವಿಶೇಷ ಪೂಜೆ ನೆರವೇರಿಸಿದರು.ಈ ಸಂದರ್ಭದಲ್ಲಿ 101 ಈಡುಗಾಯಿ ಒಡೆಯುವ ಮೂಲಕ ಅಭಿಮಾನಿಗಳು ತಮ್ಮ ಬೆಂಬಲ ವ್ಯಕ್ತಪಡಿಸಿದರು. ಕಾರ್ಯಕ್ರಮದಲ್ಲಿ ಭೀಮಾಶಂಕರ ಪುನೀತ್, ಕಿರಣ ಪಂಡಿತ, ಸಾಗರ ಕುಲಕರ್ಣಿ, ಪ್ರದೀಪ, ವಿನೇಶ್ ಪಾಟೀಲ ಸೇರಿದಂತೆ ಅನೇಕ ಯುವ ಮುಖಂಡರು ಭಾಗವಹಿಸಿದ್ದರು.

# ಶಾಸಕ ಅಲ್ಲಮಪ್ರಭು ಪಾಟೀಲ್‌ಗೆ ಸಚಿವ ಸ್ಥಾನ ನೀಡಲು ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ದಕ್ಷಿಣ ಮತಕ್ಷೇತ್ರದ ಶಾಸಕ ಅಲ್ಲಮಪ್ರಭು ಪಾಟೀಲ್ ಅವರಿಗೆ ರಾಜ್ಯ ಸಚಿವ ಸಂಪುಟದಲ್ಲಿ ಸಚಿವ ಸ್ಥಾನ ನೀಡಬೇಕೆಂದು ಕಾಂಗ್ರೆಸ್ ಯುವ ಮುಖಂಡ ಮಂಜುನಾಥ ಬಿರಾದಾರ ಸರಕಾರ–ಕ್ಕೆ ಆಗ್ರಹಿಸಿದ್ದಾರೆ.ಈ ಕುರಿತು ಪತ್ರಿಕಾ ಪ್ರಕಟಣೆಯಲ್ಲಿ ನೀಡಿದ ಅವರು, ಅಲ್ಲಮಪ್ರಭು ಪಾಟೀಲ್ ಅವರು ಕಳೆದ ಸುಮಾರು 50 ವರ್ಷಗಳಿಂದ ಕಾಂಗ್ರೆಸ್ ಪಕ್ಷದ ನಿಷ್ಠಾವಂತ ಕಾರ್ಯಕರ್ತರಾಗಿ ಸೇವೆ ಸಲ್ಲಿಸುತ್ತಿದ್ದು, ಮಂಡಲ್ ಪಂಚಾಯತ್, ಗ್ರಾಮ ಪಂಚಾಯತ್ ಹಂತದಿಂದಲೇ ಪಕ್ಷ ಸಂಘಟನೆಗಾಗಿ ದುಡಿಯುತ್ತಿದ್ದಾರೆ ಎಂದು ಹೇಳಿದರು.ಪಕ್ಷದ ತತ್ವ ಸಿದ್ಧಾಂತಗಳಿಗೆ ಬದ್ಧರಾಗಿ ಜನಸೇವೆಯಲ್ಲಿ ತೊಡಗಿಸಿಕೊಂಡಿರುವ ಅವರು, ಕಲ್ಬುರ್ಗಿ ದಕ್ಷಿಣ ಕ್ಷೇತ್ರದ ಅಭಿವೃದ್ಧಿಗೆ ವಿಶೇಷ ಕೊಡುಗೆ ನೀಡಿದ್ದಾರೆ. ಹೀಗಾಗಿ ಅವರ ಅನುಭವ ಮತ್ತು ಸೇವೆಯನ್ನು ಪರಿಗಣಿಸಿ ಸಚಿವ ಸ್ಥಾನ ನೀಡಬೇಕು ಎಂದು ಮನವಿ ಮಾಡಿದ್ದಾರೆ.ಅಲ್ಲದೆ, ಹೈದರಾಬಾದ್ ಕರ್ನಾಟಕ ಭಾಗದ ಪ್ರತಿನಿಧಿತ್ವದ ದೃಷ್ಟಿಯಿಂದಲೂ ಅವರಿಗೆ ಸಚಿವ ಸ್ಥಾನ ನೀಡುವುದು ಸೂಕ್ತ ಎಂದು ಅಭಿಪ್ರಾಯಪಟ್ಟರು.

# ಈಶ್ವರ ಖಂಡ್ರೆಗೆ ಡಿಸಿಎಂ ಸ್ಥಾನ: ಕಾಂಗ್ರೆಸ್ಸಿಗರ ಬೇಡಿಕೆ

**ಬೀದರ್:** ರಾಜ್ಯದಲ್ಲಿ ಅಸ್ತಿತ್ವಕ್ಕೆ ಬರಲಿರುವ ನೂತನ ಸರ್ಕಾರದಲ್ಲಿ ಅರಣ್ಯ, ಪರಿಸರ, ಜೀವಶಾಸ್ತ್ರ ಹಾಗೂ ಬೀದರ್ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರಿಗೆ ಉಪ ಮುಖ್ಯಮಂತ್ರಿ ಸ್ಥಾನ ನೀಡಬೇಕು ಎಂದು ಜಿಲ್ಲೆಯ ಕಾಂಗ್ರೆಸ್ ಮುಖಂಡರು ಬೇಡಿಕೆ ಮಂಡಿಸಿದ್ದಾರೆ.

ಈಶ್ವರ ಖಂಡ್ರೆ ಅವರು ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡರಲ್ಲೊಬ್ಬರಾಗಿದ್ದಾರೆ. ಕಲ್ಯಾಣ ಕರ್ನಾಟಕ, ಉತ್ತರ ಕರ್ನಾಟಕ ಹಾಗೂ ರಾಜ್ಯದಲ್ಲಿ ಪಕ್ಷದ ಬಲವರ್ಧನೆಗೆ ದುಡಿದಿದ್ದಾರೆ. ರಾಜ್ಯದಲ್ಲಿ ಪಕ್ಷ ಅಧಿಕಾರಕ್ಕೆ ಬರುವಲ್ಲಿ ಅವರ ಶ್ರಮವೂ ಅಪಾರವಾಗಿದೆ ಎಂದು ತಿಳಿಸಿದ್ದಾರೆ. ನಾಲ್ಕನೇ ಬಾರಿ ಶಾಸಕರಾಗಿದ್ದಾರೆ. ಹಿಂದೆ ಪೌರಾಡಳಿತ ಸಚಿವರಾಗಿ ಮಾದರಿಯಾಗಿ ಕೆಲಸ ಮಾಡಿದ್ದರು. ಈಗ ಅರಣ್ಯ, ಪರಿಸರ, ಜೀವಶಾಸ್ತ್ರ ಹಾಗೂ ಬೀದರ್ ಜಿಲ್ಲಾ ಉಸ್ತುವಾರಿ ಸಚಿವ ಸ್ಥಾನವನ್ನು ಸಮರ್ಥವಾಗಿ ನಿಭಾಯಿಸಿದ್ದಾರೆ. ಹಸಿರು ಕ್ರಾಂತಿಗೆ ಪ್ರಯತ್ನಿಸಿದ್ದಾರೆ. ರಾಜ್ಯದ ಪ್ರಭಾವಿ ಸಚಿವರಲ್ಲಿ ಒಬ್ಬರೆನಿಸಿಕೊಂಡಿದ್ದಾರೆ. ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ರಾಷ್ಟ್ರೀಯ ಅಧ್ಯಕ್ಷರಾಗಿದ್ದಾರೆ. ರಾಜ್ಯದಾದ್ಯಂತ ವರ್ಚಸ್ಸು ಹೊಂದಿದ್ದಾರೆ ಎಂದು ಹೇಳಿದ್ದಾರೆ. ಜಾತ್ಯತೀತ ತತ್ವಗಳಲ್ಲಿ ನಂಬಿಕೆ ಇಟ್ಟಿದ್ದಾರೆ. ದೂರದೃಷ್ಟಿಯ ನೇತರರಾಗಿದ್ದಾರೆ. 2028 ರಲ್ಲಿ ರಾಜ್ಯದಲ್ಲಿ ಮತ್ತೆ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬರಲು ಈಶ್ವರ ಖಂಡ್ರೆ ಅವರಂಥ ಧುರೀಣರಿಗೆ ಒಳ್ಳೆಯ ಸ್ಥಾನಮಾನ ಕೊಡುವುದು ಅವಶ್ಯಕವಾಗಿದೆ. ಖಂಡ್ರೆ ಅವರಿಗೆ ಉಪ ಮುಖ್ಯಮಂತ್ರಿ ಸ್ಥಾನ ನೀಡಿದರೆ ಕಲ್ಯಾಣ ಕರ್ನಾಟಕ ಹಾಗೂ ರಾಜ್ಯ ಇನ್ನಷ್ಟು ಅಭಿವೃದ್ಧಿ ಕಾಣಲಿದೆ ಎಂದು ಕಾಂಗ್ರೆಸ್ ಜಿಲ್ಲಾ ಘಟಕದ ಅಧ್ಯಕ್ಷ ಬಸವರಾಜ ಜಾಬಶೆಟ್ಟಿ, ಪ್ರಧಾನ ಕಾರ್ಯದರ್ಶಿಗಳಾದ ಎಂ.ಎಂ. ಸಮಿ, ಜಾರ್ಜ್ ಫರ್ನಾಂಡೀಸ್, ಕಾರ್ಯದರ್ಶಿಗಳಾದ ಸುನೀಲ್ ಬಚ್ಚನ್, ರವೀಂದ್ರ, ಕೆಪಿಸಿಸಿ ಸದಸ್ಯ ಬಾಬುರಾವ್ ತುಂಬಾ, ಬೀದರ್ ದಕ್ಷಿಣ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಚಂದ್ರಶೇಖರ ಚನಶೆಟ್ಟಿ, ಭಾಲ್ಕಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಹಣಮಂತರಾವ್ ಚವಾಣ್, ನಿಸಾರ್ ಅಹಮ್ಮದ್, ಬಸವಕಲ್ಯಾಣ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ನೀಲಕಂಠ ರಾಠೋಡ್, ಔರಾದ್ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ರಾಜಕುಮಾರ ಹಲಬರ್ಗೆ, ಆನಂದ ಚವಾಣ್, ಬಿಡಿಎ ಸದಸ್ಯರಾದ ಭಗವಾನರಾವ್ ಪಾಂಡ್ರೆ, ವಿನೋದಕುಮಾರ ಬಂದಿಗೆ, ಕಾಂಗ್ರೆಸ್ ಪರಿಶಿಷ್ಟ ಜಾತಿ ವಿಭಾಗದ ಜಿಲ್ಲಾ ಘಟಕದ ಅಧ್ಯಕ್ಷ ಡಿ.ಕೆ. ಸಂಜುಕುಮಾರ, ಜಯಸೂರ್ (ರೊಯ್), ಪರಿಶಿಷ್ಟ ಪಂಗಡ ವಿಭಾಗದ ಜಿಲ್ಲಾ ಘಟಕದ ಅಧ್ಯಕ್ಷ ರಾಕೇಶ್ ಕುರುಬಖೇಳಗಿ, ಪರಿಶಿಷ್ಟ ಜಾತಿ ವಿಭಾಗದ ಜಿಲ್ಲಾ ಘಟಕದ ವಕ್ತಾರ ಶಂಕರ ಜ್ಯಾಂತಿಕರ್ ಮತ್ತಿತರರು ತಿಳಿಸಿದ್ದಾರೆ.

# ಸಿದ್ರಾಮಯ್ಯನವರ ಕಣ್ಣೀರಲ್ಲಿ ಕಾಂಗ್ರೆಸ್ ತೊಳೆದು ಹೋಗುತ್ತೆ: ಛಲವಾದಿ

**ಭಾಲ್ಕಿ:** ಸಿದ್ರಾಮಯ್ಯನವರ ಕಣ್ಣೀರಲ್ಲಿ ಕಾಂಗ್ರೆಸ್ ಪಕ್ಷ ತೊಳೆದುಕೊಂಡು



ಹೋಗುತ್ತೆ ಎಂದು ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣ ಸ್ವಾಮಿ ಹೇಳಿದರು. ಪಟ್ಟಣದ ಮಾಜಿ ಶಾಸಕ ಪ್ರಕಾಶ ಖಂಡ್ರೆಯವರ ನಿವಾಸದಲ್ಲಿ ಗುರುವಾರ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್‌ನ ಹಿರಿಯ ಮುಖಂಡ ಸಿದ್ರಾಮಯ್ಯನವರಿಗೆ ಹೇಗೆ ನಡೆಸಿಕೊಳ್ಳಬೇಕು ಎನ್ನುವ ಸಾಮಾನ್ಯ ವಿಷಯ ಕಾಂಗ್ರೆಸ್‌ನವರಿಗೆ ಗೊತ್ತಿಲ್ಲ. ಚಿಕ್ಕವಯಸ್ಸಿನ ರಾಹುಲ್ ಗಾಂಧಿ ಹಿರಿಯರಾದ ಸಿದ್ರಾಮಯ್ಯನವರಿಗೆ ಕಾಲಾವಕಾಶ ಕೊಡದೇ, ತಕ್ಷಣವೇ ರಾಜಿನಾಮೆ ಕೊಡು ಎಂದು ಹೇಳಿರುವುದು ನೋವಿನ ಸಂಗತಿಯಾಗಿದೆ. ದಲಿತರ ಮತದಿಂದ ಬೀಗುತ್ತಿರುವ ಕಾಂಗ್ರೆಸ್ ಪಕ್ಷ ಮೊದಲಿನಿಂದಲೂ ದಲಿತರನ್ನು ತುಳಿಯುತ್ತಾ ಬಂದಿದೆ, ದಲಿತರಿಗೆ ಮುಖ್ಯಮಂತ್ರಿ ಮಾಡುತ್ತೇನೆ ಎಂದು ಬಾಯಿ ಮಾತಲ್ಲಿ ಹೇಳುವ ಕಾಂಗ್ರೆಸ್ ಖಗ್ರೆಯವರಿಗೆ ಮುಖ್ಯಮಂತ್ರಿ ಮಾಡಲಿ, ಇಲ್ಲವೇ ವಯಸ್ಸಿನ ನೆಪ ಹೇಳಿದರೆ ಕಾಂಗ್ರೆಸ್ ನಲ್ಲಿಯೂ ತುಂಬಾ ದಲಿತ ನಾಯಕರಿದ್ದಾರೆ, ಜಿ.ಪರಮೇಶ್ವರ, ಕೆ.ಹೆಚ್.ಮುನಿಯಪ್ಪ ಸೇರಿದಂತೆ ಉತ್ತಮ ದಲಿತ ನಾಯಕರಿದ್ದಾರೆ ಅವರಿಗಾದರೂ ಕಾಂಗ್ರೆಸ್ ಮುಖ್ಯಮಂತ್ರಿ ಮಾಡಲಿ ಎಂದರು. ಮುಂಬರುವ ದಿನಗಳಲ್ಲಿ ಕಾಂಗ್ರೆಸ್ ಪಕ್ಷ ಧೂಳಿಪಟವಾಗಲಿದೆ. 2028ರ ಚುನಾವಣೆಯಲ್ಲಿ ಬಿಜೆಪಿ 150ಕ್ಕಿಂತ ಹೆಚ್ಚು ಸ್ಥಾನ ಗಳಿಸಿ ಅಧಿಕಾರಕ್ಕೆ ಬರುತ್ತದೆ ಎಂದು ಭವಿಷ್ಯ ನುಡಿದರು.

ಈ ಸಂದರ್ಭದಲ್ಲಿ ಮಾಜಿ ಶಾಸಕ ಪ್ರಕಾಶ ಖಂಡ್ರೆ, ಶಾಸಕರಾದ ಪ್ರಭು ಚವ್ಹಾಣ, ಡಾ। ಶೈಲೇಂದ್ರ ಬೆಲ್ದಾಳೆ ಇದ್ದರು.

# ಅಕ್ರಮ ಪಡಿತರ ಸಾಗಣೆ ಪ್ರಕರಣ



**ಬಳ್ಳಾರಿ:** ಕುರುಗೋಡು ಪೊಲೀಸ್ ಠಾಣಾ ವ್ಯಾಪ್ತಿಯ ಬಾದನಹಟ್ಟಿ ಗ್ರಾಮದ ಹತ್ತಿರ ಯಲ್ಲಾಪುರ ರಸ್ತೆ ಕಡೆ ಇರುವ ನಂದಿ ಲೇಔಟ್‌ನಲ್ಲಿ (1) ಯಸ್ವಾಮಿ @ ಯಶಂಕರಗೌಡ ವಾಸ ಕುರುಗೋಡು, (2) ಉಮೇಶ @ ಉಮಾಶಂಕರ ವಾಸ ಕುರುಗೋಡು ಇವರುಗಳು ಅಕ್ರಮವಾಗಿ ಪಡಿತರ ಅಕ್ಕಿ ಚೀಲಗಳನ್ನು ಸಂಗ್ರಹಿಸಿ (3) ವೀರಭದ್ರ ವಾಸ ಮಾನ್ವಿ (4) ವಿನೋಧ ವಾಸ ಮಾನ್ವಿ. ರವರಿಗೆ ಸಾಗಾಣಿಕೆ ಮಾಡಲು ಲಾರಿ ನಂ–ಕೆಎ–36 ಸಿ–5899 ನೇದ್ದರಲ್ಲಿ ಪಡಿತರ ಅಕ್ಕಿ ಚೀಲಗಳನ್ನು ಲೋಡ್ ಮಾಡಿ ನಿಲ್ಲಿಸಿದಾಗ ಕುರುಗೋಡು ಪೊಲೀಸ್ ಠಾಣೆಯ ಪಿ.ಎಸ್.ಐ. ಸುಪ್ರೀತ್ ವಿ. ಸಿಬ್ಬಂದಿಯವರಾದ ಶಿವರಾಯಪ್ಪ, ಪಕ್ಕೀರಪ್ಪ, ರಾಮಚಂದ್ರ ಮತ್ತು ಆಹಾರ ನಿರೀಕ್ಷಕರಾದ ಶ್ರೀ ಮಲ್ಲಿಕಾರ್ಜುನ ಪಿ. ರವರುಗಳು ಜಂಟಿಯಾಗಿ ದಾಳಿ ಮಾಡಿ, 5,52,500/–ರೂ. ಬೆಲೆಯ ಒಟ್ಟು 22,100 ಟನ್ ಪಡಿತರ ಅಕ್ಕಿ ಮತ್ತು 10,00,000(10ಲಕ್ಷ)ರೂ. ಮೌಲ್ಯದ ಆಶೋಕ್ ಲೈಲ್ಯಾಂಡ್ ಕಂಪನಿಯ ಲಾರಿಯನ್ನು ಜಪ್ತಿಪಡಿಸಿಕೊಳ್ಳಲಾಗಿದೆ.

ಈ ಘಟನೆಯ ಕುರಿತು ಕುರುಗೋಡು ಪೊಲೀಸ್ ಠಾಣೆಯಲ್ಲಿ ಅಪರಾಧ ಸಂಖ್ಯೆ 124/2026 ಕಲಂ 3, 7, 6(ಎ) ಇ. ಸಿ. ಯಾಕ್ಟ್ ಅನ್ವಯ ಪ್ರಕರಣ ದಾಖಲಿಸಲಾಗಿದೆ.

# ಇಂಧನ ಉಳಿತಾಯ ಸಾಧನೆ, ನಗದು ವಿತರಣೆ





• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಸಾರಿಗೆ ಸಂಸ್ಥೆಯ ಚಾಲಕರು ಕೇವಲ ವಾಹನ ಚಾಲಕರು ಮಾತ್ರವಲ್ಲ, ಪ್ರತಿದಿನ ಸಾವಿರಾರು ಪ್ರಯಾಣಿಕರ ಜೀವವನ್ನು ಸುರಕ್ಷಿತವಾಗಿ ತಲುಪಿಸುವ ಹೊಣೆಗಾರಿಕೆಯನ್ನು ಹೊತ್ತಿರುವ ಸೇವಾ ಯೋಧರಾಗಿದ್ದಾರೆ ಎಂದು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಅಧ್ಯಕ್ಷ ಅರುಣಕುಮಾರ ಪಾಟೀಲ ಹೇಳಿದರು.

ಇತ್ತೀಚೆಗೆ ವಿಜಯನಗರ ಜಿಲ್ಲೆಯ ಕೂಡ್ಲಗಿ ಘಟಕದಲ್ಲಿ ಆಯೋಜಿಸಿದ 2025–26ನೇ ಸಾಲಿನ ಇಂಧನ ಉಳಿತಾಯ ದ್ವಿಮಾಸಿಕ ಕಾರ್ಯಕ್ರಮದಡಿ ಕೆ.ಎಂ.ಪಿ.ಎಲ್ ವೃದ್ಧಿಯ ಮೂಲಕ ಅತ್ಯುತ್ತಮ ಇಂಧನ ಉಳಿತಾಯ ಸಾಧಿಸಿ ನಿಗಮದ ಆರ್ಥಿಕ ಸದೃಢತೆಗೆ ಕೊಡುಗೆ ನೀಡಿದ ನಿಗಮದ ವಿಭಾಗೀಯ ನಿಯಂತ್ರಕರು, ವಿಭಾಗೀಯ ಯಾಂತ್ರಿಕ ಅಭಿಯಂತರರು, ಘಟಕ ವ್ಯವಸ್ಥಾಪಕರು, ಚಾಲಕರು ಹಾಗೂ ಯಾಂತ್ರಿಕ ಸಿಬ್ಬಂದಿಗಳನ್ನು ಸನ್ಮಾನಿಸಿ ಪ್ರಶಂಸನಾ ಪತ್ರ ಹಾಗೂ ನಗದು ಬಹುಮಾನ ವಿತರಿಸುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಖಾಸಗಿ ವಾಹನಗಳ ಚಾಲಕರಿಗಿಂತ ನಮ್ಮ ನಿಗಮದ ಚಾಲಕರು ಸೇವಾ ಮನೋಭಾವ, ಶಿಸ್ತು, ಪ್ರಾಮಾಣಿಕತೆ, ನಿಷ್ಠೆ ಹಾಗೂ ಪ್ರಯಾಣಿಕರ ಸುರಕ್ಷತೆಗೆ ಹೆಚ್ಚಿನ ಆದ್ಯತೆ ನೀಡುತ್ತಾ ವಿಭಿನ್ನ ಸ್ಥಾನ ಹೊಂದಿದ್ದಾರೆ. ನಮ್ಮ ಚಾಲಕರ ಕಾರ್ಯಕ್ಷಮತೆ ನಿಜವಾಗಿಯೂ ಹೆಮ್ಮೆಯ ಸಂಗತಿಯಾಗಿದೆ. ಜೊತೆಗೆ ಯಾಂತ್ರಿಕ ನಿರ್ವಹಣೆ ಮಾಡುವ ಎಲ್ಲಾ ಯಾಂತ್ರಿಕ ಸಿಬ್ಬಂದಿಯ ಶ್ರದ್ಧೆ, ನಿಷ್ಠೆ ಹಾಗೂ ಸೇವಾ ಮನೋಭಾವದಿಂದಲೇ ನಿಗಮ ಪ್ರಯಾಣಿಕರಿಗೆ ಗುಣಮಟ್ಟದ ಸೇವೆ ನೀಡುತ್ತಿದೆ ಎಂದು ಸಿಬ್ಬಂದಿಯ ಕಾರ್ಯವೈಖರಿಯನ್ನು ಶ್ಲಾಘಿಸಿದರು.

ಇಂದು ಕರ್ನಾಟಕದ ಸಾರಿಗೆ ವ್ಯವಸ್ಥೆ ಇ ದೇಶದಲ್ಲಿಯೇ ಮಾದರಿಯಾಗಿರುವುದಕ್ಕೆ ನೌಕರರ ಅವಿರತ ಶ್ರಮ, ಸೇವಾ ಮನೋಭಾವನೆಯೆ ಕಟರಣವಾಗಿದೆ. ಹಲವು ರಾಜ್ಯಗಳ ಸಾರಿಗೆ ಸೇವೆಗೆ ಹೋಲಿಸಿದರೆ ಕರ್ನಾಟಕದ ಸಾರಿಗೆ ಸೇವೆ ಪ್ರಯಾಣಿಕರ ವಿಶ್ವಾಸ ಗಳಿಸಿರುವುದು ಹೆಮ್ಮೆಯ ವಿಚಾರ. ಅತ್ಯುತ್ತಮ ಸೇವೆಗಳಿಗಾಗಿ ನಮ್ಮ ನಿಗಮ ರಾಷ್ಟ್ರ ಹಾಗೂ ಅಂತರಾಷ್ಟ್ರೀಯ ಮಟ್ಟದಲ್ಲಿ ಅನೇಕ ಪ್ರಶಸ್ತಿಗಳನ್ನು ಪಡೆದಿದೆ ಎಂದರು. ಇದೇ ಸಂದರ್ಭದಲ್ಲಿ ಕೆ.ಎಂ.ಪಿ.ಎಲ್ ಉತ್ತಮ ಸಾಧನೆಗೈದ 43 ಜನ ಚಾಲಕರು, 4 ಜನ ವಿಭಾಗೀಯ ನಿಯಂತ್ರಣಾಧಿಕಾರಿಗಳು, 4 ಜನ ವಿಭಾಗೀಯ ಯಾಂತ್ರಿಕ ಅಭಿಯಂತರರು ಹಾಗೂ 12 ಜನ ಘಟಕ ವ್ಯವಸ್ಥಾಪಕರು ಹಾಗೂ 10 ಜನ ಯಾಂತ್ರಿಕ ಇಲಾಖೆಯ ಸಿಬ್ಬಂದಿಗಳು ಸೇರಿದಂತೆ ಒಟ್ಟು 73 ಜನ ಸಾಧಕರಿಗೆ ನಗದು ಬಹುಮಾನ, ಪ್ರಶಂಸನಾ ಪತ್ರ ನೀಡಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ನಿಗಮದ ವ್ಯವಸ್ಥಾಪಕ ನಿರ್ದೇಶಕರಾದ ಡಾ. ಸುಶೀಲಾ ಬಿ., ಮುಖ್ಯ ಯಾಂತ್ರಿಕ ಅಭಿಯಂತರರು, ವಿಭಾಗೀಯ ನಿಯಂತ್ರಕರು ಸೇರಿದಂತೆ ಸಾರಿಗೆ ಸಂಸ್ಥೆಯ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಹಾಜರಿದ್ದರು.

# ಹಿಂದೂ–ಮುಸ್ಲಿಂ ಸಹಬಾಳ್ವೆಯಿಂದ ಕೂಡಿದೆ

• ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ



ವಿಧಾನಸಭಾ ಕ್ಷೇತ್ರದಲ್ಲಿ ಯಾವುದೇ ಧರ್ಮ ಭೇಧವಿಲ್ಲದೇ ಹಿಂದೂ–ಮುಸ್ಲಿಂ ಸಹಬಾಳ್ವೆಯಿಂದ ಬಾಳುತ್ತಿದ್ದಾರೆ. ಆ ನಿಟ್ಟಿನಲ್ಲಿ ಗಂಗಾವತಿ ಕ್ಷೇತ್ರ ಸಹಬಾಳ್ವೆಯ ಕ್ಷೇತ್ರವಾಗಿದೆ ಎಂದು ಗಂಗಾವತಿ ಕ್ಷೇತ್ರದ ಕಾಂಗ್ರೆಸ್ ಮುಖಂಡರಾದ ಸೋಮನಾಥ ಪಟ್ಟಣಶೆಟ್ಟಿ ವಕೀಲರು ಪ್ರಕಟಣೆಯಲ್ಲಿ ತಿಳಿಸಿದರು.

ಅವರು ಇಂದು ಬಕ್ರೀದ್ ಹಬ್ಬದ ಅಂಗವಾಗಿ ಗಂಗಾವತಿ ನಗರದ ಈದ್ಗಾ ಮೈದಾನದಲ್ಲಿ ನಡೆದ ಪ್ರಾರ್ಥನೆಯಲ್ಲಿ ಭಾಗವಹಿಸಿ, ಮುಸ್ಲಿಂ ಸಮಾಜ ಬಾಂಧವರಿಗೆ ಬಕ್ರೀದ್ ಹಬ್ಬದ ಶುಭಾಷಯಗಳನ್ನು ಕೋರಿ ಮಾತನಾಡಿದರು. ಗಂಗಾವತಿ ನಗರ ಇನ್ನೂ ಸಾಕಷ್ಟು ಅಭಿವೃದ್ಧಿ ಹೊಂದಬೇಕಾಗಿದೆ, ಆ ನಿಟ್ಟಿನಲ್ಲಿ ಹಿಂದೂ–ಮುಸ್ಲಿಂ ಬಾಂಧವರು ಹೀಗೆಯೇ ಒಗ್ಗಟ್ಟಾಗಿ ಸಹಬಾಳ್ವೆಯಿಂದ ಜೀವನ ನಡೆಸುವುದರೊಂದಿಗೆ ಗಂಗಾವತಿ ಅಭಿವೃದ್ಧಿಗೆ ಪಣ ತೊಡಿ ಎಂದು ಸೋಮನಾಥ ಪಟ್ಟಣಶೆಟಿ ವಕೀಲರು ವೀರ ಕನ್ನಡಿಗ ಪ್ರಶಸ್ತಿ ಪುರಸ್ಕೃತರು, ನ್ಯಾಯಾಂಗ ಹಾಗೂ ಸಮಾಜ ಸೇವೆಯ ಬೆಳಕು ಪ್ರಶಸ್ತಿ ಪುರಸ್ಕೃತರು, ವೀರಶೈವ ಲಿಂಗಾಯತ ಸಮಾಜ ಹಾಗೂ ಗಂಗಾವತಿ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಪಕ್ಷದ ಮುಖಂಡರು ಗಂಗಾವತಿ ಅವರು ಉಭಯ ಧರ್ಮದ ಸಾರ್ವಜನಿಕರಿಗೆ ಕರೆ ನೀಡಿದರು.

# ಹಳ್ಳಗಳಲ್ಲಿ ಈಜಲು ಹೋಗಿ 2 ಸಾವು

• ಮಲ್ಲಮ್ಮ ನುಡಿ ವಾರ್ತೆ ಕಮಲನಗರ



ಕಳೆದ ಎರಡು ದಿನಗಳಲ್ಲಿ ತಾಲೂಕಿನ ಪ್ರತೆ–ೄಕ ಸ್ಥಳಗಳಲ್ಲಿ ನದಿ ಹಾಗೂ ಹಳ್ಳಕ್ಕೆ ಈಜಲು ಹೋದ ಇಬ್ಬರು ವ್ಯಕ್ತಿಗಳು ನೀರಿನಲ್ಲಿ ಮುಳುಗಿ ಮೃತಪಟ್ಟಿರುವ ದಾರುಣ ಘಟನೆ ಸಂಭವಿಸಿದೆ.

ಹುಲಸೂರ ನದಿಯಲ್ಲಿ ಹಾಗೂ ಕಮಲನಗರ–ಮದನೂರ ರಸ್ತೆಯ ಮಧ್ಯೆ ಬರುವ ಹಳ್ಳದಲ್ಲಿ ಈ ಘಟನೆಗಳು ಸಂಭವಿಸಿದ್ದು, ಮೃತರ ದೇಹಗಳನ್ನು ಹೊರತೆಗೆಯಲು ಅಗ್ನಿಶಾಮಕ ದಳ ಹಾಗೂ ಪೊಲೀಸ್ ಸಿಬ್ಬಂದಿ ಜಂಟಿ ಕಾರ್ಯಾಚರಣೆ ನಡೆಸಿದ್ದಾರೆ. ಸ್ಥಳಕ್ಕೆ ಕಮಲನಗರ ಪೊಲೀಸ್ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

**ಸಿಪಿಐ ಶ್ರೀಕಾಂತ ಅಲ್ಲಾಪುರೆ ಅವರಿಂದ ಕಟ್ಟುನಿಟ್ಟಿನ ಸೂಚನೆ:** ಘಟನೆಗೆ ಸಂಬಂಧಿಸಿದಂತೆ ಕಮಲನಗರ ಪೊಲೀಸ್ ಠಾಣಾ ವ್ಯಾಪ್ತಿಯ ಸಾರ್ವಜನಿಕರಿಗೆ ಸಿಪಿಐ ಶ್ರೀಕಾಂತ ಅಲ್ಲಾಪುರೆ ಅವರು ಪ್ರಮುಖ ಮುನ್ನೆಚ್ಚರಿಕೆ ಹಾಗೂ ಕಟ್ಟುನಿಟ್ಟಿನ ಸೂಚನೆಗಳನ್ನು ನೀಡಿದ್ದಾರೆ. ಗ್ರಾಮದ ಸುತ್ತಮುತ್ತ ಕಂಡುಬರುವ ನದಿ, ಹಳ್ಳ, ಕೊಳ್ಳ ಹಾಗೂ ಬಾವಿಗಳಲ್ಲಿ ಸೂಕ್ತ ಸುರಕ್ಷತೆ ಇಲ್ಲದೆ ಸಾರ್ವಜನಿಕರು ಹಾಗೂ ಯುವಕರು ಈಜಾಡುವುದನ್ನು ಸಂಪೂರ್ಣವಾಗಿ ನಿಲ್ಲಿಸಬೇಕು. ಪೋಷಕರು ತಮ್ಮ ಮಕ್ಕಳಿಗೆ ನದಿ ಹಾಗೂ ಹಳ್ಳದ ಕಡೆಗೆ ಹೋಗಿ ಈಜಾಡದಂತೆ ತಿಳಿಹೇಳಿ, ಅವರ ಮೇಲೆ ಸೂಕ್ತ ನಿಗಾ ವಹಿಸಬೇಕು.

ಅಪಾಯಕಾರಿ ಜಲಮೂಲಗಳ ಬಳಿ ಸಾರ್ವಜನಿಕರು ಎಚ್ಚರಿಕೆಯಿಂದ ಇರಬೇಕೆಂದು ಕಮಲನಗರ ಪೊಲೀಸರು ಪ್ರಕಟಣೆಯ ಮೂಲಕ ತಿಳಿಸಿದ್ದಾರೆ.

# ಕಾರ್ಯಕರ್ತರ ಶಿಸ್ತು, ಜನಸೇವೆಯ ಬದ್ಧತೆಗಳೇ ಪಕ್ಷದ ಶಕ್ತಿ





• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ನಮ್ಮ ಕಾರ್ಯಕರ್ತರ ಶಿಸ್ತು, ಜನಸೇವೆಯ ಬದ್ಧತೆಗಳೇ ಪಕ್ಷದ ಶಕ್ತಿ ಎಂದು ಶಾಸಕ ಹಾಗೂ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ಹೇಳಿದರು.

ನಾರಾಯಣಪೇಟೆಯಲ್ಲಿ ಇಂದು ನಡೆದ ಬಳ್ಳಾರಿ ಜಿಲ್ಲಾ ಪ್ರಶಿಕ್ಷಣ ಶಿಬಿರದಲ್ಲಿ ಅವರು ಪಾಲ್ಗೊಂಡಿದ್ದರು. ಪಕ್ಷದ ಸಂಘಟನೆಯನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಮುಂದಿನ ಕಾರ್ಯಸೂಚಿಗಳ ಬಗ್ಗೆ ತರಬೇತಿ ನಡೆಸಲಾಯಿತು. ಬೂತ್ ಮಟ್ಟದಿಂದ ಇನ್ನೂ ಹೆಚ್ಚು ಸಕ್ರಿಯವಾಗಿ ತೊಡಗಿಸಿಕೊಳ್ಳುವ ನಿಟ್ಟಿನಲ್ಲಿ ಎಲ್ಲರೂ ಒಗ್ಗಟ್ಟಿನಿಂದ ಮುನ್ನಡೆದು ಗುರಿ ತಲುಪುವ ದೃಢಸಂಕಲ್ಪ ನಮ್ಮದಾಗಲಿ ಎಂದು ಅವರು ತಿಳಿಸಿದರು.

ಜಿಲ್ಲಾಧ್ಯಕ್ಷ ಅನಿಲ್ ಕುಮಾರ್ ಮೋಕಾ, ಮಾಜಿ ಸಚಿವ ಬಿ. ಶ್ರೀರಾಮುಲು, ಶಾಸಕ ಜಿ. ಜನಾರ್ಧನ ರೆಡ್ಡಿ, ಮಾಜಿ ಶಾಸಕ ಸೋಮಶೇಖರ್ ರೆಡ್ಡಿ, ವಿಧಾನಪರಿಷತ್ ವಿಪಕ್ಷ ಮುಖ್ಯ ಸಚೇತಕ ಎನ್. ರವಿಕುಮಾರ್, ವಿಧಾನಪರಿಷತ್ ಸದಸ್ಯೆ ಶ್ರೀಮತಿ ಹೇಮಲತಾ ನಾಯಕ್, ರಾಜ್ಯ ಅಧ್ಯಕ್ಷ ಬಂಗಾರು ಹನುಮಂತು, ಪ್ರಮುಖರಾದ ಶ್ರೀಮತಿ ಲಕ್ಷ್ಮೀಅ–ರುಣ ಜನಾರ್ಧನ ರೆಡ್ಡಿ, ರಾಜ್ಯ ಕಾರ್ಯದರ್ಶಿ ಶರಣು ತಳ್ಳಿಕೇರಿ ಮತ್ತು ಪಕ್ಷದ ಮುಖಂಡರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ಗ್ರಾಮೀಣ ಭಾಗದಲ್ಲಿ ಅಭಿವೃದ್ಧಿ ಮರೀಚಿಕೆ, ಕಾಂಗ್ರೆಸ್ ಸಾಧನೆ ಶೂನ್ಯ

• ಮಲ್ಲಮ್ಮ ನುಡಿ ವಾರ್ತೆ ಬಂಗಾರಪೇಟೆ



ಬಂಗಾರಪೇಟೆ ನಗರವನ್ನು ಹೊರತುಪಡಿಸಿ ಕ್ಷೇತ್ರದ ಗ್ರಾಮೀಣ ಭಾಗದಲ್ಲಿ ಅಭಿವೃದ್ಧಿ ಮರಿಚಿಕೆಯಾಗಿದೆ ಎಂದು ಮಾಜಿ ಶಾಸಕ ಬಿಪಿ ವೆಂಕಟ ಮುನಿಯಪ್ಪ ಗುಡುಗಿದರು.

ನಗರದ ಹೊರವಲಯದಲ್ಲಿರುವ ಕೆಸಿಆರ್ ಕಲ್ಯಾಣ ಮಂಟಪದಲ್ಲಿ ತಾಲೂಕು ಬಿಜೆಪಿ ಹಾಗೂ ಜಿಲ್ಲಾ ಬಿಜೆಪಿ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಲಾಗಿದ್ದ ಎರಡು ದಿನಗಳ ಪಂಡಿತ್ ದೀನ್ ದಯಾಳ್ ಉಪಾಧ್ಯಾಯ ಪ್ರಶಿಕ್ಷಣ ಶಿಬಿರ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು. ಬಂಗಾರಪೇಟೆ ವಿಧಾನಸಭಾ ಕ್ಷೇತ್ರದಲ್ಲಿ ಪಟ್ಟಣ ಪ್ರದೇಶವನ್ನು ಹೊರತುಪಡಿಸಿ ಗ್ರಾಮೀಣ ಭಾಗದಲ್ಲಿ ಅಭಿವೃದ್ಧಿ ಮರೀಚೇಕೆಯಾಗಿದೆ. ಕಾಂಗ್ರೆಸ್ ಪಕ್ಷ ಒಡೆದ ಮನೆಯಾಗಿದ್ದು ಸಿದ್ದರಾಮಯ್ಯ ರಾಜೀನಾಮೆಯನ್ನು ನೀಡಿದ್ದಾರೆ ಯಾವ ಸಂದರ್ಭದಲ್ಲಿ ಚುನಾವಣೆ ಬರುತ್ತದೆ ಎಂಬುದನ್ನು ನಿರೀಕ್ಷಿಸಲು ಸಾಧ್ಯವಿಲ್ಲ ಈ ನಿಟ್ಟಿನಲ್ಲಿ ಬಿಜೆಪಿ ಕಾರ್ಯಕರ್ತರು ಸಂಘಟನಾತ್ಮಕವಾಗಿ ಕಾರ್ಯ ಪ್ರವೃತ್ತರಾಗಬೇಕು ಮುಂದಿನ 2028ರ ವಿಧಾನಸಭಾ ಚುನಾವಣೆಯಲ್ಲಿ 130ಕ್ಕೂ ಹೆಚ್ಚು ಬಿಜೆಪಿ ಅಭ್ಯರ್ಥಿಗಳು ಜಯಗಳಿಸಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

**ಸ್ತ್ರೀ ವಿರೋಧಿ ಕಾಂಗ್ರೆಸ್ ಗೆ ತಕ್ಕ ಉತ್ತರ ನೀಡಬೇಕು:** ಮಾಜಿ ಸಂಸದ ಎಸ್ ಮುನಿಸ್ವಾಮಿ ಮಾತನಾಡಿ, ಕೇಂದ್ರ ಬಿಜೆಪಿ ಸರ್ಕಾರ ಮಹಿಳೆಯರಿಗೆ ರಾಜಕೀಯ ಶಕ್ತಿ ತುಂಬಲು ನಾರಿ ಶಕ್ತಿ ಅದಿನಿಯಮ ತಿದ್ದುಪಡಿಯನ್ನು ಜಾರಿಗೆ ತಂದರೇ ಕಾಂಗ್ರೆಸ್ ಪಕ್ಷ ಸದನದಲ್ಲಿ ವಿರೋಧಿಸುವುದರ ಮೂಲಕ ಸ್ತ್ರೀ ವಿರೋಧಿ ನಿಲುವನ್ನು ಹೊಂದಿದೆ, ಮುಂದಿನ ದಿನಗಳಲ್ಲಿ ಮಹಿಳೆಯರು ಕಾಂಗ್ರೆಸ್ ಪಕ್ಷಕ್ಕೆ ತಕ್ಕ ಉತ್ತರ ನೀಡಲಿದ್ದಾರೆ ಎಂದರು.

**ಪ್ರಶಿಕ್ಷಣ ಒಂದು ಕೊಟ್ಟಡಿಗೆ ಸೀಮಿತವಲ್ಲ ಸಂಘಟನೆಗೆ ಪ್ರೇರಕ:** ಇಂದು ನಡೆಯುತ್ತಿರುವ ಪ್ರಶಿಕ್ಷಣ ತರಬೇತಿ ಶಿಬಿರ ಕೇವಲ ಒಂದು ಕೊಠಡಿಗೆ ಸೀಮಿತವಾಗಬಾರದು ಕೇಂದ್ರ ಹಾಗೂ ರಾಜ್ಯ ಸರ್ಕಾರದ ಎಲ್ಲಾ ಜನಪರ ಯೋಜನೆಗಳನ್ನು ಕಾರ್ಯಕರ್ತರು ಜನರ ಮನೆ ಬಾಗಿಲಿಗೆ ತಲುಪಿಸುವಂತಹ ಆಗಬೇಕು 8 ಅಥವಾ 10 ತಿಂಗಳ ಒಳಗಾಗಿ ಸ್ಥಳೀಯ ಸಂಸ್ಥೆಗಳ ಚುನಾವಣೆಗಳು ನಡೆಯಲಿದೆ ಹಾಗೂ ಮುಂದಿನ ಚುನಾವಣೆಯಲ್ಲಿ ಎನ್ ಡಿಎ ಮೈತ್ರಿಕೂಟ ಗೆಲ್ಲುವುದು ಬಹುತೇಕ ಖಚಿತ ಎಂದರು.

**ಕ್ಷೇತ್ರದಲ್ಲಿ ಕಾಂಗ್ರೆಸ್ ಸೋಲಿಸಲು ಸ್ವಪಕ್ಷದಲ್ಲೇ ಷಡ್ಯಂತರ:** ಕಾಂಗ್ರೆಸ್ ಪಕ್ಷದ ದುರಾಡಳಿತದಿಂದ ಬೇಸತ್ತ ಬಹುತೇಕ ಮುಖಂಡರನ್ನು ಈಗಾಗಲೇ ಭೇಟಿ ಮಾಡಲಾಗಿದೆ, ಈ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷವನ್ನು ಸೋಲಿಸಲು ನಿರ್ಧಾರ ಮಾಡಿದ್ದಾರೆ, ಚುನಾವಣೆ ಸಮೀಪಿಸುತ್ತಿದ್ದಂತೆ ಕಾಂಗ್ರೆಸ್ ಪಕ್ಷವನ್ನು ಒಳಗೊಂಡಂತೆ ವಿವಿಧ ರಾಜಕೀಯ ಪಕ್ಷದ ಹಿರಿಯ ಮುಖಂಡರು ಬಿಜೆಪಿ ಪಕ್ಷಕ್ಕೆ ಸೇರ್ಪಡೆ ಆಗಲಿದ್ದಾರೆ ಎಂದು ಸುಳಿವು ಬಿಟ್ಟುಕೊಟ್ಟರು.

**ಬಿಜೆಪಿ ಅಭಿವೃದ್ಧಿ ಕಾರ್ಯಗಳನ್ನು ಪ್ರಶ್ನೆ ಮಾಡುವ ನೈತಿಕತೆ ಕಾಂಗ್ರೆಸ್ ಗೆ ಇಲ್ಲ:** ಜಿಲ್ಲಾದ್ಯಂತ ಆಧುನಿಕರಣಕ್ಕೆ ಒಳಗೊಂಡಂತೆ ರೈಲ್ವೆ ನಿಲ್ದಾಣಗಳನ್ನು ಅಭಿವೃದ್ಧಿಪಡಿಸಲಾಗಿದೆ ಬಂಗಾರಪೇಟೆ ಪಟ್ಟಣದಿಂದ ವಿಕೋಟೆ ವರೆಗೆ ರಸ್ತೆ, ನ್ಯಾಯಾಲಯ, ಪಿಡಬ್ಲ್ಯೂಡಿ ಕಟ್ಟಡಗಳನ್ನು ನಿರ್ಮಾಣ ಮಾಡಲಾಗಿದೆ ಇದರೊಟ್ಟಿಗೆ ಈ ಭಾಗದ ಜನರ ನೀರಿನ ಬವಣೆ ನೀಗಿಸಲು ಯರಗೋಳ್ ಜಲಾಶಯಕ್ಕೆ ಶಂಕುಸ್ಥಾಪನೆಯನ್ನು ಮಾಡಿದ್ದು ಸಹ ಬಿಜೆಪಿ ಪಕ್ಷವಾಗಿದೆ ಹಾಗೂ ಪ್ರತಿಯೊಂದು ಗ್ರಾಮೀಣ ಭಾಗದಲ್ಲಿ ಸಿಸಿ ರಸ್ತೆಗಳ ನಿರ್ಮಾಣ ಸ್ವಚ್ಛ ಭಾರತ್ ಮಿಷನ್ ಯೋಜನೆಯ ಅಡಿಯಲ್ಲಿ ಶೌಚಾಲಯಗಳನ್ನು ಒದಗಿಸಿಕೊಟ್ಟಿದೆ ಕೇಂದ್ರ ಸರ್ಕಾರದ ಯೋಜನೆಗಳನ್ನು ರಾಜ್ಯ ಸರ್ಕಾರದ ಯೋಜನೆಗಳು ಎಂದು ಬಿಂಬಿಸಲು ಹೊರಟಿದ್ದಾರೆ ಇವರಿಗೆ ಬಿಜೆಪಿಯ ಅಭಿವೃದ್ಧಿ ಕಾರ್ಯಗಳ ಬಗ್ಗೆ ಪ್ರಶ್ನೆ ಮಾಡುವ ನೈತಿಕತೆ, ಕಾಂಗ್ರೆಸ್ ಪಕ್ಷಕ್ಕೆ ಇಲ್ಲ ಎಂದರು.

**ದೇಶದ ಅಭಿವೃದ್ಧಿಗೆ ಕಾಂಗ್ರೆಸ್ ಕೊಡುಗೆ ಶೂನ್ಯ:** ದೇಶವನ್ನು ಸುಧೀರ್ಘವಾಗಿ ಆಡಳಿತ ನಡೆಸಿದಂತಹ ಕಾಂಗ್ರೆಸ್ ಪಕ್ಷದ ಆಡಳಿತ ವ್ಯವಸ್ಥೆ ಹಾಗೂ ಬಿಜೆಪಿಯ ಆಡಳಿತ ವ್ಯವಸ್ಥೆಯನ್ನು ವಿಶ್ಲೇಷಣೆ ಮಾಡುವುದಾದರೆ ಕಾಂಗ್ರೆಸ್ ಪಕ್ಷದ ಕೊಡುಗೆ ಶೂನ್ಯ, ಪ್ರಧಾನಿ ಮೋದಿ ಅವರು ಸಬ್ ಕಸಾತ್ ಸಬ್ ಕವಿಕಾಸ್ ಸಬ್ ಕ ಪ್ರಯಾಸ್ ಸಬ್ ಕ ಪ್ರಯಾಸ್ ಎಂಬ ತತ್ವದಲ್ಲಿ ನಂಬಿಕೆಯಿಂದ ಹೊಂದಿದ್ದು ಯಾವುದೇ ಪಕ್ಷ ಜಾತಿ ಮತ ಭೇದಭಾವ ತಾರತಮ್ಯ ವಿಲ್ಲದೆ ದೇಶದ ಸರ್ವಾಂಗೀಣ ಅಭಿವೃದ್ಧಿಗೆ ಶ್ರಮಿಸುತ್ತಿದ್ದಾರೆ, ಎಂದರು.

ಜಿಲ್ಲಾಧ್ಯಕ್ಷ ಓಂ ಶಕ್ತಿ ಚಲಪತಿ ಮಾತನಾಡಿ ಇಡೀ ವಿಶ್ವದಲ್ಲೇ 21 ಕೋಟಿ ಸತ್ಯ ಸತ್ಯತೆಯನ್ನು ಹೊಂದಿರುವ ಏಕೈಕ ದೊಡ್ಡ ಪಕ್ಷ ಬಿಜೆಪಿಯಾಗಿದೆ ಇಂದು ದೇಶದಲ್ಲಿ 23 ರಾಜ್ಯಗಳಲ್ಲಿ ಅಧಿಕಾರದ ಚುಕ್ಕಾಣಿ ಹಿಡಿದು ಅಭಿವೃದ್ಧಿಯ ಪತದತ್ತ ಸಾಗುತ್ತಿದೆ ಇಂತಹ ಪಕ್ಷದ ಕಾರ್ಯಕರ್ತರಾಗಿ ಪ್ರತಿಯೊಬ್ಬರು ಸಂಘಟನಾತ್ಮಕವಾಗಿ ಶ್ರಮಿಸಬೇಕು ಆ ಮೂಲಕ 2028 ರಲ್ಲಿ ಬಿಜೆಪಿ ರಾಜ್ಯದಲ್ಲಿ ಅಧಿಕಾರದ ಗದ್ದುಗೆ ಹಿಡಿಯಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಿವಿ ಮಹೇಶ್, ಮಂಡಲ ಅಧ್ಯಕ್ಷ ಸಂಪಂಗಿ ರೆಡ್ಡಿ, ಜಿಲ್ಲಾ ಎಸ್ ಸಿ ಮೋರ್ಚಾ ಅಧ್ಯಕ್ಷ ಕಪಾಲಿ ಶಂಕರ್, ಮುಖಂಡರಾದ ಹೊಸರಾಯಪ್ಪ ಶಶಿ ಮಹೇಶ್ ಶ್ರೀನಿವಾಸ್ ಗೌಡ ಅಮರೇಶ್ ನಾಗೇಶ್ ಸೀತಾರಾಮಪ್ಪ ಇತರರು ಉಪಸ್ಥಿತರಿದ್ದರು.

# ಕಾಲಘಟ್ಟ ಚಿತ್ರದ ನೀನೇನೆ ನನ್ನ ದೇವತೆ ಹಾಡು ಭರ್ಜರಿ ಸದ್ದು



**ಬೆಂಗಳೂರು:** ದಿಕ್ಷೀತಾ ಎಂಟರ್ ಪ್ರೈಸಸ್ ಬೆಂಗಳೂರು ಅವರ "ಕಾಲಘಟ್ಟ" ಕನ್ನಡ ಚಲನಚಿತ್ರದ ಮೊದಲ ಲಿರಿಕಲ್ ಹಾಡು "ನೀನೇನೆ ನನ್ನ ದೇವತೆ" ಬಿಡುಗಡೆಯಾಗಿದ್ದು ಸಿನಿಪ್ರೇಕ್ಷಕರ ಮತ್ತು ಸಂಗೀತ ಪ್ರಿಯರ ಗಮನ ಸೆಳೆದು ಯ್ಯೂಟೂಬ್‌ದಲ್ಲಿ ಭರ್ಜರಿ ಸದ್ದು ಮಾಡುತ್ತಿದೆ.

ಹಾಡು ಕೇವಲ ಒಂದು ಮೆಲೋಡಿ ಅಲ್ಲ , ಅದು ನಮ್ಮ ಮಣ್ಣಿನ ಆತ್ಮವನ್ನು ಹೊತ್ತ ಭಾವನೆ. ಹಾಡಿನಲ್ಲಿ ಮೈಲಾರ, ಹರಕೆ, ಜಾಗಟೆ, ಕಾವೇರಿ ಹೀಗೆ ನಮ್ಮ ನಾಡಿನ ನಂಬಿಕೆ ಮತ್ತು ಸಂಸ್ಕೃತಿಯನ್ನು ಪ್ರತಿಬಿಂಬಿಸುವ ಪದಗಳನ್ನು ಬಳಸಲಾಗಿದೆ. ಈ ಹಾಡಿನ ಮೂಲಕ ಪ್ರೇಕ್ಷಕರಿಗೆ ತಮ್ಮ ಊರು, ತಮ್ಮ ಪ್ರೀತಿ, ತಮ್ಮ ನೆನಪುಗಳನ್ನು ನಮ್ಮ ನಾಡಿನ ಸಂಸ್ಕೃತಿಯನ್ನು ಹೊಸ ರೀತಿಯಲ್ಲಿ ಮರುಕಳಿಸುವ ಪ್ರಯತ್ನ ಮಾಡಲಾಗಿದೆ ಎಂದು ಯುವ ನಿರ್ದೇಶಕ ಕೆ. ಪ್ರಕಾಶ್ ಅಂಬಳೆ ತಿಳಿಸಿದ್ದಾರೆ.

ಚಿತ್ರದಲ್ಲಿ ನಾಯಕನಾಗಿ ಅಭಿದಾಸ್ ಹಾಗೂ ನಿತಿಲ್ ಅಭಿನಯಿಸಿದ್ದು, ನಾಯಕಿಯರಾಗಿ ಖುಷಿ ಮತ್ತು ಮೇಘ ಕಾಣಿಸಿಕೊಂಡಿದ್ದಾರೆ. ಚಿತ್ರರಂಗದ ಹಿರಿಯ ಕಲಾವಿದರಾದ ಶೋಭರಾಜ್, ಭವ್ಯ, ರಮೇಶ್ ಭಟ್, ಪ್ರಶಾಂತ್ ರವಿ , ಮಂಡ್ಯ ಸೀತಾರಾಮ್ ಪ್ರಮುಖ ಪಾತ್ರಗಳಲ್ಲಿ ಅಭಿನಯಿಸಿದ್ದಾರೆ. ತಾಂತ್ರಿಕ ವರ್ಗದಲ್ಲಿ ಛಾಯಾಗ್ರಹಣ-ಸದಾಶಿವ ಹಿರೇಮಠ-ರಾಜ್ ಕಡೂರ್, ಸಂಗೀತ ಎ.ಎಂ.ನೀಲ್, ಸಂಕಲನ ವೆಂಕಿ ಯುಡಿವಿ, ಸಾಹಸ ಮಾಸ್‌ಮಾದ, ಸಾಹಿತ್ಯ ನಮ್ ಖುಷಿ, ಸ್ಯಾಂಕಿ, ಸಿದ್ದುಶಿವರಾಮ್, ಪ್ರಸಾಧನ ವಿಜಯ್, ಪಿಆರ್ ಓ- ಹರೀಶ್ ಅರಸು, ಡಾ.ಪ್ರಭು ಗಂಜಿಹಾಳ, ಡಾ.ವೀರೇಶ್ ಹಂಡಿಗಿ, ಪ್ರಚಾರ ವಿನ್ಯಾಸ ಆರ್.ಕ್ರಿಯೇಟಿವ್, ನಿರ್ದೇಶನ ತಂಡ ಗಣೇಶ್,ರವಿ, ಸಾಗರ್ ಇದ್ದು, ಕಥೆ-ಚಿತ್ರಕಥೆ-ಸಂಭಾಷಣೆ ಜೊತೆಗೆ ನಿರ್ದೇಶನವನ್ನು ಕೆ. ಪ್ರಕಾಶ್ ಅಂಬಳೆ ಮಾಡಿದ್ದಾರೆ. ಲಯನ್ ಚಿಕ್ಕೇಗೌಡ, ಟಿ.ಸಿ ತಳಗವಾಡಿ ನಿರ್ಮಾಪಕರಾಗಿದ್ದಾರೆ. ಮುಂದಿನ ತಿಂಗಳು ರಾಜ್ಯಾದ್ಯಂತ ತೆರೆಗೆ ಬರಲಿರುವ "ಕಾಲಘಟ್ಟ" ಚಿತ್ರತಂಡಕ್ಕೆ ಸಿನಿಪ್ರೇಕ್ಷಕರ ಪ್ರೀತಿ, ಆಶೀರ್ವಾದ ಇರಲಿ ಎಂಬ ಆಶಯವನ್ನು ಚಿತ್ರ ತಂಡ ವ್ಯಕ್ತಪಡಿಸಿದೆ.

## ಮನೆ ಮಾರಾಟದ ಮೂಲ ದಾಖಲೆಗಳು ಕಳೆದುಹೋಗಿವೆ

**ಬೀದರ್:** ಮನೆ ಮಾರಾಟಕ್ಕೆ ಸಂಬಂಧಿಸಿದ ಮಹತ್ವದ ಮೂಲ ದಾಖಲೆಗಳು ಕಳೆದುಹೋಗಿರುವ ಘಟನೆ ನಡೆದಿದ್ದು, ದಾಖಲೆಗಳು ಸಿಕ್ಕಲ್ಲಿ ಸಾರ್ವಜನಿಕರು ಮಾಹಿತಿ ನೀಡುವಂತೆ ಮನವಿ ಮಾಡಲಾಗಿದೆ.

ಬೀದರ್ ಜಿಲ್ಲೆಯ ನಿವಾಸಿಯಾದ ಎಂ.ಡಿ. ಮುಕ್ತಾರ ಅಹ್ಮದ್ ಅವರು, ದಿನಾಂಕ 01-03-2026ರಂದು ಮಧ್ಯಾಹ್ನ ಸುಮಾರು 1:30 ಗಂಟೆಯ ವೇಳೆಗೆ ಬೀದರ್ ಬಸ್ ನಿಲ್ದಾಣದಲ್ಲಿ ಸಂಚರಿಸುತ್ತಿದ್ದ ವೇಳೆ ಮನೆ ಮಾರಾಟಕ್ಕೆ ಸಂಬಂಧಿಸಿದ ಮೂಲ ದಾಖಲೆಗಳು ಕಳೆದುಹೋಗಿರುವುದಾಗಿ ತಿಳಿಸಿದ್ದಾರೆ.

ಈ ಕುರಿತು ಅವರು ಈಗಾಗಲೇ ಬೀದರ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದು, ಪೊಲೀಸರು ಎಫ್‌ಐಆರ್ ದಾಖಲಿಸಿಕೊಂಡಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ.

**ಕಳೆದುಹೋದ ದಾಖಲೆಗಳ ವಿವರ ಹೀಗಿದೆ:**
**CMC No: 18.04.100/79**
**Sale Deed Document No: 1-1-0007-2015-16**

ಮೇಲ್ಕಂಡ ದಾಖಲೆಗಳು ಯಾರಿಗಾದರೂ ದೊರೆತಲ್ಲಿ ತಕ್ಷಣವೇ ಮೊಬೈಲ್ ಸಂಖ್ಯೆ 7349664450 ಗೆ ಸಂಪರ್ಕಿಸಿ ಮಾಹಿತಿ ನೀಡುವಂತೆ ಎಂ.ಡಿ. ಮುಕ್ತಾರ ಅಹ್ಮದ್ ಅವರು ಸಾರ್ವಜನಿಕರಲ್ಲಿ ವಿನಂತಿಸಿದ್ದಾರೆ.

## ಸಡಗರ ಸಂಭ್ರಮದ ಬಕ್ರೀದ್



**ಕೆಂಭಾವಿ:** ತ್ಯಾಗ ಮತ್ತು ಬಲಿದಾನದ ಸಂಕೇತವಾದ ಬಕ್ರೀದ್ (ಈದ್-ಉಲ್-ಅಝಾ) ಹಬ್ಬವನ್ನು ಪಟ್ಟಣದ ಮುಸ್ಲಿಂ ಬಾಂಧವರು ಗುರುವಾರ ಅತ್ಯಂತ ಸಡಗರ, ಸಂಭ್ರಮ ಮತ್ತು ಭಕ್ತಿಭಾವದಿಂದ ಆಚರಿಸಿದರು.

ಬೆಳಗ್ಗೆಯಿಂದಲೇ ಹೊಸ ಬಟ್ಟೆಗಳನ್ನು ಧರಿಸಿ ಸಜ್ಜಾಗಿದ್ದ ನೂರಾರು ಮುಸ್ಲಿಂ ಬಾಂಧವರು, ಪಟ್ಟಣದ ಈದ್ಗಾ ಮೈದಾನಕ್ಕೆ ಆಗಮಿಸಿದರು. ಮೈದಾನದಲ್ಲಿ ಏರ್ಪಡಿಸಲಾಗಿದ್ದ ಸಾಮೂಹಿಕ ಪ್ರಾರ್ಥನೆಯಲ್ಲಿ ಪಾಲ್ಗೊಂಡು ಪ್ರಾರ್ಥನೆ ಸಲ್ಲಿಸಿದರು.

ಪ್ರಾರ್ಥನೆಯ ನಂತರ ಪರಸ್ಪರ ಅಪ್ಪುಗೆ ನೀಡಿ 'ಈದ್ ಮುಬಾರಕ್' ಎಂದು ಶುಭಾಶಯಗಳನ್ನು ವಿನಿಮಯ ಮಾಡಿಕೊಂಡರು. ಧರ್ಮದ ಗಡಿಗಳನ್ನು ಮೀರಿ ಇತರ ಸಮುದಾಯದ ಸ್ನೇಹಿತರು ಮತ್ತು ಬಂಧುಗಳು ಆಗಮಿಸಿ ಮುಸ್ಲಿಂ ಬಾಂಧವರಿಗೆ ಶುಭಾಶಯ ಕೋರಿದರು.

ಹಬ್ಬದ ಹಿನ್ನೆಲೆಯಲ್ಲಿ ಪಟ್ಟಣದಾದ್ಯಂತ ಸಂಭ್ರಮದ ವಾತಾವರಣ ಮನೆಮಾಡಿತ್ತು. ಮನೆಯಲ್ಲಿ ವಿಶೇಷ ಅಡುಗೆಗಳನ್ನು ತಯಾರಿಸಿ, ಬಡವರಿಗೆ ದಾನ-ಧರ್ಮ ಮಾಡುವ ಮೂಲಕ ಬಕ್ರೀದ್ ಹಬ್ಬದ ಮಹತ್ವವನ್ನು ಸಾರಿದರು.

# ಕನ್ನಡ ಸಂಸ್ಕೃತಿ ಉಳಿವಿಗೆ ಎಲ್ಲರ ಸಹಕಾರ ಅಗತ್ಯ

- **ಮಲ್ಲಮ್ಮ ನುಡಿ ವಾರ್ತೆ ಬೀದರ್**



ಡಾ.ಬಿ.ಆರ್.ಅಂಬೇಡ್ಕರ್ ಸಾಂಸ್ಕೃತಿಕ ಪ್ರಚಾರ ಕಾರ್ಯ ಸಮಿತಿ ಮಳಚಾಪೂರ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ಇವರ ಸಂಯುಕ್ತಾಶ್ರಯದಲ್ಲಿ ಸಂಗೀತ ಮಹೋತ್ಸವ ಕಾರ್ಯಕ್ರಮವು ಮೇ 27, 2026ರಂದು ಸಂಜೆ 4 ಗಂಟೆಗೆ ನಗರದ ಡಾ. ಚೆನ್ನಬಸವ ಪಟ್ಟದೇವರು ರಂಗ ಮಂದಿರದಲ್ಲಿ ಯಶಸ್ವಿಯಾಗಿ ನಡೆಯಿತು.

ಕಾರ್ಯಕ್ರಮವನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಸಿದ್ರಾಮ ಶಿಂದೆ ಉದ್ಘಾಟಿಸಿ ಮಾತನಾಡಿ, ಡಾ.ಬಿ.ಆರ್. ಅಂಬೇಡ್ಕರ್ ಸಾಂಸ್ಕೃತಿಕ ಪ್ರಚಾರ ಕಾರ್ಯ ಸಮಿತಿ ಬೀದರ ಜಿಲ್ಲೆಯಲ್ಲಿ ಕಲೆ, ಸಾಹಿತ್ಯ ಮತ್ತು ಸಂಸ್ಕೃತಿಯನ್ನು ಉಳಿಸಿ ಬೆಳೆಸುವ ಮಹತ್ವದ ಕಾರ್ಯ ಮಾಡುತ್ತಿದೆ. ಸರ್ಕಾರವು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಮೂಲಕ ವಿವಿಧ ಸಂಘ ಸಂಸ್ಥೆಗಳಿಗೆ ಧನಸಹಾಯ ನೀಡುತ್ತಿದ್ದು, ಜಿಲ್ಲೆಯಲ್ಲಿ ಸಂಸ್ಕೃತಿಯನ್ನು ಗಟ್ಟಿಯಾಗಿ ಬೆಳೆಸುವ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಮಿತಿಯ ಅಧ್ಯಕ್ಷ ರಮೇಶ ದೊಡ್ಡಿ ವಹಿಸಿದ್ದರು.

ಮುಖ್ಯ ಅತಿಥಿಗಳಾಗಿ ಕರ್ನಾಟಕ ಜಾನಪದ ಅಕಾಡೆಮಿ ಸದಸ್ಯ ವಿಜಯಕುಮಾರ್ ಸೊನಾರೆ ಮಾತನಾಡಿ, ಕಲಾವಿದರು ಸ್ವಾಭಿಮಾನಿಗಳಾಗಬೇಕು. ಕಲೆ, ಸಾಹಿತ್ಯ ಹಾಗೂ ಸಂಸ್ಕೃತಿಗೆ ಗೌರವ ನೀಡಿದರೆ ಉತ್ತಮ ಬದುಕು ಸಾಧ್ಯವಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ಕರ್ನಾಟಕ ಬೌದ್ಧ ಸಾಹಿತ್ಯ ಪರಿಷತ್ತು ರಾಜ್ಯಾಧ್ಯಕ್ಷ ಎಸ್.ಎಂ. ಜನವಾಡಕರ್ ಮಾತನಾಡಿ, ಮಾನವ ಹುಟ್ಟಿದ್ದಾಗಲೇ ಜಾನಪದವು ಜನ್ಮ ತಾಳಿದೆ. ಜಾನಪದವನ್ನು ಉಳಿಸಿ ಬೆಳೆಸುತ್ತಿರುವವರು ಗ್ರಾಮೀಣ ಭಾಗದ ಜನರು ಎಂದು ಹೇಳಿದರು. ಇದೇ ವೇಳೆ ಗೀಗೀ ಪದ, ಕುಟ್ಟುವ ಹಾಡು ಹಾಗೂ ಬಿಸುವ ಹಾಡುಗಳನ್ನು ಹಾಡಿ ಎಲ್ಲರ ಮನರಂಜಿಸಿದರು.

ಕಾರ್ಯಕ್ರಮದಲ್ಲಿ ಕರ್ನಾಟಕ ಗಡಿ ಅಭಿವೃದ್ಧಿ ಪ್ರಾಧಿಕಾರದ ಸದಸ್ಯ ಸಂಜೀವಕುಮಾರ ಅತಿವಾಳೆ, ಸಾಹಿತ್ಯ ರತ್ನ ಅಣ್ಣಾಭಾವು ಸಾಠೆ ಟ್ರಸ್ಟ್ ಅಧ್ಯಕ್ಷ ಎಂ.ಎಸ್. ಮನೋಹರ್, ಹಿರಿಯ ಸಾಹಿತಿ ರಾಮಚಂದ್ರ ಗಣಾಪೂರ, ಬುದ್ಧ ಬೆಳಕು ಟ್ರಸ್ಟ್ ಅಧ್ಯಕ್ಷ ಮಹೇಶ ಗೋರನಾಳಕರ್, ಸರ್ಕಾರಿ ಪ್ರೌಢ ಶಾಲೆ ಮಳಚಾಪೂರ ಮುಖ್ಯಗುರು ಚಿತ್ರಕಲಾ ರಾಮಶೆಟ್ಟಿ, ಕರ್ನಾಟಕ ಜಾನಪದ ಪರಿಷತ್ತು ತಾಲೂಕು ಅಧ್ಯಕ್ಷ ಎಸ್.ಬಿ. ಕುಚಬಾಳ್ ಹಾಗೂ ಕರ್ನಾಟಕ ವನ್ಯಜೀವಿ ಮಂಡಳಿ ಸದಸ್ಯ ವಿನಯಕುಮಾರ ಮಾಳಗೆ ಭಾಗವಹಿಸಿದ್ದರು.

ಇದೇ ಸಂದರ್ಭದಲ್ಲಿ ಪತ್ರಿಕಾ ರಂಗದಲ್ಲಿ ಸೇವೆ ಸಲ್ಲಿಸುತ್ತಿರುವ ಪ್ರಜಾವಾಣಿ ಪತ್ರಿಕೆಯ ಜಿಲ್ಲಾ ವರದಿಗಾರ ಶಶಿಕಾಂತ ಶೆಂಬೆಳಿ, ವಾರ್ತಾಭಾರತಿ ಪತ್ರಿಕೆಯ ಜಿಲ್ಲಾ ವರದಿಗಾರ ಚಿತ್ರಶೇನ್ ಫುಲೆ ಹಾಗೂ ಕೆ.ಪಿ. ನ್ಯೂಸ್ ವರದಿಗಾರ ಪಪ್ಪುರಾಜ ಮೇತ್ರೆ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಸುಮಾರು 12 ಸಾಂಸ್ಕೃತಿಕ ತಂಡಗಳು ಭಾಗವಹಿಸಿದ್ದವು. ನಾಡಗೀತೆಗಳನ್ನು ರಾಜಕುಮಾರ ಕರುಣಾಕರ್, ಗಜಲ್ ಗಾಯನವನ್ನು ರಮೇಶ ಕೋಳಾರ, ವಚನ ಗಾಯನವನ್ನು ಸಂಜುಕುಮಾರ ಸ್ವಾಮಿ, ಶಾಸ್ತ್ರೀಯ ಸಂಗೀತವನ್ನು ಶಿವಾಜಿ ಸಗರ, ಕೋಲಾಟವನ್ನು ಕಾಶಿನಾಥ ಸಂಗಡಿಗರು, ಅಂಬೇಡ್ಕರ್ ಗೀತೆಗಳನ್ನು ಸಂತೋಷ ನಿಜಂಪೂರ ಸಂಗಡಿಗರು, ಕ್ರಾಂತಿ ಗೀತೆಗಳನ್ನು ಶೆಶರಾವ ಬೆಳಕುಣಿ ಸಂಗಡಿಗರು, ಜಾನಪದ ಗೀತೆಗಳನ್ನು ಮಲ್ಲಮ್ಮಾ ಜಾಂತಿ, ಭಜನೆ ಪದಗಳನ್ನು ಶಕುಂತಲಾ ಭವಾನಿ ಮಹಿಳಾ ಮಂಡಳಿ, ತತ್ವ ಪದಗಳನ್ನು ಅಕ್ಕಮಹಾದೇವಿ ಮಹಿಳಾ ಮಂಡಳಿ, ಸಂಪ್ರದಾಯ ಪದಗಳನ್ನು ನಾಗಮ್ಮಾ ಮರಖಲ ಸಂಗಡಿಗರು ಹಾಗೂ ಕುಟ್ಟುವ-ಬಿಸುವ ಪದಗಳನ್ನು ರೆಷ್ಮಾ ನಿಜಂಪೂರ ಸಂಗಡಿಗರು ನೇರವೇರಿಸಿದ್ದರು.

ಇದೇ ಸಂದರ್ಭದಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಉತ್ತಮ ಅಂಕ ಪಡೆದ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಶುಭಾಶಯ ಕೋರಲಾಯಿತು ಎಂದು ಸಮಿತಿಯ ಅಧ್ಯಕ್ಷ ರಮೇಶ ದೊಡ್ಡಿ ಮಳಚಾಪೂರ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತ್ಯಾಗ, ಬಲಿದಾನಗಳ ಸಂಕೇತವೇ ಬಕ್ರೀದ್

- **ಮಲ್ಲಮ್ಮ ನುಡಿ ವಾರ್ತೆ ಚಿಕ್ಕಬಳ್ಳಾಪುರ**



ಬಕ್ರೀದ್ ಅಥವಾ ಈದ್ ಉಲ್ ಅಧಾ 'ತ್ಯಾಗದ ಹಬ್ಬ'ವಾಗಿದ್ದು ಇದು ಇಸ್ಲಾಮಿಕ್ ಸಮುದಾಯವು ಆಚರಿಸುವ ಎರಡನೇ ಪ್ರಮುಖ ಹಬ್ಬವಾಗಿದೆ. ಗುರುವಾರ ಬಕ್ರೀದ್ ಹಬ್ಬವನ್ನು ಮುಸ್ಲಿಂ ಭಾಂಧವರು ಶ್ರದ್ಧಾ, ಭಕ್ತಿ ಮತ್ತು ಸಡಗರದಿಂದ ಚಿಕ್ಕಬಳ್ಳಾಪುರ ನಗರದಲ್ಲಿ ಆಚರಿಸಿದರು.

ಮುಸ್ಲಿಂ ಬಾಂಧವರ ತ್ಯಾಗದ ಹಬ್ಬವಾದ ಬಕ್ರೀದ್ ಪ್ರಯುಕ್ತ ಮುಸ್ಲಿಂ ಬಾಂಧವರು ನಗರದ ಬಿಬಿ ರಸ್ತೆ ಯಲ್ಲಿರುವ ಮಜೀದೆ ಕುರ್ದ್ ಮಸೀದಿ ಬಳಿ ಸಮಾವೇಶಗೊಂಡು ಅಲ್ಲಿಂದ ಸಾಮೂಹಿಕವಾಗಿ ಮೆರವಣಿಗೆಯಲ್ಲಿ ಬಿಬಿ ರಸ್ತೆ, ಸರ್.ಎಂ.ವಿ.ರಸ್ತೆ, ಗಂಗಮ್ಮನ ಗುಡಿ ರಸ್ತೆ ಮೂಲಕ ಎಂ ಜಿ ರಸ್ತೆ ತಲುಪಿ ಅಲ್ಲಿಂದ ಪ್ರಶಾಂತ ನಗರದಲ್ಲಿರುವ ಈದ್ಗಾ ಮೈದಾನದಲ್ಲಿ ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು.

ಪವಿತ್ರ ಹಬ್ಬದ ಪ್ರಯುಕ್ತ ಸಾಮೂಹಿಕ ನಡೆದ ಪ್ರಾರ್ಥನೆಯಲ್ಲಿ ವೃದ್ಧರೂ ಮತ್ತು ಮಕ್ಕಳು ಪಾಲ್ಗೊಂಡರು. ನಂತರ ಅಲ್ಲಿಯೆ ಈಧ್ಗಾ ಮೈದಾನದ ಎದುರಲ್ಲಿನ ಸಮಾಧಿ ಸ್ಥಳಗಳಿಗೆ ತೆರಳಿ ತಮ್ಮವರ ಸಮಾಧಿಗಳಿಗೆ ಪುಷ್ಪಗಳನ್ನು ಮತ್ತು ದೂಪ ಹಾಕಿ ಪ್ರಾರ್ಥನೆ ಮಾಡಿದರು. ಸಾಮೂಹಿಕ ಪ್ರಾರ್ಥನೆಯಲ್ಲಿ ಪಾಲ್ಗೊಂಡ ಮುಸ್ಲಿಂ ಬಾಂಧವರು ಪರಸ್ಪರ ಅಪ್ಪಿಕೊಂಡು ಶುಭಾಶಯ ತಿಳಿಸಿ ಕೊಂಡರು. ಈಧ್ಗಾ ಮೈದಾನ ಪ್ರಾಥನೆಯಲ್ಲಿ ಪಾಲ್ಗೊಳ್ಳಲು ಆಗದವರು ನಗರದ ಆರಕ್ಕೂ ಹೆಚ್ಚು ಮಸೀಧಿಗಳಲ್ಲಿ ಪ್ರಾರ್ಥನೆ ಸಲ್ಲಿಸಿದರು.

ಬಕ್ರೀದ್ ಹಬ್ಬದ ದಿನವನ್ನು ಪ್ರವಾದಿ ಇಬ್ರಾಹಿಂ ಅವರು ತಮ್ಮ ಮಗನ ತ್ಯಾಗವನ್ನು ಸ್ಮರಿಸುವ ಸಲುವಾಗಿ ಪ್ರತಿವರ್ಷ ಈದ್ ಉಲ್ ಅಧಾವನ್ನು ಆಚರಿಸಲಾಗುತ್ತದೆ. ಪ್ರವಾದಿಯವರು ತಮ್ಮ ಮಗನ ತಲೆಯನ್ನು ಅಲ್ಲಾಹುನಿಗೆ ಅರ್ಪಿಸಿದಾಗ, ಅಲ್ಲಾ ಅವರ ಭಕ್ತಿಗೆ ಮೆಚ್ಚಿ ಅದರ ಪ್ರತಿಫಲವಾಗಿ ಆ ಮಗುವಿನ ತಲೆಯ ಬದಲು ಕುರಿಮರಿಯ ತಲೆಯನ್ನಾಗಿ ಪರಿವರ್ತಿಸಿದರು. ಅದಕ್ಕಾಗಿಯೇ ಬಕ್ರೀದ್ ಹಬ್ಬದಂದು ಮುಸ್ಲಿಂ ಕುಟುಂಬಗಳು ಗಂಡು ಕುರಿ ಅಥವಾ ಮೇಕೆಯನ್ನು ದೇವರಿಗೆ ಬಲಿ ನೀಡುವ ಮೂಲಕ ಆಚರಣೆ ಮಾಡಲಾಗುತ್ತದೆ ಎಂದು ಮುಸ್ಲಿಂ ಮುಖಂಡ ಸಾದಿಕ್‌ಪಾಶ ತಿಳಿಸಿದರು.

ಈ ಹಬ್ಬವನ್ನು ಆಚರಿಸುವ ಜನರು ಹೊಸ ಬಟ್ಟೆಗಳನ್ನು ಧರಿಸಿ ದೇವರಿಗೆ ಪ್ರಾರ್ಥನೆ ಸಲ್ಲಿಸುತ್ತಾರೆ. ಇದು ಹಬ್ಬದ ಮತ್ತು ಪ್ರಾರ್ಥನೆಯ ಸಮಯವಾಗಿದೆ. ಅಲ್ಲಿ ಮುಸ್ಲಿಮರು ಮಸೀದಿಗಳಲ್ಲಿ ಅಥವಾ ಸಾರ್ವಜನಿಕ ಸ್ಥಳಗಳಲ್ಲಿ ಈದ್ ಪ್ರಾರ್ಥನೆಗಳನ್ನು ಮಾಡುತ್ತಾರೆ, ಧರ್ಮೋಪದೇಶಗಳನ್ನು ಕೇಳುತ್ತಾರೆ ಮತ್ತು ಕುಟುಂಬ ಮತ್ತು ಸ್ನೇಹಿತರೊಂದಿಗೆ ಶುಭಾಶಯಗಳು ಮತ್ತು ಉಡುಗೊರೆಗಳನ್ನು ವಿನಿಮಯ ಮಾಡಿಕೊಳ್ಳುತ್ತಾರೆ. ಈದ್ ಅಲ್-ಅಧಾ ಆಧ್ಯಾತ್ಮಿಕ ಪ್ರತಿಬಿಂಬ, ನಿಸ್ವಾರ್ಥತೆ ಮತ್ತು ಸಮುದಾಯದ ಸಮಯ. ಇದು ಇಸ್ಲಾಮಿಕ್ ಕ್ಯಾಲೆಂಡರ್‌ನಲ್ಲಿ ಮಹತ್ವದ ಘಟನೆಯಾಗಿದೆ ಮತ್ತು ಸ್ಥಳೀಯ ಸಂಪ್ರದಾಯಗಳನ್ನು ಅವಲಂಬಿಸಿ ಅದರ ಆಚರಣೆಯು ಬದಲಾಗುತ್ತದೆ. ಹಬ್ಬದ ಸಮಯದಲ್ಲಿ, ಪ್ರವಾದಿ ಇಬ್ರಾಹಿಂ ಅವರ ವಿಧೇಯತೆ ಮತ್ತು ಅಲ್ಲಾಗೆ ಭಕ್ತಿಯ ಸಂಕೇತವಾಗಿ ಒಂದು ಪ್ರಾಣಿ, ಸಾಮಾನ್ಯವಾಗಿ ಮೇಕೆ ಅಥವಾ ಕುರಿಯನ್ನು ತ್ಯಾಗ ಮಾಡಲಾಗುತ್ತದೆ. ನಂತರ ಮಾಂಸವನ್ನು ಕುಟುಂಬ, ಸ್ನೇಹಿತರು ಮತ್ತು ನಿರ್ಗತಿಕರಿಗೆ ಹಂಚಲಾಗುತ್ತದೆ. ಕುರ್ಬಾನಿ (ತ್ಯಾಗ) ಕ್ರಿಯೆಯನ್ನು ಈದ್ ಪ್ರಾರ್ಥನೆಯ ನಂತರ ನಡೆಸಲಾಗುತ್ತದೆ. ಇದನ್ನು ಈದ್‌ನ ಬೆಳಿಗ್ಗೆ ಹತ್ತಿರದ ಮಸೀದಿ ಅಥವಾ ಈಧ್ಗಾ ಮೈದಾನದಲ್ಲಿ ಸಭೆಯಲ್ಲಿ ನಡೆಸಲಾಗುತ್ತದೆ ಎಂದು ಹೇಳಿದರು.

ಈಧ್ಗಾ ಮೈದಾನದಲ್ಲಿ ನಡೆದ ಸಾಮೂಹಿಕ ಪ್ರಾರ್ಥನೆಯಲ್ಲಿ ಜಮಾತೆ ಏಲೇ ಇಸ್ಲಾಂನ ಆಡಳಿತಾಧಿಕಾರಿ ಹೈದರ್‌ಅಲಿ, ಬಾಬಾಜಾನ್, ಮಹಮದ್ ದಾವೂದ್, ಸೈಯದ್ ಅಜರ್ ಸೇರಿದಂತೆ ಸಹಸ್ರಾರು ಮುಸ್ಲಿಮರು ಬಾಗವಹಿಸಿದ್ದರು.

# ಚತುರ ಚತುರ್ಭುಜ ಚಾಣಾಕ್ಷ ಮಾಸ್ ಲೀಡರ್ ಪದತ್ಯಾಗ..!

**ವರ್ತಮಾನ-ಮನನ**
● ಡಾ.ಎಂ.ಮಹ್ಮದ್ ಬಾಷ ಗೂಳ್ಯಂ
ಪ್ರಧಾನ ಸಂಪಾದಕ, ಬೆಂಗಳೂರು

ಸಿದ್ದರಾಮಯ್ಯ ಸಿಎಂ ಪದವಿಗೆ ಕೊನೆಗೂ ವಿದಾಯ ಹೇಳಿದ್ದಾರೆ. ಅವರ ಶತೃಗಳಿಗೆ ಇದು ಖುಷಿ ಕೊಟ್ಟಿರಬಹುದು. ಆದರೆ ಅವರ ಅಸಂಖ್ಯ ಅಭಿಮಾನಿಗಳಿಗೆ ಭಾವೋದ್ವೇಗದ ಕ್ಷಣ ಇದು..!, ಕರ್ನಾಟಕ ರಾಜಕಾರಣದ ವರ್ಣರಂಜಿತ ರಾಜಕಾರಣಿಯಾಗಿ, ಮಾಸ್ ಲೀಡರ್ ಆಗಿ ಅಹಿಂದ ಕಣ್ಮಣಿಯಾಗಿದ್ದ ಸಿದ್ದರಾಮಯ್ಯ ತಮ್ಮ ಎರಡನೇ ಅವಧಿ ಪೂರ್ಣವಾಗುವ ಮೊದಲೇ ವಿದಾಯ ಹೇಳುತ್ತಿರುವುದು ನಿಜಕ್ಕೂ ಸಮಾಜವಾದಿಗಳಿಗೆ ಬೇಸರವಾಗಿದೆ. ವಿದಾಯವೆಂದರೆ; ಸಕ್ರಿಯ ರಾಜಕಾರಣದ ಹೊಸ್ತಿಲಿನಿಂದ ಆಚೆ ಹೆಜ್ಜೆ ಇಡುವ ದಿನ. ಬದಲಿಗೆ ನಾನ ಸಕ್ರಿಯ ರಾಜಕೀಯದಲ್ಲೇ ಇರುವೆ ಎಂದು ಖುದ್ದು ಸಿದ್ರಾಮಯ್ಯ ಹೇಳಿದ್ದರೂ, ಸಿಎಂ ಆಗಿದ್ದ ಆ ಖದರು ಇರದು. ದೌಲತ್ತು ಕಣ್ಮರೆ. ಬಹುಪರಾಕ್ ಗಿರಾಕಿಗಳು ಹತ್ತಿರವೂ ಸುಳಿಲಾರರು. ವಿಚಿತ್ರ ನೋಡಿ; ಸಿದ್ದರಾಮಯ್ಯನವರು ತಮ್ಮ ಜನ್ಮಜಾತ ಸ್ವಭಾವಕ್ಕೆ ವಿರುದ್ಧವಾದ ನಿಲುವನ್ನು ತಾಳಿದ್ದು..! ಯಾಕಂದರೆ; ಸದಾ ಪ್ರತಿಭಟನಾತ್ಮಕ ಮನೋಭಾವದ, ತಿರುಗಿ ಬೀಳುವ ಧೋರಣೆ-ಯ ಅವರು ಈ ಬಾರಿ ಮಾತ್ರ ರಾಹುಲ್ ಗಾಂಧಿಯವರು ಕೇಳಿದ ತಕ್ಷಣ ರಾಜೀನಾಮೆ ನೀಡುವುದಕ್ಕೆ ಒಂದಿನಿತೂ ಪ್ರತಿರೋಧ ತೆ-ೂರದೇ ಒಪ್ಪಿರುವುದು..! ತಾವು ಎರಡು ಬಾರಿ ಮುಖ್ಯಮಂತ್ರಿಯಾಗುವುದಕ್ಕೆ ಕಾರಣರಾದ ರಾಹುಲ್ ಗಾಂಧಿಯವರ ಮಾತನ್ನು ಮೀರಲಾರೆ ಎಂಬ ಕೃತಜ್ಞತಾ ನಡೆ ಇರಲೂ ಬಹುದು.

**ಅಧಿಕಾರ ಯಾರಿಗೂ ಶಾಶ್ವತ ಅಲ್ಲ..!**

ಇದರಾಚೆಗೂ ಸಿದ್ದರಾಮಯ್ಯ ಅವರು ಲೋಹಿಯಾ, ಸಮಾಜವಾದದ ಮೌಲ್ಯಕ್ಕೆ ಒತ್ತು ನೀಡಿದವರು. ಕೋಮುವಾದಿಗಳ ವಿರುದ್ಧ ಧ್ವನಿ ಎತ್ತಿದವರು. ಅಹಿಂದ ರಾಜಕೀಯದ ಹೊಸ ಅಧ್ಯಾಯಕ್ಕೆ ನಾಂದಿ ಹಾಡಿದವರು. ಈ ರಾಜ್ಯ ಕಂಡ ಪ್ರಾಮಾಣಿಕ-ಮೌಲ್ಯಾಧಾರಿತ ರಾಜಕಾರಣಿ. ಸಣ್ಣಪುಟ್ಟ ಲೋಪಗಳ ಹೊರತಾಗಿ ಅವರು ಮುಸ್ಲಿಂ ಪರ ಎಂಬ ಬಿಡುಬೀಸು ಹೇಳಿಕೆಗಳಿಗೂ ಹೆದರಿದವರಲ್ಲ. ಬಡವರ ಪರ ಎನ್ನುವುದರಲ್ಲಿ ಎರಡು ಮಾತಿಲ್ಲ. ದಾರ್ಷ್ಟ್ಯದ ಮಾತುಗಳ ಆಚೆಯೂ ಅಂತರಂಗದಲ್ಲೊಬ್ಬ ಭಾವಜೀವಿ. ಸಾಹಿತ್ಯ, ಸಂಗೀತ, ಸಾಮಾಜಿಕ ಹೋರಾಟ, ಸಮ ಸಮಾಜವಾದದ ಕಲ್ಪನೆ ಸೇರಿದಂತೆ ಜನಪರ ರಾಜಕಾರಣಕ್ಕೆ ಬೇಕಾದ ಕಾಂಪ್ಯಾಕ್ಟ್ ವ್ಯಕ್ತಿತ್ವ ಸಿದ್ದರಾಮಯ್ಯನವರ ವೈಶಿಷ್ಟಗಳಲ್ಲಿ ಒಂದು. ಬಹುಶಃ ಸಿದ್ದರಾಮಯ್ಯ ಈ ರಾಜ್ಯದ ಕೊನೆಯ ಮಾಸ್ ಲೀಡರ್ ಕೂಡ. ಇನ್ನು ಮುಂದೆ ಕರ್ನಾಟಕದಲ್ಲಿ ಜನರ ಮಧ್ಯದಿಂದ ಮೂಡಿ ಬಂದ ಜನಾಕರ್ಷಕ ಹಾಗೂ ಜನಪ್ರಿಯ ವ್ಯಕ್ತಿಗಳು ಮುಖ್ಯಮಂತ್ರಿಯಾಗುವುದು ಕಷ್ಟ. ಕರ್ನಾಟಕದ ರಾಜಕಾರಣದಲ್ಲಿ ಹಲವು ದಾಖಲೆ ಹಾಗೂ ವಿವಾದಗಳ ಸರದಾರನಾಗಿದ್ದ ಸಿದ್ದರಾಮಯ್ಯನವರ ಸಕ್ರಿಯ ಚುನಾವಣಾ ರಾಜಕಾರಣ ಇಲ್ಲಿಗೆ ಅಂತ್ಯ ಎನ್ನುತ್ತಾರೆ ಅವರ ಆಪ್ತರು. ಭವಿಷ್ಯವೆಲ್ಲಾ ಪರದೆ-ಯ ಹಿಂದಿನ ಸೂತ್ರದಾರಿಕೆ? ಇರಲೂ ಬಹುದು.

ದೇವೇಗೌಡರು, ಯಡಿಯೂರಪ್ಪ, ರಾಮಕೃಷ್ಣ ಹೆಗಡೆ, ಅರಸ್ ಇವರನ್ನು ಬಿಟ್ಟರೆ ತಳಮಟ್ಟದಿಂದ ಬಂದ ಬಹಳ ದೊಡ್ಡ ರಾಜಕೀಯ ಜೀವನ ನಡೆಸಿರುವ ಏಕೈಕ ನಾಯಕ ಎಂದರೆ ಸಿದ್ಧರಾಮಯ್ಯ. ಮಾಸ್ ಲೀಡರ್ ಎಂದರೆ ಒಂದರ್ಥದಲ್ಲಿ ಹೆಗಡೆ ಹಾಗೂ ಅರಸ್ ಮಾತ್ರ. ಯಾಕೆಂದರೆ ಜಾತಿ ಬಲವಿಲ್ಲದೆ ರಾಜ್ಯಾದ್ಯಂತ ಹೆಸರು ಮಾಡಿದ್ದ ಗೌರವಗಳಿಸಿದ್ದವರಲ್ಲಿ ಅವರೇ ಮೊದಲಿಗರು. ದೇವೇಗೌಡರು ಹಾಗೂ ಯಡಿಯೂರಪ್ಪನವರಿಗೆ ಅವರ ಸಮುದಾಯದ ಅತಿದೊಡ್ಡ ಬೆಂಬಲವಿತ್ತು. ದೇವೇಗೌಡರ ಒಂದು ಮಾತಿಗೆ ಲಕ್ಷಗಟ್ಟಲೆ ಒಕ್ಕಲಿಗರು ಬೆಂಗಳೂರಿಗೆ ಬರುತ್ತಿದ್ದರು, ಯಡಿಯೂರಪ್ಪನವರು ಹಸಿರು ಶಾಲು ತಿರುವಿದರೆ ರೈತರೂ ಸೇರಿ, ಲಿಂಗಾಯತರು ಮರುಮಾತಿಲ್ಲದೆ ಮತ ಚಲಾಯಿಸುತ್ತಿದ್ದರು.

ಸಿದ್ದರಾಮಯ್ಯ ಅವರಿಗೂ ಪ್ರಬಲ ಕುರುಬ ಸಮುದಾಯದ ಬೆಂಬಲದ ಮೂಲಕವೇ ರಾಜ್ಯಾದ್ಯಂತ ವರ್ಚಸ್ಸುಗಳಿಸಿದ್ದರೂ ರಾಜಕೀಯದಲ್ಲಿ ಅವರು ಚತುರ, ಚತುರ್ಭುಜ, ಚಾಣಾಕ್ಷ ಎನ್ನುವುದರಲ್ಲಿ ಡೌಟೇ ಇಲ್ಲ..! ಕೇವಲ ಕಾಂಗ್ರೆಸ್ ಸೇರಿದ ಮೇಲೆ ಅವರು ಮೂಲ ಕಾಂಗ್ರೆಸಿಗರನ್ನು ಹ್ಯಾಂಡಲ್ ಮಾಡಿದ ರೀತಿ ಮಾತ್ರ ಸೂಪರ್. ಮೊದಲ ಅವಧಿಯಲ್ಲೇ ಹಳೆಯ ಕಾಂಗ್ರೆಸ್ ಶಾಸಕರು ಹೆಚ್ಚಿನ ಸಂಖ್ಯೆಯಲ್ಲಿ ಇದ್ದಾಗಲೂ, ಅವರು ತಮ್ಮ ಸ್ಥಾನವನ್ನು ಗಟ್ಟಿ ಮಾಡಿಕೊಂಡ ಬಗೆ ಅಮೋಘ. ಅದು ಡಿ.ಕೆ. ಶಿವಕುಮಾರ್ ಅವರನ್ನು ಅಧಿಕಾರದಿಂದ ದೂರ ಇಟ್ಟದ್ದು ಇರಬಹುದು, ಪರಮೇಶ್ವರ್ ಅವರನ್ನು ಗೃಹಖಾತೆಯಲ್ಲಿ ಕಟ್ಟಿ ಹಾಕಿದ್ದು ಇರಬಹುದು, ಲಿಂಗಾಯತರ ಮತಗಳನ್ನು ಒಡೆದದ್ದು..ಹೀಗೆ ಯಾವುದೇ ಇರಲಿ ತನ್ನ ಹಿಂದೆ ಶಾಸಕರು ಗಟ್ಟಿಯಾಗಿ ನಿಲ್ಲುವ ಹಾಗೆ ಮಾಡಿಕೊಂಡದ್ದು ದಾಖಲಾರ್ಹ ವಿಷಯ.



ಬಹುಶಃ ಡಿ.ಕೆ.ಶಿ ಒಬ್ಬರೇ ತನಗೆ ಕಾಂಗ್ರೆಸ್ ಪಕ್ಷದಲ್ಲಿರುವ ನೇರ ಸ್ಪರ್ಧಿ ಎನ್ನುವುದನ್ನು ಬಹುಬೇಗ ಗಮನಿಸಿದ್ದರು. ಆದರೆ ಡಿ.ಕೆ.ಶಿ ಹೈ ಕಮಾಂಡ್ ಬಳಿಯೂ ಅತ್ಯಂತ ಜನಪ್ರಿಯ ಎನ್ನುವುದನ್ನು ಮರೆತಿದ್ದರೋ, ನೆನಪಿದ್ದರೂ ನಿಸ್ಸಹಾಕರಾಗಿದ್ದರೋ..! ಆರಂಭದಲ್ಲಿ ಡಿ.ಕೆ.ಶಿ ಅವರು, ರಾಜೀವ್ ನೆರವಿನಿಂದ ನೆಲೆನಿಂತರು. ಸೋನಿಯಾ, ಪ್ರಿಯಾಂಕ ಗಾಂಧಿಯವರ ಬೆಂಬಲದಿಂದ ಸರ್ಕಾರದೊಳಗೂ ಭದ್ರವಾಗಿ ತಳ ಊರಿದ್ದರು. ಪಕ್ಷದ ರಾಜ್ಯಾಧ್ಯಕ್ಷರೂ ಆದರು. ಈಗಲೂ ಹೈಕಮಾಂಡ್ ಬೆಂಬಲದಿಂದ ಸಿದ್ದು ಕುರ್ಚಿ ಮೇಲೆ ಕೂತರು. ಸಿದ್ದರಾಮಯ್ಯ ಮೌನವಾಗಿರುವಷ್ಟು ಪ್ರಭಾವಬೀರಿದ್ದರು. ರಾಜಕಾರಣವೆಂದರೆ ಇದೇ ಇರಬಹುದೆ..?

ಯಾವಾಗ ಅಪ್ಪ, ಅಪ್ಪನಿಂದ ಮಗ ಎಂದು ರಾಜಕಾರಣವಾಯಿತೋ ಆಗ ಹೀಗೆ ತಮ್ಮ ರಾಜಕೀಯ ಶಕ್ತಿಯಿಂದ ಮೇಲೇಳುವ ನಾಯಕರು ಕಂಡುಬರುವುದು ದೂರದ ಮಾತಾಗಿದೆ. ರಾಜಕೀಯ ಕೇವಲ ಹಣ ಚೆಲ್ಲಿ ಅಧಿಕಾರಗಳಿಸುವ ಆಟವಾಗಿದೆಯೇ ಹೊರತು ರಾಜಕೀಯ ನಡೆಗಳಿಂದ ವಿರೋಧಿಗಳನ್ನು ಮಟ್ಟ ಹಾಕುತ್ತಾ ನಾಯಕತ್ವ ಹಿಡಿಯುವ, ಹೊಸ ಹೊಸ ವೋಟ್ ಬ್ಯಾಂಕ್ ರೂಪಿಸುತ್ತಾ ಬೆಳೆಯುವ ನಾಯಕರು ಕಾಣೆಯಾಗಿದ್ದಾರೆ. ಅದೇನೇ ಇರಲಿ; ಸಿದ್ದರಾಮಯ್ಯರಂಥ ಅತ್ಯಂತ ಮುತ್ಸದ್ಧಿ ರಾಜಕಾರಣಿಯೂ ರಾಹುಲ್ ತರಹದ ಅನುಭವವಿಲ್ಲದ ನಾಯಕರ ಮಾತು ಕೇಳಬೇಕಾಗಿ ಬಂದದ್ದು ಕುಟುಂಬ ರಾಜಕಾರಣಕ್ಕೆ ಸಾಕ್ಷಿ. ಇದೀಗ ಸಿದ್ದರಾಮಯ್ಯ ಮಾಜಿ ಮುಖ್ಯಮಂತ್ರಿ. ಡಿ.ಕೆ.ಶಿ ಎರಡು ವರ್ಷ ಏನು ಸಾಧಿಸುತ್ತಾರೆ ಎನ್ನುವ ಪ್ರಶ್ನೆಗೆ ಈಗಲೇ ಉತ್ತರಿಸುವುದು ಕಷ್ಟ.

ಸಿದ್ದರಾಮಯ್ಯನವರ ಅಧಿಕೃತ ನಿವಾಸ "ಕಾವೇರಿ"ಯಲ್ಲಿ ಅನೇಕ ಸಲ ಅವರನ್ನು ಭೇಟಿ ಮಾಡಿದ್ದೆ. ಡೈಲಿ ನ್ಯೂಸ್ ದೀಪಾವಳಿ ವಿಶೇಷಾಂಕ ಹಾಗೂ ಮಲ್ಲಮ್ಮ ನುಡಿ ಯುಗಾದಿ ವಿಶೇಷ ಅವರಿಂದಲೇ ಲೋಕಾರ್ಪಣೆಗೊಳಿಸಿದ್ದೆ. ಆಗಲೂ ಸಿದ್ದರಾಮಯ್ಯನವರ ಅದೇ ಆಪ್ತತೆ, ತಾಯಿಯಂಥ ಮಾತೃವಾತ್ಸಲ್ಯ ಮರೆಯಲಾಗದು. ಮಿತಭಾಷಿ, ಒಂದು ಕಾಲದ ಸಹೋದ್ಯೋಗಿ ಪ್ರಭಾಕರ ಅವರ ಮಂದಹಾಸ ಸದ್ಯ ಕಣ್ಮರೆಯಾಗಿರುವುದು ನಿಜಕ್ಕೂ ಬೇಸರ. ರಾಜಕೀಯದಲ್ಲಿ ಇವೆಲ್ಲ ಸಹಜ. ನನ್ನ ವೃತ್ತಿಜೀವನದಲ್ಲಿ ಎಂಟು ಮುಖ್ಯಮಂತ್ರಿಗಳ ಅಧಿಕಾರ ಗ್ರಹಣ-ಅಧಿಕಾರ ತ್ಯಾಗ ಎರಡನ್ನೂ ಹತ್ತಿರದಿಂದ ನೋಡಿದ್ದೇನೆ. ಇಂಥ ಭಾವನಾತ್ಮಕ ಸನ್ನಿವೇಶಗಳಿಗೂ ಸಾಕ್ಷಿಯಾಗಿದ್ದೇನೆ. ಅಧಿಕಾರದಿಂದ ನಿರ್ಗಮಿಸುವ ಸಂದಿಗ್ಧ ಸಮಯದಲ್ಲೂ ಸಂತುಲಿತ ಮನಸ್ಥಿತಿಯನ್ನು ಕಾಯ್ದುಕೊಂಡು ಮುತ್ಸದ್ಧಿತನವನ್ನು ಮೆರೆದು, ಕೊಟ್ಟ ಮಾತಿನಂತೆ ನಡೆದು, ತನ್ನ ಪಕ್ಷಕ್ಕೆ ಕಿಂಚಿತ್ತೂ ಧಕ್ಕೆ ಬಾರದ ರೀತಿಯಲ್ಲಿ, ಜನರ ಅಭಿಮಾನದ ಹೊರೆಯನ್ನು ಹೊತ್ತು ಹೋದ ಮುಖ್ಯಮಂತ್ರಿಗಳು ವಿರಳ. ಅಂಥವರಲ್ಲಿ ಸಿದ್ದರಾಮಯ್ಯ ಅಗ್ರಗಣ್ಯ ನಾಯಕ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.
PRGI NO. 120927
(RNINO:KARKAN/2011/48371)